ಕನ್ನಡ ದಿನಪತ್ರಿಕೆ
05 ಮಾರ್ಚ್ । ಮಂಗಳವಾರ
05 MARCH 2024

# ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನಟ್ಟಿ
BELAGAVI VARADI KANNADA DAILY NEWS PAPER
ಗಡಿ ಜಿಲ್ಲೆಯ ಧ್ವನಿ...

₹4 | ಸಂಪುಟ – 5 ಸಂಚಿಕೆ – 15 ಪುಟ – 4 | RNI . KARKAN/2020/79084 | ADVRT EMAIL. BELAGAVIVARADIEDITOR@GMAIL.COM | NEWSBELAGAVI@GMAIL.COM | 9900332089 | REG.NO G-2/PMG/KA/NK/BM/139/2024-26

## ರಾಮೇಶ್ವರಂ ಕೆಫೆ ಬಾಂಬ್ ಸ್ಫೋಟ; ಪ್ರಕರಣ ದಾಖಲಿಸಿಕೊಂಡ NIA




ಬೆಂಗಳೂರು: ಮಾರ್ಚ.01ರಂದು ಬೆಂಗಳೂರಿನ ರಾಮೇಶ್ವರಂ ಕೆಫೆಯಲ್ಲಿ ಸಂಭವಿಸಿದ ಬಾಂಬ್ ಸ್ಫೋಟ ಪ್ರಕರಣಕ್ಕೆ ಸಂಬಂಧಿಸಿ ಎನ್ಐಎ ಪ್ರಕರಣವನ್ನು ದಾಖಲಿಸಿಕೊಂಡಿದೆ. ಆದಷ್ಟು ಬೇಗ ತನಿಖೆ ಆರಂಭಿಸಲಿದೆ. ಮತ್ತೊಂದೆಡೆ ಪೊಲೀಸರು, ಗೃಹ ಸಚಿವರು ಆದಷ್ಟು ಬೇಗ ಆರೋಪಿಯನ್ನು ಬಂಧಿಸುವ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಇನ್ನೆರಡು ದಿನಗಳಲ್ಲಿ ಅಧಿಕೃತವಾಗಿ ತನಿಖೆ ಕೈಗೆತ್ತಿಕೊಳ್ಳಲಿದ್ದಾರೆ. ಗಂಕಂ ಅಡಿ ಹೆಚ್ಎಎಲ್ ಠಾಣೆಯಲ್ಲಿ ಪ್ರಕರಣ ದಾಖಲಾಗಿ–ತ್ತು. ಆದ್ರೆ ಪ್ರಕರಣದ ಗಂಭೀರತೆ ಅರಿತು ಎನ್ಐಎ ಪ್ರಕರಣ ದಾಖಲಿಸಿಕೊಂಡಿದೆ. ಬಾಂಬ್ ಸ್ಫೋಟ ಸಂಭವಿಸಿದ ಬೆಂಗಳೂ–ರಿನ ರಾಮೇಶ್ವರಂ ಕೆಫೆಗೆ ಭಾನುವಾರ ಭೇಟಿ ನೀಡಿದ ಸಿಸಿಬಿ ಪೊಲೀಸರು ಸ್ಥಳ ಮಹಜರು ನಡೆಸಿದ್ರು. ಸಿಸಿಬಿ ತನಿಖಾಧಿಕಾರಿ ನವೀನ್ ಕುಲಕರ್ಣಿ ಮತ್ತು ಟೀಂ, ರಾಮೇಶ್ವರಂ ಕೆಫೆ ಮ್ಯಾನೇಜರ್, ಸಿಬ್ಬಂದಿ ಸಮ್ಮುಖದಲ್ಲಿ ಮಹಜರು ನಡೆಸಿದ್ರು. ಬಾಂಬರ್ ಎಂಟ್ರಿಯಾದ ಸ್ಥಳ, ಓಡಾಡಿದ್ದ ಸ್ಥಳದಲ್ಲಿ ಪರಿಶೀಲನೆ ಮಾಡಿದ್ರು. ಜೊತೆಗೆ ಶಂಕಿತರನ್ನ ಆಡುಗೋಡಿ ಟೆಕ್ನಿಕಲ್ ಸೆಲ್ಗೆ ಕರೆತಂದು ವಿಚಾರಣೆ ನಡೆಸಿದ್ರು.

ಬೆಂಗಳೂರಿನ ರಾಮೇಶ್ವರಂ ಕೆಫೆಯ ಬಾಂಬ್ ಸ್ಫೋಟ ಪ್ರಕರಣದ ಆರೋಪಿ ಪತ್ತೆಗಾಗಿ ಪೊಲೀಸರು ಹರಸಾಹಸ ಪಡ್ತಿದ್ದಾರೆ. ಟೈಮ್ ಟ್ರಾವೆಲ್ ರೀತಿ ಎರಡೂ ಕಡೆ ಹುಡುಕಾಟ ನಡೆಸ್ತಿದ್ರೂ, ಆರೋಪಿಯ ಜಾಡು ಮಾತ್ರ ಸಿಗ್ತಿಲ್ಲ. ಆರೋಪಿ ಪತ್ತೆ ಆಗದಿದ್ರೆ ಪೊಲೀಸರು ರೇಖಾಚಿತ್ರ ಬಿಡುಗಡೆಗೆ ಮುಂದಾಗಿದ್ದಾರೆ.

## 'ರಾಜ್ಯ ಮಹಿಳಾ ಜೆಡಿಎಸ್ ಅಧ್ಯಕ್ಷೆ'ಯಾಗಿ 'ರಶ್ಮಿ ರಾಮೇಗೌಡ' ಪದಗ್ರಹಣ



ಬೆಂಗಳೂರು: ರಾಜ್ಯ ಜೆಡಿಎಸ್ ನ ಮಹಿಳಾ ಘಟಕದ ಅಧ್ಯಕ್ಷೆಯಾಗಿ ರಶ್ಮಿ ರಾಮೇಗೌಡ ಅವರು ಅಧಿಕಾರ ಸ್ವೀಕರಿಸಿದರು. ಜೆಡಿಎಸ್ ಪಕ್ಷದ ಕಚೇ–ರಿಯಲ್ಲಿ ನಡೆದಂತ ಕಾರ್ಯಕ್ರಮದಲ್ಲಿ ರಾಜ್ಯ ಮಹಿಳಾ ಜೆಡಿಎಸ್ ಅಧ್ಯಕ್ಷೆಯಾಗಿ ರಶ್ಮೀ ರಾಮೇಗೌಡ ಪದಗ್ರಹಣ ಮಾಡಿದರು.

ಮಾಜಿ ಪ್ರಧಾನಿಗಳು ಹಾಗೂ ಜೆಡಿಎಸ್ ರಾಷ್ಟ್ರೀಯ ಅಧ್ಯಕ್ಷರಾದ ಹೆಚ್.ಡಿ.ದೇವೇಗೌಡ ಅವರ ಸಮಕ್ಷಮದಲ್ಲಿ ರಶ್ಮಿ ರಾಮೇಗೌಡ ಅವರು ರಾಜ್ಯ ಜೆಡಿಎಸ್ ಅಧ್ಯಕ್ಷರಾಗಿ ನಿಕಟಪೂರ್ವ ಅಧ್ಯಕ್ಷರಾದ ಲೀಲಾದೇವಿ ಆರ್ ಪ್ರಸಾದ್ ಅವರಿಂದ ಅಧಿಕಾರ ಸ್ವೀಕರಿಸಿದರು. ಪಕ್ಷದ ಹಿರಿಯ ನಾಯಕಿ ಶ್ರೀಮತಿ ಸುನೀತಾ ಚೌಹಾಣ್ ಸೇರಿದಂತೆ ಹಲವಾರು ನಾಯಕಿಯರು ಈ ಸಂದರ್ಭದಲ್ಲಿ ಹಾಜರಿದ್ದರು.

## ರೈಲು ಹಳಿಗೆ ಬಿದ್ದು ಒಂದೇ ಕುಟುಂಬದ ಮೂವರು ಆತ್ಮಹತ್ಯೆ



ಗದಗ: ಸಾಲಬಾಧೆಯಿಂದ ಮನನೊಂದು ಒಂದೇ ಕುಟುಂಬದ ಮೂವರು ಆತ್ಮಹತ್ಯೆಗೆ ಶರಣಾದ ಘಟನೆ ಗದಗ ಜಿಲ್ಲೆ ಲಕ್ಷ್ಮೇಶ್ವರ ತಾಲೂಕಿನಲ್ಲಿ ನಡೆದಿದೆ.

ಗೋನಾಳ ಗ್ರಾಮದ ತೇಲಿ ಕುಟುಂಬದ ಮೂವರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಮಂಜುನಾಥ ತೇಲಿ (26), ಸಾವಕ್ಕ ತೇಲಿ (40), ರೇಣವ್ವ (39) ಆತ್ಮಹತ್ಯೆಗೆ ಶರಣಾಗಿದ್ದಾರೆ. ಹಾವೇರಿ ಜಿಲ್ಲೆಯ ಯಲವಿಗಿ ರೈಲು ನಿಲ್ದಾಣದ ಬಳಿ ಸೂಸೈಡ್ ಮಾಡಿಕೊಂಡಿದ್ದಾರೆ. ರೈಲು ಹಳಿಗೆ ಬಿದ್ದು ತಾಯಿ ಹಾಗೂ ಮಗ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಮಗನನ್ನು ರಕ್ಷಣೆ ಮಾಡಲು ಹೋಗಿದ್ದಾಗ ತಾಯಿ ಬಲಿಯಾಗಿದ್ದಾಳೆ.

ಅತ್ತ ಮಗ ಮಂಜುನಾಥ ತೇಲಿ ಹಾಗೂ ತಾಯಿ ರೇಣವ್ವಾ ಆತ್ಮಹತ್ಯೆ ಮಾಡಿಕೊಂಡ ವಿಚಾರ ತಿಳಿದಂತೆ ಸಾವಕ್ಕ ತೇಲಿ ಮನೆಯಲ್ಲಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಸ್ಥಳಕ್ಕೆ ರೈಲ್ವೆ ಪೊಲೀಸರ ಆಗಮಿಸಿ ಪರಿಶೀಲನೆ ನಡೆಸಿದ್ದಾರೆ.

# ಶ್ರೀಮಂತರಿಗಾಗಿ ಕೆಲಸ ಮಾಡುವುದು ಬಿಜೆಪಿ, ಬಡವರ ಪರ ಇರುವುದು ಕಾಂಗ್ರೆಸ್: ಲಕ್ಷ್ಮೀ ಹೆಬ್ಬಾಳಕರ್





ಬೆಳಗಾವಿ: ಭಾರತೀಯ ಜನತಾ ಪಾರ್ಟಿಗೆ ಕೇವಲ ಶ್ರೀಮಂತ ಉದ್ಯಮಿಗಳ ಪರವಾಗಿ ಕೆಲಸ ಮಾಡುವುದು ಗೊತ್ತು. ಆದರೆ ಇಂದಿರಾ ಗಾಂಧಿಯವರಿಂದ ಹಿಡಿದು ಸಿದ್ದರಾಮಯ್ಯ ಅವರ ವರೆಗೆ ಕಾಂಗ್ರೆಸ್ ಪಕ್ಷದ ಎಲ್ಲರೂ ಬಡವರ ಪರ ಕೆಲಸ ಮಾಡುತ್ತ ಬಂದಿದ್ದಾರೆ. ಬಡವ–ರಿಗಾಗಿ ನೂರಾರು ಯೋಜನೆಗಳನ್ನು ಜಾರಿಗೊಳಿಸಿದ್ದಾರೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದ್ದಾರೆ.

ಬೆಳಗಾವಿ ಗ್ರಾಮೀಣ ಕ್ಷೇತ್ರದ ಉಚಗಾಂವ ಗ್ರಾಮದಲ್ಲಿ ತಾಲೂಕ ಆಡಳಿತ, ತಾಲೂಕ ಪಂಚಾಯತ ಬೆಳಗಾವಿ ಹಾಗೂ ಗ್ರಾಮೀಣ ಸ್ಥಳೀಯ ಸಂಸ್ಥೆಗಳ ಸಂಂ–ಯುಕ್ತಾಶ್ರಯದಲ್ಲಿ ಸೋಮವಾರ ಕರ್ನಾಟಕ ಸರ್ಕಾರದ ಗ್ಯಾರಂಟಿ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲು ಹಮ್ಮಿಕೊಂಡಿದ್ದ ಗ್ಯಾರಂಟಿ ಯೋಜನೆಗಳ ಸಮಾವೇಶ ಉದ್ಘಾಟಿಸಿ, ಬೃಹತ್ ಜನಸ್ತೋಮವನ್ನು ಉದ್ದೇಶಿಸಿ ಅವರು ಮಾತನಾಡಿದರು.

ರಾಜ್ಯ ಕಾಂಗ್ರೆಸ್ ಸರ್ಕಾರ ಬಡ ಜನರ ಸಬಲೀಕರಣಕ್ಕಾಗಿ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿದ್ದು, ಮಧ್ಯವರ್ತಿಗಳಿಲ್ಲದೆ ಜಾರಿಯಾಗುತ್ತಿರುವ ಅಪರೂಪದ ಯೋಜನೆ ಇದಾಗಿದೆ. ಈ ಗ್ಯಾರಂಟಿ ಯೋಜನೆಗಳ ಕುರಿತು ಜನಜಾಗೃತಿ ಮೂಡಿಸುವ ಉದ್ದೇಶದಿಂದ ರಾಜ್ಯದ ಎಲ್ಲ ಕಡೆ ಗ್ಯಾರಂಟಿ ಸಮಾವೇಶಗಳನ್ನು ಆಯೋಜಿಸಲಾಗುತ್ತಿದೆ. ಗ್ಯಾರಂಟಿ ಯೋಜನೆಗಳು ಎಷ್ಟರಮಟ್ಟಿಗೆ ಜನರಿಗೆ ತಲುಪಿದೆ? ಯೋಜನೆಯಿಂದ ಜನರಿಗೆ ಹೇಗೆ ಪ್ರಯೋಜನವಾಗುತ್ತಿದೆ. ಯಾರಿಗಾದರೂ ತಲುಪದಿದ್ದರೆ ಅದಕ್ಕೆ ಕಾರಣವೇನು ಎನ್ನುವುದನ್ನೆಲ್ಲ ತಿಳಿಯುವುದಕ್ಕಾಗಿ ಎಲ್ಲ ಕಡೆ ಸಮಾವೇಶ ಮಾಡಲಾಗುತ್ತಿದೆ ಎಂದು ಅವರು ಹೇಳಿದರು.

ಬಿಜೆಪಿಯವರಿಗೆ ಕೇವಲ ಅಂಬಾನಿ, ಅದಾನಿಯಂತಹ ಶ್ರೀಮಂತ ಉದ್ಯಮಿಗಳಿಗೆ ಯೋಜನೆಗಳನ್ನು ಸಂತೋಷವಾಗುತ್ತದೆ. ಆದರೆ ಬಡವರಿಗಾಗಿ ಕೆಲಸ ಮಾಡುವುದು ಕಾಂಗ್ರೆಸ್ ಪಕ್ಷ. ಇಂದಿರಾಗಾಂಧಿ ಕಾಲದಿಂದ ಇಂದಿನ ಸಿದ್ದರಾಮಯ್ಯನವರವರೆಗೆ ಬಡವರಿಗಾಗಿ ಕಾಂಗ್ರೆಸ್ ಎಷ್ಟೊಂದು ಯೋಜನೆಗಳನ್ನು ಜಾರಿಗೆ ತಂದಿದೆ ಎನ್ನುವುದನ್ನು ನೋಡಿ. ಈ ಯೋಜನೆಗಳಿಂದ ಜನರ ಜೀವನಕ್ಕೆ ಅನುಕೂಲವಾಗುತ್ತಿದೆ ಎಂದ ಅವರು, ಕಾಂಗ್ರೆಸ್ ತನ್ನ 6ನೇ ಗ್ಯಾರಂ–ಟಿಯಾಗಿರುವ ಅಂಗನವಾಡಿ, ಆಶಾ ಕಾರ್ಯಕರ್ತೆಯರ ಗೌರವಧನ ಏರಿಸುವುದಕ್ಕೂ ಬದ್ಧವಾಗಿದೆ ಎಂದು ತಿಳಿಸಿದರು.

ನಾನು ರಾಜ್ಯದ ಎಲ್ಲೇ ಹೋದರೂ ನನ್ನ ಗ್ರಾಮೀಣ ಕ್ಷೇತ್ರವನ್ನು ಸ್ಮರಿಸಿ, ಸುಳೇಬಾವಿಯ ಮಹಾಲಕ್ಷ್ಮೀ, ಉಚಗಾಂವ್ ಮಳೆಕರ್ಣಿಕಾ ದೇವರಿಗೆ ವಂದಿಸಿ ಭಾಷಣ ಆರಂಭಿಸುತ್ತೇನೆ. ನಿಮ್ಮ ಆಶೀರ್ವಾದದಿಂದಾಗಿ 7 ಕೋಟಿ ಜನರಿಗೆ ಮಂತ್ರಿಯಾಗಿ ನಾನು ಕೆಲಸ ಮಾಡಲು ಸಾಧ್ಯವಾಗಿದೆ ಎಂದು ಸಚಿವರು ತಿಳಿಸಿದರು.

ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಮಾತನಾಡಿ, ಕಾಂಗ್ರೆಸ್ ಪಕ್ಷ ಸದಾ ಬಡವರ, ಜನಸಾಮಾನ್ಯರ ಪರವಾಗಿ ನಿಲ್ಲುವ ಪಕ್ಷ. ಆದರೆ ಬಿಜೆಪಿಯವರು ಯಾರ ಪರ ನಿಂತಿದ್ದಾರೆ ಎನ್ನುವುದನ್ನು ತಿಳಿಸಬೇಕು. ಶ್ರೀಮಂತ ಉದ್ಯಮಿಗಳ ಪರವಾಗಿ ಮಾತ್ರ ನಿಲ್ಲುವುದು ನಿಮ್ಮ ಧ್ಯೇಯವೇ ಎಂದು ಪ್ರಶ್ನಿಸಿದರು.

## 42 ಕೋಟಿ ರೂ. ಮೌಲ್ಯದ ಡ್ರಗ್ ದಂಧೆ: ಸಬ್ ಇನ್ಸ್ಪೆಕ್ಟರ್ ಅರೆಸ್ಟ್



ಮಹಾರಾಷ್ಟ್ರ: 42 ಕೋಟಿ ಮೌಲ್ಯದ ಡ್ರಗ್ ದಂಧೆಯಲ್ಲಿ ಸಬ್ ಇನ್ಸ್ಪೆಕ್ಟರ್ ಕೂಡ ಭಾಗಿಯಾಗಿರೋ ಘಟನೆ ಮಹಾರಾಷ್ಟ್ರದ ಪುಣೆಯ ಪಿಂಪ್ರಿ ಚಿಂಚ್ವಾಡ್ನಲ್ಲಿ ಬೆಳಕಿಗೆ ಬಂದಿದೆ. ವಿಕಾಸ್ಶೆಲ್ಕೆ ಎಂಬ ಸಬ್ ಇನ್ಸ್ಪೆಕ್ಟರನ್ನು ಪ್ರಕರಣಕ್ಕೆ ಸಂಬಂಧಿಸಿದಂತೆ ಅರೆಸ್ಟ್ ಮಾಡಲಾಗಿದೆ.

ಪಿಂಪ್ರಿ ಚಿಂಚ್ವಾಡ್ನ ನಗರ ಪೊಲೀಸ್ ವೈಭವ್ ಶಿಂಗಾರೆಯವರು ನಮಾಮಿ ಝಾ ಎಂಬ ಪೆಡ್ಲರ್ನಿಂದ 42 ಕೋಟಿ ಮೌಲ್ಯದ 42 ಕೆಜಿ ಎಂಡಿ ಡ್ರಗ್ ಅನ್ನು ಶುಕ್ರವಾರ ವಶಪಡಿಸಿಕೊಂಡಿದ್ದರು. ಬಳಿಕ ಆತನನ್ನು ವಿಚಾರಣೆಗೆ ಒಳಪಡಿಸಿದ್ದರು. ಈ ವೇಳೆ ಪ್ರಕರಣದಲ್ಲಿ ಸಬ್ ಇನ್ಸ್ಪೆಕ್ಟರ್ ಹೆಸರನ್ನು ಡ್ರಗ್ ಪೆಡ್ಲರ್ ಬಾಯಿ ಬಿಟ್ಟಿದ್ದಾನೆ.

ನಿಗ್ಡಿ ಪೊಲೀಸ್ ಠಾಣೆಯಲ್ಲಿ ವಿಕಾಸ್ ಶಿಲ್ಕೆ ಎಂಬ ಹೆಸರಿನ ಸಬ್ ಇನ್ಸ್ಪೆಕ್ಟರ್ ಈ ಕೃತ್ಯದಲ್ಲಿ ಭಾಗಿಯಾಗಿರೋದು ಬೆಳಕಿಗೆ ಬಂದಿದೆ. ಇದೇ ವೇಲೆ ಡ್ರಗ್ ಪೆಡ್ಲರ್ನಿಂದ 2.32 ಕೆಜಿ ಮೆಫಾಡ್ರೋನ್ ಬ್ಯಾಗ್ ಅನ್ನು ವಶಪಡಿಸಿಕೊಂಡಿದ್ದಾರೆ.

ಡ್ರಗ್ ಪ್ರಕರಣಕ್ಕೆ ಸಂಬಂಧಿಸಿದಂತೆ ಈಗಾಗಲೇ ಇಬ್ಬರನ್ನು ಪೊಲೀಸರು ಬಂಧಿಸಿದ್ದಾರೆ. ಎನ್ಡಿಪಿಎಸ್ ಕಾಯ್ಕೆಯಡಿ ಸೆಕ್ಷನ್ 8(ಸಿ), 21 (ಸಿ) ಮತ್ತು 22 (ಸಿ) ಅಡಿಯಲ್ಲಿ ನಿಗ್ಡಿ ಪೊಲೀಸ್ ಠಾಣೆಯಲ್ಲಿ ಕೇಸ್ ದಾಖಲಾಗಿದೆ.

## ಬೆಂಗಳೂರಿನಲ್ಲಿ ಬಾಂಬ್ ಇಟ್ಟವರು ದೇಶದ್ರೋಹಿಗಳು



ಬೆಳಗಾವಿ: "ಬಾಂಬ್ ಇಟ್ಟವರು ದೇಶದ್ರೋಹಿಗಳು. ಅವರಿಗೆ ಯಾವುದೇ ಜಾತಿ, ಧರ್ಮ, ವರ್ಗವಿಲ್ಲ. ಮನುಷ್ಯತ್ವ, ಕರುಣೆ ಇಲ್ಲದವರನ್ನು ನಾವು ಯಾರೂ ಕೂಡ ಸಮರ್ಥಿಸಿಕೊಳ್ಳಲು ಸಾಧ್ಯವಿಲ್ಲ" ಎಂದು ವಿಧಾನಸಭೆ ಸ್ಪೀಕರ್ ಯು.ಟಿ.ಖಾದರ್ ಹೇಳಿದರು.

ಬೆಂಗಳೂರಿನಲ್ಲಿ ಬಾಂಬ್ ಬ್ಲಾಸ್ಟ್ ವಿಚಾರಕ್ಕೆ ಬೆಳಗಾವಿಯಲ್ಲಿಂದು ಮಾಧ್ಯಮಗಳ ಜೊತೆಗೆ ಮಾತನಾಡಿದ ಅವರು, "ಶಾಂತಿಯುತ, ನಿರ್ಭಯ ಸಮಾಜದಲ್ಲಿ ಮಾತ್ರ ಅಭಿವೃದ್ಧಿ ಮತ್ತು ಜನ ನೆಮ್ಮದಿಯಿಂದ ಜೀವನ ನಡೆಸಲು ಸಾಧ್ಯವಾಗುತ್ತದೆ. ಶಾಂತಿಯುತ ರಾಜ್ಯವನ್ನು ಹದಗೆಡಿಸಲು ಪ್ರಯತ್ನಿಸಿದವರನ್ನು ಮಟ್ಟ ಹಾಕಲು ಸರ್ಕಾರ ಕ್ರಮ ಕೈಗೊಂಡಿದೆ. ತಪ್ಪಿತಸ್ಥರನ್ನು ಪತ್ತೆ ಹಚ್ಚಬೇಕು. ಇದರ ಹಿಂದೆ ಯಾರಿದ್ದಾರೆ? ಅವರ ಉದ್ದೇಶ ಏನಾಗಿತ್ತು ಎಂಬುದನ್ನು ಬಯಲು ಮಾಡಬೇಕು. ಅದೇ ರೀತಿ ಮುಂದೆ ಈ ರೀತಿ ಕೃತ್ಯ ಮಾಡಲು ಯಾರಿಗೂ ಧೈರ್ಯ ಬಾರದಂತಹ ಶಿಕ್ಷೆ ವಿಧಿಸಬೇಕು" ಎಂದು ಆಗ್ರಹಿಸಿದರು.

ಬಾಂಬ್ ಇಟ್ಟವರಿಗೆ ಕಠಿಣ ಶಿಕ್ಷೆ ಆಗಬೇಕು: "ಈ ಸಂದರ್ಭದಲ್ಲಿ ಯಾರೂ ಸಹ ರಾಜಕಾರಣ ಮಾಡಬಾರದು. ಆ ರೀತಿ ಮಾಡಿದರೆ ಅದು ರಾಜ್ಯದ ಹಿತಾಸಕ್ತಿಗೆ ಅನುಗುಣವಾಗಿ ಇರುವುದಿಲ್ಲ. ಈಗ ನಾವೆಲ್ಲ ಒಗ್ಗಟ್ಟಾಗಿರಬೇಕು. ಅದನ್ನು ಬಿಟ್ಟು ನಮ್ಮ ನಡುವೆ ಭಿನ್ನಾಭಿಪ್ರಾಯ ಮೂಡಿದರೆ, ದುಷ್ಕರ್ಮಿಗಳು ಅದರ ಲಾಭವನ್ನು ಪಡೆದುಕೊಳ್ಳುತ್ತಾರೆ. ಇನ್ನು ಯಾರೋ ಒಬ್ಬ ಮಾಡಿದ ತಪ್ಪಿಗೆ ಅವರ ಇಡೀ ವರ್ಗವನ್ನು ಗುರಿಯಾಗಿಸುವುದು ಸರಿಯಲ್ಲ. ಹಾಗಾಗಿ, ನಾವೆಲ್ಲಾ ಒಗ್ಗಟ್ಟಾಗಿರಬೇಕು. ಆ ದುಷ್ಕರ್ಮಿಗಳನ್ನು ಪತ್ತೆ ಹಚ್ಚಬೇಕು. ಬಾಂಬ್ ಇಟ್ಟವರಿಗೆ ಕಠಿಣ ಶಿಕ್ಷೆ ಆಗಬೇಕು" ಎಂದರು.

ಕಾಂಗ್ರೆಸ್ ಸರ್ಕಾರ ಇದ್ದಲ್ಲಿ ಇಂತಹ ಘಟನೆಗಳು ನಡೆಯುತ್ತವೆ ಎಂಬ ಮಾಧ್ಯಮಗಳ ಪ್ರಶ್ನೆಗೆ ಪ್ರತಿಕ್ರಿಯಿಸಿ, "ರಾಜಕೀಯವಾಗಿ ನಾನು ಏನೂ ಮಾತಾಡೋದಿಲ್ಲ.

ಕರ್ನಾಟಕ ಜನತೆ, ಕನ್ನಡಿಗರು ಎಲ್ಲರೂ ಒಗ್ಗಟ್ಟಾಗಿ, ಅಣ್ಣ ತಮ್ಮಂದಿರಂತೆ ಜೀವನ ನಡೆಸುತ್ತೇವೆ. ಇದರ ನಡುವೆ ನಮ್ಮನ್ನು ಬೇರ್ಪಡಿಸಲು ಯಾರಿಗೂ ಅವಕಾಶ ನೀಡಬಾರದು" ಎಂದು ಅಭಿಪ್ರಾಯಪಟ್ಟರು.

ಬೆಳಗಾವಿ ಸುವರ್ಣ ವಿಧಾನಸೌಧದಲ್ಲಿ ಶಾಸಕರ ಭವನ ಕಟ್ಟುವ ವಿಚಾರಕ್ಕೆ ಪ್ರತಿಕ್ರಿಯಿಸಿದ ಯು.ಟಿ. ಖಾದರ್, "ಇದರಕ್ಕೆ ಎರಡ್ಮೂರು ಪ್ಲಾನ್ ಮಾಡಿಕೊಂಡಿದ್ದೇವೆ. ಇಲಾಖೆ ಅಧಿಕಾ–ರಿಗಳ ಜೊತೆಗೆ ಡಿಸಿಯವರು ಚರ್ಚೆ ಮಾಡಿದ್ದಾರೆ. ನಾನು ಮತ್ತು ವಿಧಾನ ಪರಿಷತ್ ಸಭಾಪತಿ ಅವರು ಕುಳಿತು ಚರ್ಚೆ ಮಾಡಿ, ಶಾಸಕರ ಭವನಕ್ಕೆ ಅಂತಿಮ ರೂಪುರೇಷೆ ಸಿದ್ಧಪಡಿಸುತ್ತೇವೆ" ಎಂದು ತಿಳಿಸಿದರು.

## ಗುತ್ತಿಗೆದಾರರು ರಾಜಕೀಯದಿಂದ ದೂರವಿರಬೇಕು: ಡಿಸಿಎಂ ಡಿ.ಕೆ.ಶಿವಕುಮಾರ್



ಬೆಂಗಳೂರು: ಗುತ್ತಿಗೆದಾರರಿಗೆ ಅಧಿಕಾರಿಗಳ ಮತ್ತು ರಾಜಕಾರಣಿಗಳ ಕಿರುಕುಳ ಇರುವುದು ನನ್ನ ಗಮನದಲ್ಲಿದೆ. ಗುತ್ತಿಗೆದಾರರು ರಾಜಕೀಯದಿಂದ ದೂರವಿರಬೇಕು ಎಂದು ಡಿಸಿಎಂ ಡಿ.ಕೆ ಶಿವಕುಮಾರ್ ಹೇಳಿದ್ದಾರೆ.

ಅರಮನೆ ಮೈದಾನದಲ್ಲಿ ನಡೆದ ಕರ್ನಾಟಕ ರಾಜ್ಯ ಗುತ್ತಿಗೆದಾರರ ಸಂಘದ ಸಮ್ಮೇಳನದಲ್ಲಿ ಮಾತನಾಡಿದ ಅವರು, ಮುಂದಿನ 9 ವರ್ಷಗಳ ಕಾಲ ನಾವೇ ಅಧಿಕಾರದಲ್ಲಿ ಇರುತ್ತೇವೆ. ನಿಮ್ಮ ಸಮಸ್ಯೆಗಳನ್ನು ನಾವೇ ಬಗೆಹರಿಸುವುದು. ನಾವೇ ಪರಿಹಾರ ನೀಡುವುದು. ಈ ವಿಚಾರ ನೆನಪಿನಲ್ಲಿ ಇಟ್ಟುಕೊಳ್ಳಿ. ಗುತ್ತಿಗೆದಾರರಿಲ್ಲದೆ ಸರ್ಕಾರ ನಡೆಸಲು ಸಾಧ್ಯವಿಲ್ಲ. ನಾವು ಸರ್ಕಾರ ನಡೆಸುತ್ತೇವೆ, ನೀವು ಕಾಮಗಾರಿ ನಡೆಸುತ್ತೀರಿ. ಇದೆರಡೂ ದೇಶದ ಕೆಲಸಗಳು. ನೀವೆಲ್ಲ ರಾಜ್ಯದ ಅಭಿವೃದ್ಧಿಯ ಭಾಗಗಳು. ಹಿಂದಿನ ಸರ್ಕಾರ ಸರಿಯಾದ ಯೋಜನೆ ಮಾಡದೆ ನಿಮ್ಮ ಮೇಲೆ ಹೊರೆ ಹಾಕಿದೆ ಎಂದಿದ್ದಾರೆ.

ನೀರಾವರಿ ಇಲಾಖೆಯ ಬಜೆಟ್ 16 ಸಾವಿರ ಕೋಟಿ ರೂ. ಇದೆ. ಕಳೆದ ಬಾರಿ 25 ಸಾವಿರ ಕೋಟಿ ರೂ. ಮೊತ್ತದ ಯೋಜನೆಗಳಿಗೆ ಅನುಮೋದನೆ ನೀಡಲಾಗಿತ್ತು. ಒಟ್ಟು ನನ್ನ ಇಲಾಖೆಯಲ್ಲಿ 1 ಲಕ್ಷ 25 ಸಾವಿರ ಕೋಟಿ ರೂ. ಮೊತ್ತದ ಕಾಮಗಾರಿಗಳು ನಡೆಯುತ್ತಿವೆ. ಹೀಗಿದ್ದಾಗ ಗುತ್ತಿಗೆದಾರರು ಕೆಲಸ ಮುಗಿಸುವುದು ಹೇಗೆ? ಸರ್ಕಾರ ಬಿಲ್ ಪಾವತಿ ಮಾಡುವುದು ಹೇಗೆ? ಈ ಸಮಸ್ಯೆಗಳನ್ನು ಬಗೆಹರಿಸಲು ಗಮನ ಹರಿಸುತ್ತೇವೆ ಎಂದು ಅವರು ತಿಳಿಸಿದ್ದಾರೆ.

ಈ ಬಾರಿ ಅಭಿವೃದ್ಧಿ ಕಾರ್ಯಗಳಿಗೆ ಎಂದು 1.20 ಲಕ್ಷ ಕೋಟಿ ರೂ. ಹಣ ಮೀಸಲಿಟ್ಟಿದ್ದೇವೆ. 3 ಲಕ್ಷದ 71 ಸಾವಿರ ಕೋಟಿ ರೂ. ಮೊತ್ತದ ಬಜೆಟ್ ಮಂಡಿಸಿದ್ದು, ಗ್ಯಾರಂಟಿ ಯೋಜನೆಗಳಿಗೆ 50 ಸಾವಿರ ಕೋಟಿ ರೂ. ವೆಚ್ಚವಾಗಲಿದೆ. ನಿಮಗೆ ತೊಂದರೆ ಆಗದಂತೆ ಒಂದಷ್ಟು ಹಣ ಬಿಡುಗಡೆ ಮಾಡಿದ್ದೇವೆ. ಕೇಂದ್ರ ಸರ್ಕಾರ ರಾಜ್ಯದ ಪಾಲಿನ ಹಣ ಸರಿಯಾಗಿ ನೀಡದ ಪರಿಣಾಮ ಹೆಚ್ಚಿನ ತೊಂದರೆಯಾಗುತ್ತಿದೆ. ಭದ್ರಾ ಮೇಲ್ದಂಡೆ ಯೋಜನೆಗೆ 5,300 ಕೋಟಿ ರೂ. ಹಣ ನೀಡುವುದಾಗಿ ಬಜೆಟ್ನಲ್ಲಿಯೇ ಹೇಳಿದ್ದರು. ಇದುವರೆಗೂ ಒಂದು ರೂಪಾಯಿ ಬಂದಿಲ್ಲ. ಪರಿಸ್ಥಿತಿ ಹೀಗಿರುವಾಗ ಸರ್ಕಾರ ಹೇಗೆ ನಡೆಸುವುದು? ದೊಡ್ಡ, ದೊಡ್ಡ ಗುತ್ತಿಗೆದಾರರು ಬೃಹತ್ ಮೊತ್ತದ ಪ್ಯಾಕೇಜ್ ಯೋಜನೆಗಳನ್ನು ತೆಗೆದುಕೊಂಡು ತುಂಡು ಗುತ್ತಿಗೆಯಾಗಿ ಸಣ್ಣವರಿಗೆ ನೀಡುತ್ತಿದ್ದಾರೆ. ಈ ಮಾಫಿಯಾವನ್ನು ಪ್ರಾರಂಭ ಮಾಡಿದ್ದೇ ಅಧಿಕಾರಿಗಳು ಎಂದು ಕಿಡಿಕಾರಿದ್ದಾರೆ.

ಗುತ್ತಿಗೆದಾರರು ಪ್ಯಾಕೇಜ್ ಪದ್ಧತಿ ರದ್ದು ಮಾಡಬೇಕು. ಬಾಕಿ ಮೊತ್ತ ಬಿಡುಗಡೆ ಮಾಡಬೇಕು. ಭ್ರಷ್ಟಾಚಾರ ಕಡಿಮೆ ಮಾಡಬೇಕು ಎನ್ನುವ ನಿಮ್ಮ ಬೇಡಿಕೆಗಳನ್ನು ಪೂರೈಸುವ ಚಿಂತನೆ ಮಾಡಲಾಗುವುದು. ಈ ಭ್ರಷ್ಟಾಚಾರದ ಭೂತ ನಿಮಗೂ ಅಂಟಿದೆ, ನಮಗೂ ಅಂಟಿದೆ. ಇಬ್ಬರೂ ಈ ಕಷ್ಟದಿಂದ ಪಾರಾಗಬೇಕಿದೆ. ಗುತ್ತಿಗೆದಾರರ ಎಲ್ಲಾ ಬೇಡಿಕೆಗಳು ಸರ್ಕಾರದ ಗಮನದಲ್ಲಿದೆ. ನೀವು ಹಣವನ್ನು ಬಡ್ಡಿಗೆ ತಂದು, ಮೀಟರ್ ಬಡ್ಡಿ ಕಟ್ಟುತ್ತಾ, ಆಸ್ತಿಗಳನ್ನು ಅಡವಿಟ್ಟು ಕಾಮಗಾರಿಗಳನ್ನು ಮಾಡಿರುತ್ತೀರಿ. ನಿಮ್ಮ ಕಷ್ಟ ಸರ್ಕಾರದ ಗಮನದಲ್ಲಿದೆ. ಎರಡು, ಮೂರು ದಿನಗಳಲ್ಲಿ ಲೋಕಸಭಾ ಚುನಾವಣಾ ದಿನಾಂಕ ಪ್ರಕಟವಾಗುವ ಸಂಭವವಿದೆ. ಚುನಾವಣೆ ನಂತರ ನಿಮ್ಮ ಬೇಡಿಕೆಗಳ ಬಗ್ಗೆ ಗಮನ ನೀಡಲಾಗುವುದು. ನಮ್ಮ, ನಿಮ್ಮ ಸಂಬಂಧ ಹಾಲು ಜೇನಿನಂತೆ. ಹಾಲನ್ನು ಕುಡಿಯದೇ ಇರಲು, ಜೇನು ಸವಿಯದೇ ಇರಲು ಸಾಧ್ಯವಿಲ್ಲ. ಒಟ್ಟಿಗೆ ಕುಳಿತು ಸಭೆ ನಡೆಸಿ ಸಮಸ್ಯೆ ಬಗೆಹ–ರಿಸಲು ಕ್ರಮ ತೆಗೆದುಕೊಳ್ಳೋಣ ಎಂದು ಅವರು ಹೇಳಿದ್ದಾರೆ.

# ನಾವು ಸಂಘರ್ಷಕ್ಕಿಳಿಯಲ್ಲ, ಗುತ್ತಿಗೆದಾರರ ಹಿತರಕ್ಷಣೆಗೆ ಸರ್ಕಾರ ಬದ್ಧ: ಸಚಿವ ಸತೀಶ ಜಾರಕಿಹೊಳಿ



ಬೆಂಗಳೂರು: ರಾಜ್ಯದಲ್ಲಿ ಸಿಎಂ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಅಸ್ತಿತ್ವಕ್ಕೆ ಬಂದು 9 ತಿಂಗಳು ಆಗಿದೆ. ಈ ಅವಧಿಯಲ್ಲಿ ಲೋಕೋಪಯೋಗಿ ಇಲಾಖೆಯ ಇತಿಹಾಸದಲ್ಲಿ ಇದೇ ಮೊದಲ ಬಾರಿಗೆ ಅಮೂಲಾಗ್ರ ಬದಲಾವಣೆ ಮಾಡಲಾಗಿದೆ. ನಾವು ಸಂಘರ್ಷಕ್ಕಿಳಿಯಲ್ಲ, ಗುತ್ತಿಗೆದಾರರ ಸಮಸ್ಯೆ ಪರಿಹಾರಕ್ಕೆ ನಮ್ಮ ಸರ್ಕಾರ ಸದಾ ಬದ್ಧವಾಗಿದೆ ಎಂದು ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಹೇಳಿದರು.

ರಾಜ್ಯ ಗುತ್ತಿಗೆದಾರರ ಸಂಘದ ವತಿಯಿಂದ ಬೆಂಗಳೂರಿನ ಅರಮನೆ ಮೈದಾನದಲ್ಲಿ ಸೋಮವಾರ ಆಯೋಜಿಸಲಾಗಿದ್ದ ರಾಜ್ಯ ಗುತ್ತಿಗೆದಾರರ ಸಮಾವೇಶವನ್ನು ಉದ್ದೇಶಿಸಿ ಅವರು ಮಾತನಾಡಿ, 9 ತಿಂಗಳ ಅವಧಿಯಲ್ಲಿ ನಮ್ಮ ಇಲಾಖೆಗೆ ಸಂಬಂಧಿಸಿದ ಎಲ್ಲ ಸಮಸ್ಯೆಗಳನ್ನು ತಿಳಿದುಕೊಳ್ಳುವ ಪ್ರಯತ್ನ ಮಾಡಿದ್ದೇವೆ. ನಿಮ್ಮ ಸಂಘದ ಜೊತೆಗೆ ಎರಡು ಸಭೆ ಮಾಡಿದ್ದೇನೆ. ಎಲ್ಲ ಸಮಸ್ಯೆಗಳಿಗೆ ಪರಿಹಾರ ಮಾಡಿದ್ದೇವೆ. ಜೊತೆಗೆ ನಿಮ್ಮ ಸಲಹೆಗಳನ್ನು ಕೂಡ ಇಲಾಖೆ ಪಾಲನೆ ಮಾಡಿರುವುದು ಹೆಮ್ಮೆ ವಿಷಯ ಎಂದರು.

ಸರ್ಕಾರ, ಗುತ್ತಿಗೆದಾರರು ಒಂದೇ ಟ್ರಾಕ್ನಲ್ಲಿ ಹೋಗಬೇಕಾಗುತ್ತದೆ. ಇಬ್ಬರು ಜೊತೆ ಜೊತೆಯಾಗಿ ಹೋದರೆ ಮಾತ್ರ ಅಭಿವೃದ್ಧಿ ಕೆಲಸವಾಗುತ್ತದೆ. ಕಾಮಗಾರಿಗಳನ್ನು ಪ್ಯಾಕೇಜ್ ಮೂಲಕ ಕೈಗೆತ್ತಿಕೊಳ್ಳಲು ಇಲಾಖೆ ಕ್ರಮ ವಹಿಸಿದೆ. ನಿನ್ನೆ ಕೂಡ 4 ಸಾವಿರ ಕೋಟಿ ಎಸ್ಎಟಿಪಿ ಟೆಂಡರ್ ಕೊಡಲಾಗುವುದು.

ಪರಿಮಿಟ್ ಇಲ್ಲದೇ ತರುವ ಸಾಮಗ್ರಿಗಳಿಗೆ ಒಂದೇ ಪಟ್ಟು ರಾಯಲ್ಟಿ ತುಂಬಬೇಕು ಎಂಬ ನಿಮ್ಮ ಬೇಡಿಕೆ ಇದೆ. ಅದನ್ನು ಮುಖ್ಯಮಂತ್ರಿಗಳು ಗಮನ ಹರಿಸುತ್ತಾರೆ. ಸರಳೀಕರಣವಾಗಬೇಕಿದೆ. ಈ ನಿಟ್ಟಿನಲ್ಲಿ ನಮ್ಮ ಇಲಾಖೆ ಸಾಕಷ್ಟು ವಿಷಯಗಳ ಕುರಿತು ನಿಮ್ಮ ಜೊತೆಗೆ ಚರ್ಚಿಸಲಾಗಿದೆ. ಕಾಮಗಾರಿಗಳ ಕುರಿತು ಬಾಕಿ ಬಿಲ್ ಪಾವತಿಗೆ ಒತ್ತಾಯ ಮಾಡುತ್ತಿದ್ದೀರಿ. ಆದರೆ, ನಮ್ಮ ಸರ್ಕಾರದ ಅವಧಿಯಲ್ಲಿ ಈ ಕಾಮಗಾರಿ ಕೈಗೊಂಡಿಲ್ಲ. ಆದರೂ ಕೂಡ ನಾವು ನಿಮ್ಮ ಬಿಲ್ ಪಾವತಿಸಲು ಸಿಎಂ ಅನುಮತಿ ನೀಡಿದ್ದಾರೆ. ಹಂತ ಹಂತವಾಗಿ ಬಿಲ್ ನೀಡಲಾಗುವುದು ಎಂದು ಭರವಸೆ ನೀಡಿದರು.

ಪ್ಯಾಕೇಜ್ ಕುರಿತು ಇಲಾಖೆ ಕ್ರಮ ಕೈಗೊಂಡಿದೆ. ಸಣ್ಣ ಗುತ್ತಿಗೆದಾರರ ಅನುಕೂಲಕ್ಕೆ ಕ್ರಮ ಕೈಗೊಳ್ಳಲಾಗುವುದು. ನಿಮ್ಮ ಬೇಡಿಕೆಗಳನ್ನು ಜಾರಿ ಮಾಡಿದ್ದೇವೆ. ಜಿಎಸ್ಟಿ ಕೂಡ ಗೊಂದಲವಿದೆ. ಸರ್ಕಾರ ಮಟ್ಟದಲ್ಲಿ ತೀರ್ಮಾನವಾಗಬೇಕಿದೆ. ಸೇತುವೆ ಮಾಡುವಾಗ ಹೆಚ್ಚು ರಸ್ತೆ ಮಾಡಿದರೆ ಅದರ ಬಿಲ್ನ್ನು ಕೂಡ ಪಾವತಿಸಲಾಗುವುದು. ಗುತ್ತಿಗೆದಾರರಿಗೆ ಅನುಕೂಲ ಮಾಡಲು ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದರು.

ನಾಲ್ಕು ವರ್ಷಗಳಿಂದ ಬಾಕಿ ಉಳಿದಿದ್ದ ಬಿಲ್ ಸಂಬಂಧಿಸಿದಂತೆ 1 ಕೋಟಿಯೊಳಗೆ ಇದ್ದ ಬಿಲ್ಗಳನ್ನು 1045 ಗುತ್ತಿಗೆದಾರರಿಗೆ ಪಾವತಿ ಮಾಡಲಾಗಿದೆ. ಇಲಾಖೆ ನಿಮ್ಮ ಜೊತೆಗೆ ತೆರೆದ ಬಾಗಿಲಾಗಿದೆ. ಯಾವುದೇ ಸಮಯದಲ್ಲಿ ಬಂದು ಚರ್ಚೆ ಮಾಡಬಹುದು. ರಾಜ್ಯದಲ್ಲಿ 400 ಎಸ್ಸಿ,ಎಸ್ಟಿ ಗುತ್ತಿಗೆದಾರರು ಇದ್ದಾರೆ. ಈ ಬಾರಿ 200 ಜನಕ್ಕೆ 50 ಕೋಟಿ ರೂಪಾಯಿ ಏಕಕಾಲಕ್ಕೆ ನೀಡಲಾಗುವುದು. ನಿಮ್ಮ ಸಮಸ್ಯೆ ಪರಿಹರಿಸುತ್ತೇವೆ. ನಿಮ್ಮ ಸಹಕಾರ ನಮಗೆ ಬೇಕು. ನಾವು ಸಂಘರ್ಷಕ್ಕೀಳಿಯಲು ಆಗದು. ಹಂತ ಹಂತವಾಗಿ ನಿಮ್ಮ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲಾಗುವುದು. ನಮಗೆ ಸಮಸ್ಯೆ ಪರಿಹರಿಸುವುದು ಮುಖ್ಯ ಎಂದು ಹೇಳಿದರು.

ನಾವು ಅಧಿಕಾರಕ್ಕೆ ಬಂದ ಮೇಲೆ ಲೋಕೋಪಯೋಗಿ ಇಲಾಖೆಯಲ್ಲಿ ಬಹಳಷ್ಟು ಬದಲಾವಣೆಯಾಗಿದೆ. 980 ಅಧಿಕಾರಿಗಳಿಗೆ ಏಕಕಾಲಕ್ಕೆ ಕೌನ್ಸಲಿಂಗ್ ಮೂಲಕ ಪೋಸ್ಟಿಂಗ್ ನೀಡಿರುವುದು ಇಲಾಖೆ ಇತಿಹಾಸದಲ್ಲೇ ಐತಿಹಾಸಿಕ ತೀರ್ಮಾನ ಕೈಗೊಂಡಿದ್ದೇವೆ. ಅವರಿಗೆ ಬೇಕಿದ್ದ ಜಾಗಕ್ಕೆ ಪೋಸ್ಟಿಂಗ್ ಮಾಡಲಾಗಿದೆ. ಈ ರೀತಿ ಬೇರೆ ಯಾವುದೇ ಇಲಾಖೆಯಲ್ಲಿ ಆಗಿಲ್ಲ. 600 ಜನಕ್ಕೆ ಮುಂಬಡ್ತಿ ನೀಡಿದ್ದೇವೆ. ಬೆಳಗ್ಗೆ ಬಂದ ಫೈಲನ್ನ ಸಂಜೆವೇಳೆಗೆ ಮರಳಿ ಕಳಿಸಿದ್ದೇವೆ. ಮರು ದಿನವೇ ಅವರಿಗೆ ಆದೇಶ ನೀಡುವ ಪ್ರಯತ್ನ ಮಾಡಿದ್ದೇವೆ. ನಮ್ಮಿಂದ ಸಾಧ್ಯವಾಗುವುದನ್ನು ಮಾಡಲಿಕ್ಕೆ ಪ್ರಯತ್ನ ಮಾಡಿದ್ದೇವೆ ಎಂದು ಹೇಳಿದರು.

ನಮ್ಮ ಇಲಾಖೆಯ ಹಿರಿಯ ಅಧಿಕಾರಿಗಳಿಗೆ ಹೊಸ ವಾಹನಗಳನ್ನುಕೊಡಿಸಲಾಗುತ್ತಿದೆ. ಸುಮಾರು ವರ್ಷಗಳಿಂದ ಇಲಾಖೆಗೆ ವಾಹನ ಕೊರತೆ ಇತ್ತು. ಹೊಸ ವಾಹನ ನೀಡಲಾಗುವುದು. ಶೇ. 1 ರಷ್ಟು ಅಧಿಕಾರಿಗಳಿಗೆ ತರಬೇತಿ, ವಿದೇಶ ಪ್ರವಾಸಕ್ಕೆ 10 ಕೋಟಿ ರೂಪಾಯಿ ಅನುದಾನ ಕಾಯ್ದಿರಿಸಲಾಗಿದೆ. ಹೊಸ ಯೋಜನೆ ಅಳವಡಿಸಬೇಕು. ಕರ್ನಾಟಕ್ಕೆ ಹೊಸ ರಸ್ತೆ ದಾರಿ ತೋರಿಸಲು ಇಲಾಖೆ ಕಲ್ಪನೆಯಾಗಿದೆ. ನಿಮ್ಮ ಸಹಕಾರ ಮುಖ್ಯವಾಗಿದೆ.

ನಿಮ್ಮ ಸಮಸ್ಯೆ ಪರಿಹರಿಸಲು ಕಾಂಗ್ರೆಸ್ ಸರ್ಕಾರ ಸದಾ ಸಿದ್ಧ. ಗುತ್ತಿಗೆದಾರರು ಸರ್ಕಾರದ ಭಾಗ ನೀವು, ನಿಮ್ಮ ಬಗ್ಗೆ ಸರ್ಕಾರ ಚಿಂತನೆ ಮಾಡುತ್ತದೆ. ಸಮಸ್ಯೆ ನಮ್ಮ ಗಮನಕ್ಕೆ ತೆಗೆದುಕೊಂಡು ಬಂದರೆ, ಪರಿಹಾರ ಮಾಡಲಾಗುವುದು. ಸಮಾಜಮುಖಿಯಾಗಿ ಕೆಲಸ ಮಾಡುತ್ತ ಬಂದಿದ್ದೀರಿ. ನಮ್ಮ ಇಲಾಖೆ ನಿಮ್ಮನ್ನು ಗೌರವದಿಂದ ಕಾಣುತ್ತ ಬಂದಿದೆ.

ಗುತ್ತಿಗೆದಾರರಿಗೆ ಇನ್ಸುರನ್ಸ್ ನೀಡುವ ಸಂಬಂಧ ಏಜೆನ್ಸಿಗೆ ಕೊಡುವ ಪ್ರಯತ್ನ ಮಾಡುತ್ತಿದ್ದೇವೆ. ಈ ವಿಚಾರದಲ್ಲಿ ನಮ್ಮಿಂದ ಯಾವುದೇ ವಿಳಂಬವಾಗುವುದಿಲ್ಲ. ಕೆಂಪಣ್ಣ ಪ್ರಮಾಣಪತ್ರ ಕೊಟ್ಟಿರುವುದು ನಮಗೂ ಎಲ್ಲಿಯೋ ತೊಂದರೆಯಾಗುವ ಸಾಧ್ಯತೆಯಿದೆ. ನಿಮ್ಮ ಹಿತ ಮುಖ್ಯ. ಪ್ರಯೋಗ ಮಾಡಿ ತೋರಿಸಿದ್ದೇವೆ. ನನಗೆ ಅವಕಾಶ ಸಿಕ್ಕಾಗ ಯಾವ ರೀತಿ ಪ್ರಾಮಾಣಿಕವಾಗಿ ನಿರ್ವಹಣೆ ಮಾಡಬೇಕು ಎನ್ನುವುದನ್ನು 9 ತಿಂಗಳ ಅವಧಿಯಲ್ಲಿ ಮಾಡಿದ್ದೇನೆ ಎಂದು ಸತೀಶ ಜಾರಕಿಹೊಳಿ ಹೇಳಿದರು. ಈ ವೇಳೆ ಸಿಎಂ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್, ವಸತಿ ಸಚಿವ ಜಮೀರ ಅಹಮದ್ ಖಾನ್, ಸಣ್ಣ ನೀರಾವರಿ ಸಚಿವ ಎನ್.ಎಸ್.ಬೋಸರಾಜ್, ಗುತ್ತಿಗೆದಾರರ ಸಂಘದ ಅಧ್ಯಕ್ಷ ಕೆಂಪಣ್ಣ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಕ್ರೀಡೆ ನಮ್ಮ ಜೀವನದ ಅಗತ್ಯಗಳಲ್ಲಿ ಒಂದಾಗಿದೆ: ಎಸ್.ಮಧು ಬಂಗಾರಪ್ಪ

ಶಿವಮೊಗ್ಗ: ಕ್ರೀಡೆಗಳು ಮಾನವ ಜೀವನದ ಅಗತ್ಯಗಳಲ್ಲಿ ಒಂದಾಗಿದ್ದು ಪ್ರತಿದಿನ ನಮ್ಮ ದೈನಂದಿನ ಚಟುವಟಿಕೆಗಳ ಜೊತೆ ಯಾವುದಾದರೂ ಕ್ರೀಡೆಯನ್ನು ಆಡಬೇಕೆಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಮಧು ಬಂಗಾರಪ್ಪ ನುಡಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಜಿಲ್ಲಾ ಶಾಖೆ ಶಿವಮೊಗ್ಗ ಇವರ ಸಂಯುಕ್ತಾಶ್ರಯದಲ್ಲಿ ಇಂದು ನೆಹರೂ ಕ್ರೀಡಾಂಗಣದಲ್ಲಿ ಏರ್ಪಡಿಸಲಾಗಿದ್ದ ಶಿವಮೊಗ್ಗ ಜಿಲ್ಲಾ ಮಟ್ಟದ ರಾಜ್ಯ ಸರ್ಕಾರಿ ನೌಕರರ ಕ್ರೀಡಾಕೂಟ ಹಾಗೂ ಸಾಂಸ್ಕೃತಿ-ಕ ಸ್ಪರ್ಧೆಗಳನ್ನು ಬಲೂನ್ ಹಾರಿಸಿ, ಗುಂಡು ಎಸೆಯುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಸರ್ಕಾರಿ ನೌಕರರಿಂದಲೇ ರಾಜ್ಯ ಸರ್ಕಾರದ ಕೆಲಸ ಕಾರ್ಯಗಳು ನಡೆಯುತ್ತಿವೆ. ಅಧಿಕಾರಿ-ನೌಕರರ ಒತ್ತಡ ನಿರ್ವಹಣೆಗೆ ಕ್ರೀಡೆ ಸಹಕಾ-ರಿಯಾಗಿದ್ದು ಈ ಕಾರ್ಯಕ್ರಮವನ್ನು ಅರ್ಥ ಪೂರ್ಣವಾಗಿ ನಡೆಸುವಂತೆ ತಿಳಿಸಿದರು.

ಶಿಕ್ಷಣ ಇಲಾಖೆಯಿಂದಲೇ ಅತಿ ಹೆಚ್ಚು ನೌಕರರಿದ್ದು ಇದು ದೊಡ್ಡ ಇಲಾಖೆ. ಹಲವಾರು ಸಮಸ್ಯೆಗಳು ಇವೆ. ಶಿಕ್ಷಕರ ನೇಮಕ ಆಗಬೇಕಿದೆ. ನಾನು ಸಚಿವ ಸ್ಥಾನ ಸ್ವೀಕ-ರಿಸಿದ ನಂತರ 32 ಸಾವಿರ ಸರ್ಕಾರಿ ಶಿಕ್ಷಕರ ವರ್ಗಾವಣೆಗೆ ಕ್ರಮ ವಹಿಸಿದ್ದು, 43 ಸಾವಿರ ಅತಿಥಿ ಉಪನ್ಯಾಸಕರ ನೇಮಕ ಮಾಡಿದ್ದೇನೆ. ಜೊತೆಗೆ ಹೊಸದಾಗಿ 12500 ಶಿಕ್ಷಕರ ನೇಮಕ ಆಗಿದ್ದು 11500 ಜನ ಈಗಾಗಲೇ ಕರ್ತವ್ಯಕ್ಕೆ ವರದಿ ಮಾಡಿಕೊಂಡಿದ್ದಾರೆ. ಮುಂದಿನ ದಿನಗಳಲ್ಲಿ ಅಗತ್ಯ ಶಿಕ್ಷಕರ ನೇಮಕ, ಶಿಕ್ಷಕರ ಬಡ್ತಿ ಸೇರಿದಂತೆ ಇತರೆ ಸಮಸ್ಯೆಗಳನ್ನು ಹಂತ ಹಂತವಾಗಿ ಪರಿಹಾರ ಒದಗಿಸಲಾಗುವುದು ಎಂದರು.

ಕಳೆದ ಬಜೆಟ್ನಲ್ಲಿ ಶಿಕ್ಷಣ ಇಲಾಖೆ 37,500 ಕೋಟಿ ನೀಡಿದ್ದರು. ಈ ಬಾರಿ 44,412 ಕೋಟಿ ನೀಡಿದ್ದು ಇಲಾಖೆಯಲ್ಲಿನ ಸಮಸ್ಯೆಗಳು ಬಗೆಹರಿಯುವ ನಿಟ್ಟಿನಲ್ಲಿ ಅಗತ್ಯವಾದ ಎಲ್ಲ ಕ್ರಮಗಳನ್ನು ವಹಿಸುತ್ತೇನೆ ಎಂದ ಅಂದು ಬಂಗಾರಪ್ಪನವರು ಇದೆ ನೆಹರು ಕ್ರೀಡಾಂಗಣದಲ್ಲಿ ಸರ್ಕಾರಿ ನೌಕರ-ರಿಗೆ 12% ರಷ್ಟು ವೇತನ ಹೆಚ್ಚು ಮಾಡಿದ್ದನ್ನು ಸ್ಮರಿಸಿದರು.



ಮಾನ್ಯ ಮುಖ್ಯಮಂತ್ರಿಗಳು ಸರ್ಕಾರಿ ನೌಕರರಿಗೆ 7ನೇ ವೇತನ ಆಯೋಗ ಮತ್ತು ಹಳೆ ಪಿಂಚಣಿ ವ್ಯವಸ್ಥೆ ಜಾರಿ ಬಗ್ಗೆ ಇತೀಚಿನ ರಾಜ್ಯ ಸರ್ಕಾರಿ ನೌಕರರ ಸಮಾವೇಶದಲ್ಲಿ ಭರವಸೆ ನೀಡಿದ್ದು ಅದನ್ನು ಜಾರಿಗೆ ತರುತ್ತಾರೆಂಬ ವಿಶ್ವಾಸ ನನ್ನಲ್ಲಿದೆ. ವೇತನ ಆಯೋಗದ ವರದಿ ಬಂದ ನಂತರ ನಾನೂ ಸಹ ಸರ್ಕಾರಿ ನೌಕರರ ಹಕ್ಕುಗಳ ಬಗ್ಗೆ ಧ್ವನಿ ಎತ್ತುವುದಾಗಿ ಈ ಸಂದರ್ಭದಲ್ಲಿ ಭರವಸೆ ನೀಡಿದ ಅವರು ಎಲ್ಲರೂ ಸೇರಿ ಜಿಲ್ಲೆಯ ಅಭಿವೃದ್ದಿಗಾಗಿ ಒಗ್ಗಟ್ಟಾಗಿ ಕೆಲಸ ಮಾಡೋಣ ಎಂದರು.

ರಾಜ್ಯ ಮಟ್ಟದ ಸರ್ಕಾರಿ ನೌಕರರ ಕ್ರೀಡಾಕೂಟ ಮತು ಸಾಂಸ್ಕೃತಿಕ ಸ್ಪರ್ಧೆಯು ಮೇ ತಿಂಗಳಲ್ಲಿ ಜಿಲ್ಲೆಯಲ್ಲಿಯೇ ನಡೆಯಲಿದೆ ಎಂದು ರಾಜ್ಯಾಧ್ಯಕ್ಷರು ತಿಳಿಸಿದ್ದು, ಆ ಕ್ರೀಡಾಕೂಟಕ್ಕೆ ಸಹ ನನ್ನ ಕಡೆಯಿಂದ ಸಂಪೂರ್ಣ ಸಹಕಾರ ದೊರೆಯಲಿದೆ ಎಂದರು.

ಸರ್ಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷ ಸಿ.ಎಸ್. ಷಡಾಕ್ಷರಿ ಮಾತನಾಡಿ, ಒತ್ತಡದಲ್ಲಿ ಕೆಲಸ ಮಾಡುವ ನೌಕರರಿಗೆ ಕ್ರೀಡಾಕೂಟ ಅಗತ್ಯವಾಗಿರುವ ಹಿನ್ನೆಲೆ ಕ್ರೀಡಾಕೂಟವನ್ನು ಆಯೋಜಿಸಲಾಗುತ್ತಾ ಬರಲಾಗಿದೆ. ಇದು 5 ನೇ ಜಿಲ್ಲಾ ಮಟ್ಟದ ಕ್ರೀಡಾಕೂಟವಾಗಿದೆ. ರಾಜ್ಯದಲ್ಲಿ 2.5 ಲಕ್ಷ ಸರ್ಕಾರಿ ಹುದ್ದೆಗಳು ಖಾಲಿ ಇವೆ. 5.20 ಲಕ್ಷ ಸರ್ಕಾರಿ ನೌಕರರು ಕಾರ್ಯ ನಿರ್ವಹಿಸುತ್ತಿದ್ದಾರೆ. ನೇಮಕಾತಿಗಳು ಆಗುತ್ತಿಲ್ಲ. ಇತರೆ 22 ರಾಜ್ಯಗಳಿಗೆ ಮತ್ತು ಕೇಂದ್ರಕ್ಕೆ ಹೋಲಿಸಿದರೆ ಕಡಿಮೆ ವೇತನ, ಆರೋಗ್ಯ ಯೋಜನೆ ಇಲ್ಲ.

ಕ್ರೀಡಾಕೂಟಗಳಿಗೆ ಇನ್ನೂ ಹೆಚ್ಚಿನ ಉತ್ತೇಜನ, ಉತ್ತಮ ಕ್ರೀಡಾಂಗಣ ಮತ್ತು ಸರ್ಕಾರಿ ಕ್ರೀಡಾಕೂಟ ನಡೆಸಲು ಮೂಲಭೂತ ಸೌಕರ್ಯಗಳ ಅಗತ್ಯವಿದೆ. ಶಿವಮೊಗ್ಗದಲ್ಲಿಯೇ ರಾಜ್ಯ ಮಟ್ಟದ ಕ್ರೀಡಾ ಕೂಟ ನಡೆಸಲು ಯೋಜಿಸಲಾಗಿದೆ.

70 ಸಾವಿರ ಶಿಕ್ಷಕರಿಗೆ ಇನ್ನೂ ಮುಂಬಡ್ತಿ ದೊರತಿಲ್ಲ. ಶಿಕ್ಷಣ ಇಲಾಖೆಯಲ್ಲಿ ಸಾಕಷ್ಟು ಸಮಸ್ಯೆಗಳಿದ್ದು ಸಚಿವರು ಬಗೆಹರಿಸುತ್ತಾರೆಂಬ ನಂಬಿಕೆ ಇದೆ. ಹಾಗೂ ಆಯೋಗದ ವರದಿ ಬಂದ ನಂತರ 7ನೇ ವೇತನ ಆಯೋಗ ಮತ್ತು ಓಪಿಎಸ್ ಜಾರಿಯಾಗುವ ಎಲ್ಲ ಸಾಧ್ಯತೆಗಳಿವೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಕ್ರೀಡಾಕೂಟದಲ್ಲಿ ಅಥ್ಲೆಟಿಕ್ಸ್,ಥ್ರೋಬಾಲ್, ಕಬಡ್ಡಿ,ವಾಲಿಬಾಲ್, ಟೆನ್ನಿಕಾಯ್ಟ್, ಬ್ಯಾಸ್ಕೆಟ್ ಬಾಲ್, ಪುಟ್ಬಾಲ್, ಹಾಕಿ, ಕ್ರಿಕೆಟ್, ಈಜು,ಟೆನ್ನಿಸ್, ಚೆಸ್, ವೇಟ್ ಲಿಫ್ಟಿಂಗ್, ಫವರ ಲಿಫ್ಟಿಂಗ್, ಬಾಲ್ ಬ್ಯಾಡ್ಮಿಂಟನ್, ಷಟಲ್ ಬ್ಯಾಡ್ಮಿಂಟನ್, ಟೇಬಲ್ ಟೆನ್ನಿಸ್,ಕರಂ, ಕುಸ್ತಿ, ಯೋಗ,ಖೋ- ಖೋ. ಕ್ರೀಡೆಗಳಿದ್ದವು. ಸಾಂಸ್ಕೃತಿಕ ಕಾರ್ಯ ಕ್ರಮಗಳಾದ ಸಂಗೀತ, ನೃತ್ಯ,ವಾದ್ಯ ಸಂಗೀತ ,ಜಾನಪದ ಗೀತೆ,ಜಾನಪದ ನೃತ್ಯ ,ಕಿರು ನಾಟಕ, ಕರಕುಶಲ ವಸ್ತು ಪ್ರದರ್ಶನ ಏರ್ಪಡಿಸಲಾಗಿತ್ತು.

ಶಾಸಕರಾದ ಎಸ್.ಎನ್.ಚನ್ನಬಸಪ್ಪ , ಸೂಡಾ ಅಧ್ಯಕ್ಷ ಹೆಚ್.ಎಸ್.ಸುಂದರೇಶ್, ರಾಜ್ಯ ಸರ್ಕಾರಿ ನೌಕರರ ಸಂಘದ ಉಪಾಧ್ಯಕ್ಷ ಮೊಹನ್ ಕುಮಾರ್, ಗೌರವ ಅಧ್ಯಕ್ಷ ಕೃಷ್ಣಮೂರ್ತಿ, ರಾಜ್ಯ ಸರ್ಕಾರಿ ನೌಕರರ ಸಂಘದ ತಾಲೂಕು ಅಧ್ಯಕ್ಷರುಗಳು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ಮಂಜುನಾಥಸ್ವಾಮಿ, ಪದಾಧಿಕಾರಿಗಳು ಹಾಗೂ ಕ್ರೀಡೆಯಲ್ಲಿ ಪಾಲ್ಗೊಳ್ಳಲು ಬಂದಿದ್ದ ಸರ್ಕಾರಿ ನೌಕರರು ಹಾಜರಿದ್ದರು.

## ಬೆಳಗಾವಿ ಲೋಕ ಚುನಾವಣೆಯ ಬಿಜೆಪಿ ಆಕಾಂಕ್ಷಿಗಳ ರೇಸ್ ನಲ್ಲಿ ಮಾಜಿ ಡಿಸಿ



ಬೆಳಗಾವಿ: ಜಿಲ್ಲಾಧಿಕಾರಿ ಗಳಾಗಿ ವಿಭಾಗಾಧಿಕಾರಿಗಳಾಗಿ ಸೇವೆ ಮಾಡಿರುವ ಎಂ.ಜಿ ಹಿರೇಮಠ ಅವರು ಪ್ರಸಕ್ತ ಲೋಕಸಭೆ ಚುನಾವಣೆಯ ಬೆಳಗಾವಿ ಕ್ಷೇತ್ರದ ಬಿಜೆಪಿಯ ಪ್ರಬಲ ಆಕಾಂಕ್ಷಿಯಾಗಿದ್ದಾರೆ.

ಜನಪ್ರೀಯ ಅಧಿಕಾರಿಯಾಗಿದ್ದ ಎಂ.ಜಿ ಹಿರೇಮಠ ಅವರನ್ನು ಕಣಕ್ಕಿಳಿಸುವ ಚಿಂತನೆ ಈಗ ಬಿಜೆಪಿಯಲ್ಲಿ ಶುರುವಾಗಿದೆ.ನಿವೃತ್ತ ಐಎಎಸ್ ಅಧಿಕಾರಿ ಎಂ.ಜಿ. ಹಿರೇಮಠ ಅವರನ್ನು ಬೆಳಗಾವಿ ಲೋಕಸಭಾ ಕ್ಷೇತ್ರದಿಂದ ಕಣಕ್ಕಿಳಿಸುವ ಸಂಬಂಧ ಬಿಜೆಪಿ ಹೈಕಮಾಂಡ್ ಚಿಂತನೆ ನಡೆಸಿದೆ. ಈ ಹಿಂದೆ ಐಪಿಎಸ್ ಅಧಿಕಾರಿಗಳಾಗಿದ್ದ ಭಾಸ್ಕರ ರಾವ್ ಮತ್ತು. ಅವರಿಗೆ ಬಿಜೆಪಿ ಮಣೆ ಹಾಕಿತ್ತು. ಆದರೆ ಈಗ ಬೆಳಗಾವಿಯ ನಿವೃತ್ತ ಐಎಎಸ್ ಅಧಿಕಾರಿ ಎಂ. ಜಿ. ಹಿರೇಮಠ ಅವರನ್ನು ಸೆಳೆದಿರುವ ಬಿಜೆಪಿ, ಅವರನ್ನು ಲೋಕಸಭಾ ಬೆಳಗಾವಿ ಕ್ಷೇತ್ರದಿಂದ ಕಣಕ್ಕಿಳಿಸಲು ಮುಂದಾಗಿದೆ. ಬೆಳಗಾವಿ ಲೋಕಸಭಾ ಕ್ಷೇತ್ರದಿಂದ ಸ್ಪರ್ಧಿಸಲು ಹಾಲಿ ಸಂಸದೆ ಮಂಗಲ ಅಂಗಡಿ ಸೇರಿದಂತೆ ಹಲವರು ಬಿಜೆಪಿ ಟಿಕೆಟ್ ಆಕಾಂಕ್ಷಿಗಳು ಇದ್ದಾರೆ. ಆದರೆ ಸೂಕ್ತ ಗೆಲ್ಲುವ ಅಭ್ಯರ್ಥಿ ಗಾಗಿ ಬಿಜೆಪಿ ನಾಯಕರು ಹೆಣಗಾಡುತ್ತಿದ್ದಾರೆ.

ಎಂ. ಜಿ. ಹಿರೇಮಠ ಅವರು ಬೆಳಗಾವಿ ಜಿಲ್ಲಾಧಿಕಾರಿ ಆಗಿದ್ದ ಅವಧಿಯಲ್ಲಿ ಸಲ್ಲಿಸಿದ ಜನಪರ ಆಡಳಿತ ಜಿಲ್ಲೆಯ ಜನತೆ ಜನ ಪ್ರಿಯತೆಗೆ ಸಾಕ್ಷಿ ಆಗಿತ್ತು. ಅದರಲ್ಲೂ ಕರೋನಾ ಕಷ್ಟ ಕಾಲದಲ್ಲಿ ಹಿರೇಮಠ ಅವರು ಜನರ ಕಷ್ಟಕ್ಕೆ ಸ್ಪಂದಿಸಿದ್ದರು. ಅಲ್ಲದೆ ಬೆಳಗಾವಿ ಪ್ರಾದೇಶಿಕ ಆಯುಕ್ತರಾಗಿಯೂ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದರು. ಬಳಿಕ ಅವರು ಜಿಲ್ಲೆಯ ಯುವಕರಿಗೆ ಕೆಎಎಸ್, ಐಎಎಸ್ ನಂತಹ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಉಚಿತ ತರಬೇತಿ ನೀಡುತ್ತ ಬಂದಿದ್ದಾರೆ. ಈಗ ಜನತೆ ಒತ್ತಾಸೆ ಮೇರೆಗೆ ರಾಜಕೀಯ ಸೇರ್ಪಡೆ ಆಗುವ ಮೂಲಕ ಮತ್ತೆ ಜನ ಸೇವೆಗೆ ನಿಂತಿದ್ದಾರೆ. ಆಡಳಿತ ಸೇವೆಯಲ್ಲಿ ಸಾಕಷ್ಟು ಅನುಭವ ಹೊಂದಿರುವ ಎಂ. ಜಿ. ಹಿರೇಮಠ ಅವರು ಜನಪ್ರತಿನಿಧಿ ಆಗಿ ಆಯ್ಕೆ ಆದರೆ ಜನಪರ ಸೇವೆ ನೀಡಲು ಸಾಕಷ್ಟು ಅನುಕೂಲ ಆಗಲಿದೆ. ಹಾಗಾಗಿ ಬಿಜೆಪಿ ನಾಯಕರು ಎಂ.ಜಿ. ಹಿರೇಮಠ ಅವರನ್ನು ಬೆಳಗಾವಿ ಲೋಕಸಭಾ ಕ್ಷೇತ್ರದಿಂದ ಕಣಕ್ಕಿಳಿಸುವ ಸಾಧ್ಯತೆಗಳಿವೆ.

## ತೋಟದಲ್ಲಿ ಕೆಲಸ ಮಾಡುತ್ತಿದ್ದ ವ್ಯಕ್ತಿ ಮೇಲೆ ಕಾಡಾನೆ ಅಟ್ಯಾಕ್



ಹಾಸನ: ತೋಟದಲ್ಲಿ ಕೆಲಸ ಮಾಡುತ್ತಿದ್ದ ಕೂಲಿ ಕಾರ್ಮಿಕನ ಮೇಲೆ ಕಾಡಾನೆ ದಾಳಿ ಮಾಡಲು ಮುಂದಾದ ಘಟನೆ ಸಕಲೇಶಪುರ ತಾಲ್ಲೂಕಿನ ಕೆಸಗುಲಿ ಗ್ರಾಮದಲ್ಲಿ ಇಂದು ಬೆಳಿಗ್ಗೆ ನಡೆದಿದೆ. ಆನೆ ಅಟ್ಯಾಕ್ಗೆ ಬಂದಂತೆ ಕಾರ್ಮಿಕ ತಪ್ಪಿಸಿಕೊಳ್ಳಲು ಮುಂದಾಗಿದ್ದಾನೆ. ಈ ವೇಳೆ ಕೂದಲೆಳೆ ಅಂತರದಲ್ಲಿ ಪಾರಾಗಿದ್ದಾನೆ.

ಇಬ್ಬರು ಕೂಲಿ ಕಾರ್ಮಿಕರು ಪಿಂಟು ಎಸ್ಟೇಟ್‌ನ ಅಡಿಕೆ ತೋಟದಲ್ಲಿ ಕೆಲಸ ಮಾಡುತ್ತಿದ್ದರು. ಈ ವೇಳೆ ಕರಡಿ ಹೆಸರಿನ ಕಾಡಾನೆ ಏಕಾಏಕಿ ದಾಳಿ ಮಾಡಲು ಮುಂದಾಗಿದೆ. ಆನೆ ಬರುತ್ತಿದ್ದಂತೆಯೇ ಓರ್ವ ಕೂಲಿ ಕಾರ್ಮಿಕ ಓಡಿ ತಪ್ಪಿಸಿಕೊಂಡರೆ. ಮತ್ತೋರ್ವ ಮನೆಯ ಬಳಿಗೆ ಓಡಿ ಹೋಗಲು ಮುಂದಾಗಿದ್ದಾನೆ. ಆದರೆ ಕೂದಲೆಳೆ ಅಂತರದಲ್ಲಿ ಆನೆ ದಾಳಿಯಿಂದ ಬಾಚಾವ್ ಆಗಿದ್ದಾನೆ.

# ಲೋಕೋಪಯೋಗಿ ಇಲಾಖೆ ಗುತ್ತಿಗೆದಾರರ ಬಾಕಿ ಹಣ ಹಂತ ಹಂತವಾಗಿ ಬಿಡುಗಡೆ: ಸಚಿವ ಸತೀಶ್ ಜಾರಕಿಹೊಳಿ

ಬೆಂಗಳೂರು: ಲೋಕೋಪಯೋಗಿ ಇಲಾಖೆ ವತಿಯಿಂದ ಕೈಗೊಂಡಿರುವ ಕಾಮಗಾರಿಗಳ ಬಾಕಿ ಬಿಲ್ಲನ್ನು ಗುತ್ತಿಗೆದಾರರಿಗೆ ಹಂತ ಹಂತವಾಗಿ ಪಾವತಿಸಲಾಗುವುದು ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ತಿಳಿಸಿದ್ದಾರೆ.

ಅರಮನೆ ಮೈದಾನದಲ್ಲಿ ನಡೆದ ಗುತ್ತಿಗೆದಾರರ ಸಮಾವೇಶ ನಂತರ ಮಾಧ್ಯಮದವರ ಜೊತೆ ಮಾತನಾಡಿದ ಅವರು, ಗುತ್ತಿಗೆದಾರರು ಅನೇಕ ಬಾರಿ ನಮಗೆ ಭೇಟಿ ನೀಡಿ ಬಾಕಿ ಬಲ್ ಸಮಸ್ಯೆ ಬಗೆಹರಿಸುವಂತೆ ಮನವಿ ಮಾಡಿದ್ದಾರೆ. ಆದರೆ ಇಲ್ಲಿರುವ ಸಮಸ್ಯೆ ಒಮ್ಮೆಲೆ ಬಗೆ ಹರಿಸಲು ಸಾಧ್ಯವಿಲ್ಲ. 6 ತಿಂಗಳು ಇಲ್ಲವೇ 1 ವರ್ಷದೊಳಗೆ ಇವರ ಸಮಸ್ಯೆ ಹಂತ ಹಂತವಾಗಿ ಬಗೆಹ-ರಿಸಲಾಗುವುದು ಎಂದು ಹೇಳಿದರು.

ಸದ್ಯ ಲೋಕೋಪಯೋಗಿ ಇಲಾಖೆ ವತಿಯಿಂದ ಗುತ್ತಿಗೆದಾರರಿಗೆ ಇನ್ನೂ ಸಾಕಷ್ಟು ಬಾಕಿ ಬಿಲ್ ಕೊಡಬೇಕಾಗಿದೆ. ಈಗ ಕೊಟ್ಟಂತಹ ಬಿಲ್ ಅವರಿಗೂ ತೃಪ್ತಿ ಇಲ್ಲ. ನಮಗೂ ತೃಪ್ತಿ ಇಲ್ಲ. ಸದ್ಯ ಶೇ.25 ರಷ್ಟು ಸಮಸ್ಯೆ ಬಗೆಹ-ರಿಸಲಾಗಿದೆ. ಇನ್ನೂ ಶೇ.75ರಷ್ಟು ಸಮಸ್ಯೆ ಹಾಗೆ ಉಳಿದುಕೊಂಡಿದೆ. ಇದು ನಮ್ಮ ಇಲಾಖೆದಷ್ಟೆ ಅಲ್ಲ. ಎಲ್ಲಇಲಾಖೆಗಳಲ್ಲಿಯೂ ಈ ಸಮಸ್ಯೆ ಇದ್ದೇ ಇದೆ ಎಂದರು.

ಗುತ್ತಿಗೆದಾರರು ಏನೆ ಆರೋಪ ಮಾಡುವದಿದ್ದರೆ ಬಿಜೆಪಿಯವರ ಮೇಲೆ ಮಾಡಲಿ: ಗುತ್ತಿಗೆದಾರ ಏನೆ ಆರೋಪ ಮಾಡುವದಿದ್ದರೆ ನಮ್ಮ ಮೇಲೆ ಮಾಡುವುದು ಸರಿಯಲ್ಲ. ಹಿಂದಿನ ಸರ್ಕಾರದಲ್ಲಿ ಲೋಕೋಪಯೋಗಿ ಇಲಾಖೆ ವತಿಯಿಂದ ಸಾಕಷ್ಟು ಬಾಕಿ ಬಿಲ್ ಉಳಿದಿದ್ದು, ಈಗ ಏನೇ ಇದ್ದರೂ ಬಿಜೆಪಿಯವರ ಮೇಲೆ ಆರೋಪ ಮಾಡಲಿ ಎಂದ ಅವರು, ಬಿಜೆಪಿ ಸರ್ಕಾರದಲ್ಲಿ ಅನುದಾನ ಇಲ್ಲದಿದ್ದರೂ ಹೊಸ ಕಾಮಗಾರಿ ಮಾಡಲು ಅನುಮತಿ ನೀಡಿದ್ದರಿಂದ ಈ ಸಮಸ್ಯೆ ಉದ್ಭವಾಗಿದೆ. ಇದಕ್ಕೆಲ್ಲ ನಾವು ಹೊಣೆಗಾರರಲ್ಲ. ಆದ-'ರೂ ಕೂಡಾ ಬಾಕಿ ಬಲ್ ಕೊಡಲು ಪ್ರಯತ್ನ ಮಾಡಲಾಗುತ್ತಿದೆ ಎಂದು ಹೇಳಿದರು.



1 ಕೋಟಿವರೆಗೆ ಇರುವ ಕೆಲಸಕ್ಕೆ ಬಿಲ್ ಪಾವತಿ: 5 ಲಕ್ಷ, 10 ಲಕ್ಷ, 50 ಲಕ್ಷ, 70 ಲಕ್ಷ ಹೀಗೆ 1 ಕೋಟಿ ಒಳಗಡೆ ಬಾಕಿ ಬಿಲ್ ಉಳಿದವರ ಸುಮಾರು 1045 ಜನಕ್ಕೆ ಶೇ. 50ರಷ್ಟು ಬಾಕಿ ಬಲ್ ನೀಡಲಾಗಿದೆ. ಬರುವ ದಿನಗಳಲ್ಲಿ ಇನ್ನು ಬಾಕಿ ಇರುವ ಬಿಲ್ ಗಳನ್ನು ಹಂತ ಹಂತವಾಗಿ ನೀಡಲಾಗುವುದು. ಸದ್ಯ ಗುತ್ತಿಗೆದಾರರಿಗೆ ಅನಲೈನ್ ಮೂಲಕ ಹಣ ನೀಡಲಾಗಿದೆ. ಇನ್ನು ಮುಂದೆ ಶೇಕಡಾವಾರು ನೀಡಲಾಗುವುದು. ಅಂ-ದರೆ ಒಟ್ಟು 4 ಸಾವಿರ ಕೋಟಿ ಹಣ ಇದ್ದರೆ ಅದರಲ್ಲಿ 1 ಸಾವಿರ ಕೋಟಿ ಬಂದರೆ ಪ್ರತಿಯೊಬ್ಬರಿಗೂ ಅಂದಾಜು ಕೆಲಸದ ಅನುಗುನವಾಗಿ ಶೇ. 20ರಷ್ಟು ಹಣ ನೀಡಲಾಗುವುದು ಎಂದು ಹೇಳಿದರು.

4 ಸಾವಿರ ಕೋಟಿ ಬಾಕಿ ಬಿಲ್ ಇದೆ: ಗುತ್ತಿಗೆದಾರರಿಗೆ ನಮ್ಮ ಇಲಾಖೆಯಲ್ಲಿ ಸುಮಾರು 4 ಸಾವಿರ ಕೋಟಿ ರೂ. ಕೊಡಬೇಕಾದ ಬಾಕಿ ಬಿಲ್ ಇದೆ. ಮುಖ್ಯವಾಗಿ ಈ ಹಣ ಬಜೆಟ್‌ನಲ್ಲಿ ಇಲ್ಲದಿರುವ ಹಣವಾಗಿರುವದ-ರಿಂದ ನಮಗೆ ಸಮಸ್ಯೆಯಾಗಿದೆ. ಫೈನಾಸ್ಸನವರು ಬಜೆಟ್ ಎಷ್ಟಿದೆ ಅಷ್ಟೆ ಹಣ ಕೊಡುತ್ತಾರೆ ಹೊರತು ಹೆಚ್ಚುವ-ರಿಯಾಗಿ ಹಣ ಕೊಡುವದಿಲ್ಲ. ಈಗಾಗಲೇ ಸಿಎಂ ಅವರಿಗೆ ಇನಷ್ಟು ಹಣ ನೀಡವಂತೆ ಕೇಳಲಾಗಿದೆ. ಸಿಎಂ ಅವರು ಸಹ ಕೊಡುತ್ತೇನೆ ಎಂದು ಭರವಸೆ ನೀಡಿದ್ದಾರೆ. ಕೊಟ್ಟರೆ ಸ್ವಲ್ಪ ಸಮಸ್ಯೆ ಬಗೆ ಹರಿಯಲಿದೆ ಎಂದು ಭರವಸೆ ನೀಡಿದರು.

ಪಾಕ್ ಪರ ಘೋಷಣೆ ಕೂಗಿದವರ ವಿರುದ್ಧ ಕ್ರಮ: ವಿಧಾನಸೌಧದಲ್ಲಿ ಪಾಕ್ ಪರ ಘೋಷಣೆ ಕೂಗಿದವರನ್ನು ಸರ್ಕಾರ ರಕ್ಷಣೆ ಮಾಡಲು ಹೊರಟಿದೆ ಎಂಬ ಮಾಧ್ಯಮದವರ ಪ್ರಶ್ನೆಗೆ ಉತ್ತ-ರಿಸದ ಅವರು, ವಿಧಾನಸೌಧದಲ್ಲಿ ಪಾಕ್ ಪರ ಘೋಷಣೆ ಕೂಗಿದವರು ಯಾವುದೇ ಸಚಿವ ಹಾಗೂ ಶಾಸಕರಲ್ಲ. ಅವನೊಬ್ಬ ಸಾಮಾನ್ಯ ಕಾರ್ಯಕರ್ತ. ಹೀಗಾಗಿ ಪಾಕ್ ಪರ ಘೋಷಣೆ ಕೂಗಿದ್ದು, ಸಾಭೀತಾದರೆ ಖಂಡಿತಾ ಕ್ರಮ ಕೈಗೊಳ್ಳಲಾಗುವುದು. ಸದ್ಯ ಬಿಜೆಪಿಯವರಿಗೆ ಮಾಡಲು ಕೆಲಸವಿಲ್ಲ, ಹೀಗಾಗಿ ಸುಮ್ಮನೇ ಏನಾದರೊಂದು ಕಲಹ ಎಬ್ಬಿಸುವುದು ಬಿಜೆಪಿಯವರ ಕೆಲಸವಾಗಿದೆ ಎಂದರು.

ಇನ್ನು ಫೈನಲ್ ಆಗಿಲ್ಲ ಅಭ್ಯರ್ಥಿಗಳ ಹೆಸರು: ಬೆಳಗಾವಿ ಲೋಕಸಭಾ ಅಭ್ಯರ್ಥಿಗಳ ಇನ್ನು ಫೈನಲ್ ಆಗಿಲ್ಲ. ಇನ್ನೊಂದು ಸಭೆ ಬಳಿಕ ಸಿಎಂ-ಡಿಸಿಎಂ ಅಭ್ಯರ್ಥಿಗಳ ಯಾರು ಎಂದು ಫೈನಲ್ ಮಾಡುತ್ತಾರೆ. ಮುಖ್ಯವಾಗಿ ಈ ಭಾರಿ ಲೋಕಸಭಾ ಚುನಾವಣೆಯಲ್ಲಿ ನಮ್ಮ ಕುಟುಂಬದಿಂದ ಯಾರು ಸ್ಪರ್ಧಿಸುತ್ತಿಲ್ಲ. ಹೆಬ್ಬಾಳಕರ ಅವರು ತಮ್ಮ ಮಗನಿಗೆ ಟಿಕೆಟ್ ಕೇಳಿದ್ದಾರೆ. ಅವರ ಮಗನಿಗೆ ಟಿಕೆಟ್ ಕೊಡುವುದು, ಬಿಡುವುದು ಹೈಕಮಾಂಡಗೆ ಬಿಟ್ಟಿದ್ದು ಎಂದು ಹೇಳಿದರು.

## ಎಲ್ಲರ ವಿಶ್ವಾಸಿದಿಂದ ಪ್ರಾಮಾಣಿಕವಾಗಿ ಕೆಲಸ ಮಾಡುವೆ: ಡಾ.ಆರ್ ಎಂ.ಮಂಜುನಾಥ ಗೌಡ

ಶಿವಮೊಗ್ಗ: ಮಲೆನಾಡು ಅಭಿವೃದ್ಧಿ ಮಂಡಳಿಯು 13ಜಿಲ್ಲೆಗಳ ವ್ಯಾಪ್ತಿಯನ್ನು ಹೊಂದಿದೆ. 65 ಕ್ಕೂ ಹೆಚ್ಚು ಶಾಸಕರು, ಸಂಸದರು, ಅಧಿಕಾ-ರಿಗಳನ್ನೊಂಡಿದ್ದು ಎಲ್ಲರ ವಿಶ್ವಾಸಕ್ಕೆ ತೆಗೆದುಕೊಂಡು ಅಭಿವೃದ್ಧಿ ಕಾರ್ಯವನ್ನು ಮಾಡುತ್ತೇನೆ ಎಂದು ನೂತನ ಎಂಎಡಿಬಿ ಅಧ್ಯಕ್ಷರಾದ ಡಾ.ಆರ್ ಎಂ ಮಂಜುನಾಥ ಗೌಡ ತಿಳಿಸಿದರು.

ನಗರದ ಮಲೆನಾಡು ಅಭಿವೃದ್ಧಿ ಮಂಡಳಿಯ ಕಚೇ-ರಿಯ ಆವರಣದಲ್ಲಿ ಇಂದು ಮಲೆನಾಡು ಅಭಿವೃದ್ಧಿ ಮಂಡಳಿಯ ನೂತನ ಅಧ್ಯಕ್ಷರಾಗಿ ಅಧಿಕಾರವನ್ನು ವಹಿಸಿಕೊಂಡು ಮಾತನಾಡಿದ ಅವರು ಮೊದಲು ಬಂಗಾರಪ್ಪನವರು ಮುಖ್ಯಮಂತ್ರಿ ಆಗಿದ್ದ ಅವಧಿಯಲ್ಲಿ ಮಲೆನಾಡು ಅಭಿವೃದ್ಧಿ ಮಂಡಳಿ ಸ್ಥಾಪನೆಗೆ ಮುನ್ನುಡಿ ಬರೆದಿದ್ದರು. ನಂತರ ಅದು ಬೆಳೆದುಕೊಂಡು ಬಂದಿದೆ ಸರ್ಕಾರದಿಂದ ಆಗದೇ ಇರುವ



ಕೆಲಸಗಳನ್ನು ಈ ಮಂಡಳಿಯಿಂದ ಮಾಡಬಹುದಾಗಿದೆ ಎಂದರು.

ಅಧ್ಯಕ್ಷರ ಅಧಿಕಾರ ಹೆಸ-ರಿಗೆ ಮಾತ್ರವಲ್ಲ, ಇದನ್ನು ನಿಭಾಯಿಸುವುದು ಸುಲಭದ ಕೆಲಸವಲ್ಲ ಹತ್ತಾರು ಎಂಎಲ್ಎ ಗಳು, ಸಂಸದರು ಎಲ್ಲಾರಿಗೂ ಅನುದಾನ ನೀಡಿ ಅಭಿವೃದ್ಧಿ ಮಾಡಬೇಕಾಗಿದೆ. ಆದರೆ ಪ್ರಸ್ತುತ ಬರಗಾಲದ ಸಂದರ್ಭದಲ್ಲಿ ಜನ ಮೂಲಭೂತ ಸೌಲಭ್ಯಗಳ ಕುರಿತು ಹೆಚ್ಚಿನ ಗಮನ ನೀಡಬೇಕಾಗಿದೆ. ಮುಖ್ಯಮಂತ್ರಿಗಳು, ಉಪ ಮುಖ್ಯಮಂತ್ರಿಗಳು ಅವರ ಸಹಕಾರದಿಂದ ಮುಂದಿನ ದಿನಗಳಲ್ಲಿ ಹೆಚ್ಚಿನ ಅನುದಾನವನ್ನು ತಂದು ಮಲೆನಾಡಿನ ಸಮಸ್ಯೆಗಳ ಕುರಿತು ಪರಿಶೀಲಿಸಿ ಕೆಲಸವನ್ನು ಮಾಡಬೇಕಾಗಿದೆ ಎಲ್ಲರ ಸಹಕಾರ ಅಗತ್ಯವಾಗಿದೆ ಎಂದರು.

ಸರ್ಕಾರದಲ್ಲಿ ಆಗದೇ ಇರುವ ಕೆಲಸಗಳು ಮಲೆನಾಡು ಅಭಿವೃದ್ಧಿ ಮಂಡಳಿಯಿಂದ ಮಾಡಲು ಅವಕಾಶ ಇದೆ. ಮಲೆನಾಡಿನ ಅನೇಕ ಸಮಸ್ಯೆಗಳು ಮತ್ತು ತುರ್ತು ಸಂದರ್ಭದ ಕೆಲಸಗಳನ್ನು ಮಾಡಬಹುದು ಮುಂದಿನ ದಿನಗಳಲ್ಲಿ ಮಲೆನಾಡು ಪ್ರದೇಶದ ಪ್ರತಿ ಭಾಗದಲ್ಲಿಯೂ ಉತ್ತಮವಾದ ಕೆಲಸಗಳನ್ನು ಮಾಡಲಿದ್ದೇವೆ. ಸರ್ಕಾರ ಇನ್ನೂ ನಾಲ್ಕು ವರ್ಷಗಳ ಕಾಲವೂ ಉತ್ತಮ ಆಡಳಿತ ನೀಡಲಿದೆ. ಆರ್ಥಿಕ ಸಂಕಷ್ಟ ಬರಗಾಲದಲ್ಲೂ ಗ್ಯಾರಂಟಿ ಯೋಜನೆಗಳು ಜನ-ರಿಗೆ ನೀಡಲಾಗಿದೆ. ಅದೇ ರೀತಿ ಎಲ್ಲಾ ನಿಗಮಗಳಿಗೂ ಹಣ ನೀಡಿ ಅಭಿವೃದ್ಧಿ ಕಡೆ ಹೆಚ್ಚು ಗಮನವನ್ನು ನೀಡಲಿದ್ದು ವಿಶೇಷವಾಗಿ ಮಲೆನಾಡಿನ ಅಭಿವೃದ್ಧಿಯ ಕಾರ್ಯ ನಡೆಲಿದೆ ಎಂದರು.

ಈ ಸಂದರ್ಭದಲ್ಲಿ ಶಾಸಕರು ಹಾಗೂ ಕರ್ನಾಟಕ ರಾಜ್ಯ ಅರಣ್ಯ ಕೈಗಾರಿಕಾ ನಿಗಮದ ಅಧ್ಯಕ್ಷರಾದ ಬೇಳೂರು ಗೋಪಾಲ ಕೃಷ್ಣ, ಚನ್ನಗಿರಿಯ ಶಾಸಕ ಬಸವರಾಜ್ ಶಿವಗಂಗಾ, ಸೂಡ ಅಧ್ಯಕ್ಷರಾದ ಹೆಚ್ ಎಸ್ ಸುಂದರೇಶ್, ಮಾಜಿ ಸಂಸದರಾದ ಆಯನೂರು ಮಂಜುನಾಥ, ಮುಖಂಡರಾದ ಎಂ ಶ್ರೀಕಾಂತ್,ಮರಿಯಪ್ಪ, ಬಲ್ಕಿಶ್ ಬಾನು, ಗೋಣಿ ಮಾಲತೇಶ್, ಗೀತಾ ರಮೇಶ್, ಮೈಲಾರಪ್ಪ ಮತ್ತು ಅಧಿಕಾರಿ ವರ್ಗದವರು ಸಿಬ್ಬಂದಿಗಳು ಇದ್ದರು.

## ಭೀಕರ ಬರಗಾಲದ ನಡುವೆಯೂ ಸಿದ್ಧಾರೂಢ ಮಠಕ್ಕೆ 30 ಟ್ರ್ಯಕ್ಟರ್ ಮೇವು ನೀಡಿದ ರೈತರು



ಗದಗ: ಭೀಕರ ಬರದಲ್ಲೂ ರೈತರು ಹುಬ್ಬಳ್ಳಿಯ ಸಿದ್ಧಾರೂಢ ಮಠಕ್ಕೆ 30 ಟ್ರ್ಯಕ್ಟರ್ ಮೇವು ರವಾನೆ ಮಾಡಿ ಔದಾರ್ಯ ಮೆರೆದಿದ್ದಾರೆ.

ಗದಗ ಜಿಲ್ಲೆಯ ರೋಣ ತಾಲೂಕಿನ ಮಾಡಲಗೇರಿ ಗ್ರಾಮದ ರೈತರು ಹುಬ್ಬಳ್ಳಿ ಸಿದ್ಧಾರೂಢ ಮಠಕ್ಕೆ 30 ಟ್ರ್ಯಕ್ಟರ್ ಮೇವು ನೀಡಿದ್ದಾರೆ.

ಮಾಡಲಗೇರಿ ಗ್ರಾಮಕ್ಕೆ ತಾಯಿ ಬನಶಂಕರಿದೇವಿ ಆಶೀರ್ವಾದ ಇದೆ ಎಂಬ ನಂಬಿಕೆ ಗ್ರಾಮಸ್ಥರದ್ದು. ನಾಡಿನ ತುಂಬೆಲ್ಲ ಬರಗಾಲದ ಛಾಯೆ ಆವರಿಸಿದೆ. ಆದರೆ ಈ ಗ್ರಾಮದ ಪ್ರತಿಯೊಬ್ಬ ರೈತರು ಸಾಕಾಗುವಷ್ಟು ಜೋಳ ಬೆಳೆದಿದ್ದಾರೆ.

ಪ್ರತಿ ಎಕರೆಗೆ 8 ರಿಂದ 10 ಚೀಲದವರೆಗೆ ಇಳುವರಿ ಬಂದಿದೆ. ಮಾಡಲಗೇರಿ ಗ್ರಾಮದ ರೈತರು ಪ್ರತಿ ವರ್ಷ ಹುಬ್ಬಳ್ಳಿ ಸಿದ್ಧಾರೂಢ ಮಠದ ಗೋ ಶಾಲೆಗೆ ಸುಮಾರು 30 ಟ್ರ್ಯಕರ್ನಷ್ಟು ಮೇವು ನೀಡುತ್ತಾ ಬಂದಿದ್ದಾರೆ. ಮಠಕ್ಕೆ ಸ್ವತಃ ರೈತರೇ ಮೇವು ಮುಟ್ಟಿಸಿ ಬಣವಿಯನ್ನು ಒಟ್ಟಿ ಬರ್ತಾರೆ ಅನ್ನೋದು ವಿಶೇಷ.

# ಪಲ್ಸ್ ಪೋಲಿಯೋ ಕಾರ್ಯಕ್ರಮ ಯಶಸ್ವಿಗೆ ಸಾರ್ವಜನಿಕರ ಸಹಕಾರ, ಸಹಭಾಗಿತ್ವವಿದೆ: ಜಿಲ್ಲಾ ಆರೋಗ್ಯ ಅಧಿಕಾರಿ ಡಾ.ಶಶಿ ಪಾಟೀಲ

ಧಾರವಾಡ: ಪಲ್ಸ್ ಪೋಲಿಯೋ ರಾಷ್ಟೀಯ ಕಾರ್ಯಕ್ರಮವಾಗಿದ್ದು, ಸಾರ್ವಜನಿಕರ ಸಹಭಾಗಿತ್ವದಲ್ಲಿ ಜಿಲ್ಲೆಯ ಸಂಪೂರ್ಣ ಗುರಿ ಸಾಧಿಸಲು ಯೋಜನೆ ರೂಪಿಸಲಾಗಿದೆ. ಲಯನ್ಸ್, ರೋಟರಿ, ಐಎಂಎ ಅಂತಹ ಸಂಸ್ಥೆಗಳು ಸಹ ಸಹಕಾರ ನೀಡುತ್ತಿವೆ. ಈ ಪಲ್ಸ್ ಪೋಲಿಯೋ ಅಭಿಯಾನದಲ್ಲಿ ಜಿಲ್ಲೆಯ ಐದು ವರ್ಷದೊಳಗಿನ ಸುಮಾರು 2,05,113 ಮಕ್ಕಳಿಗೆ ಲಸಿಕೆ ಹಾಕುವ ಗುರಿ ಹೊಂದಲಾಗಿದೆ ಎಂದು ಜಿಲ್ಲಾ ಆರೋಗ್ಯ ಅಧಿಕಾರಿ ಡಾ.ಶಶಿ ಪಾಟೀಲ ಅವರು ಹೇಳಿದರು.

ಅವರು ಇಂದು ಬೆಳಿಗ್ಗೆ ಧಾರವಾಡ ನವೀಕೃತ ಗ್ರಾಮೀಣ ಮತ್ತು ಉಪನಗರ ಬಸ್ ನಿಲ್ದಾಣ ಪಕ್ಕದಲ್ಲಿರುವ ಮಹಾನಗರಪಾಲಿಕೆ ಅಧೀನದ ಸರಕಾರಿ ಹೆರಿಗೆ ಆಸ್ಪತ್ರೆಯಲ್ಲಿ ಆಯೋಜಿಸಿದ್ದ ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಅಭಿಯಾನ ಚಾಲನಾ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ, ಮಾತನಾಡಿದರು.

ಪಲ್ಸ್ ಪೋಲಿಯೋ ನಿರ್ಮೂಲನೆಯಲ್ಲಿ ನಮ್ಮ ಭಾರತ ದೇಶವು ಗಣನೀಯ ಪ್ರಗತಿಯನ್ನು ಸಾಧಿಸಿದೆ. ಆದರೆ ಪಕ್ಕದ ರಾಷ್ಟ್ರಗಳಾದ ಪಾಕಿಸ್ತಾನ, ಅಫಘಾನಿಸ್ತಾನ ದೇಶಗಳಲ್ಲಿ ಪೋಲಿಯೋ ವೈರಸ್ ಪ್ರಕರಣಗಳು ವರದಿಯಾಗುತ್ತಿರುವುದರಿಂದ ಮತ್ತೆ ನಮ್ಮಲ್ಲಿ ಪೋಲಿಯೋ ಪ್ರಕರಣಗಳು ಬರಬಹುದಾದ ಸಾಧ್ಯತೆ ಇರುವುದರಿಂದ ನಾವು ಪಲ್ಸ್ ಪೋಲಿಯೋ ಕಾರ್ಯಕ್ರಮ ಮಾಡಿ, ಐದು ವರ್ಷದೊಳಗಿನ ಎಲ್ಲ ಮಕ್ಕಳಿಗೆ ಪೋಲಿಯೋ ಲಸಿಕೆ ನೀಡುವುದು ಅವಶ್ಯಕವಾಗಿದೆ ಎಂದು ಡಾ.ಶಶಿ ಪಾಟೀಲ ತಿಳಿಸಿದರು.

ಪಲ್ಸ್ ಪೋಲಿಯೋ ಕಾರ್ಯಕ್ರಮದ ಅಂಗವಾಗಿ ಇಂದು ಪೋಲಿಯೋ ಬೂತ್ಗಳಲ್ಲಿ ಐದು ವರ್ಷದೊಳಗಿನ ಮಕ್ಕಳಿಗೆ ಲಸಿಕೆಯನ್ನು ನೀಡಲಾಗುವುದು. ಗ್ರಾಮೀಣ ಪ್ರದೇಶದಲ್ಲಿ



ಮಾರ್ಚ್ 4 ಮತ್ತು 5 ರಂದು ಹಾಗೂ ನಗರ ಪ್ರದೇಶದಲ್ಲಿ ಮಾರ್ಚ್ 4 ರಿಂದ 6 ರವರೆಗೆ ಮನೆ ಮನೆ ಭೇಟಿ ನೀಡುವ ಮೂಲಕ ಆರೋಗ್ಯ ಕಾರ್ಯಕರ್ತೆಯರು ಐದು ವರ್ಷದೊಳಗಿನ ಮಕ್ಕಳಿಗೆ ಪೋಲಿಯೋ ಲಸಿಕೆಯನ್ನು ನೀಡಲಿದ್ದಾರೆ ಎಂದು ಅವರು ಹೇಳಿದರು.

ಸಾರ್ವಜನಿಕರು ಈ ಪಲ್ಸ್ ಪೋಲಿಯೋ ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳಬೇಕು. ಜಿಲ್ಲೆಯಲ್ಲಿ ಈಗಾಗಲೇ ಸಿದ್ದಪಡಿಸಿರುವ ಕ್ರೀಯಾ ಯೋಜನೆ ಅನುಸಾರ ಹಲವು ಇಲಾಖೆಗಳ ಸಹಯೋಗದಲ್ಲಿ ಕಾರ್ಯಕ್ರಮವನ್ನು ಮಾಡಲಾಗುತ್ತಿದೆ ಎಂದು ತಿಳಿಸಿದರು.

ಜಿಲ್ಲಾ ಆರ್ಸಿ.ಎಚ್.ಓ ಅಧಿಕಾರಿ ಡಾ.ಸುಜಾತಾ ಹಸವಿಮಠ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಐದು ವರ್ಷದೊಳಗಿನ ಜಿಲ್ಲೆಯ 2,05,113 ಮಕ್ಕಳಿಗೆ ಪೋಲಿಯೋ ಹನಿ ಹಾಕುವ ಗುರಿ ಹೊಂದಲಾಗಿದೆ. ಒಟ್ಟು 891 ಲಸಿಕಾ ಕೇಂದ್ರಗಳನ್ನು ತೆರೆಯಲಾಗಿದ್ದು, 92 ಟ್ರಾಂಜಿಸ್ಟ್ ತಂಡಗಳನ್ನು ನೇಮಿಸಲಾಗಿದೆ. ಮತ್ತು 57 ಮೊಬೈಲ್ ತಂಡಗಳನ್ನು ಸಹ ರಚಿಸಲಾಗಿದೆ. ಪಲ್ಸ್ ಪೋಲಿಯೋ ಯಶಸ್ವಿಗಾಗಿ 3,822 ಜನ ವ್ಯಾಕ್ಸಿನೇಟರ್ಸ್ ಮತ್ತು 212 ಜನ ಮೇಲ್ವಿಚಾರಕರನ್ನು ನೇಮಿಸಲಾಗಿದೆ. 4 ದಿನಗಳ ಈ ಲಸಿಕಾ ಅಭಿಯಾನದಲ್ಲಿ ಒಟ್ಟು 4,21,180 ಮನೆಗಳಿಗೆ ಆರೋಗ್ಯ ಕಾರ್ಯಕರ್ತರು ಭೇಟಿ ನೀಡಲಿದ್ದಾರೆ ಎಂದು ಅವರು ತಿಳಿಸಿದರು.

ಮುಖ್ಯ ಅತಿಥಿಗಳಾಗಿದ್ದ,ಮಹಾನಗರಪಾಲಿಕೆ ಸದಸ್ಯ ಸುರೇಶ ಬೆದ್ರೆ ಅವರು ಮಗುವಿಗೆ ಲಸಿಕೆ ಹಾಕುವ ಮೂಲಕ ಪಲ್ಸ್ ಪೋಲಿಯೋ ಅಭಿಯಾನಕ್ಕೆ ಚಾಲನೆ ನೀಡಿದರು. ಟಿ.ಬಿ.ಕಾರ್ಯಕ್ರಮದ ರಾಜ್ಯ ನೋಡಲ್ ಅಧಿಕಾರಿ ಡಾ.ಅನಿಲ್ ಅವರು ಮಾಯನಾಡಿದರು. ಐಇಸಿ ವಿಭಾಗದ ಕೆ.ಬಿ.ಚಬ್ಬಾಣ ಸ್ವಾಗತಿಸಿದರು.

ಕಾರ್ಯಕ್ರಮದಲ್ಲಿ ಹೆರಿಗೆ ಆಸ್ಪತ್ರೆಯ ವೈದ್ಯಾಧಿಕಾರಿ ಡಾ.ಅಶ್ವಿನಿ ಅನಂತಯ್ಯ, ಧಾರವಾಡ ತಾಲೂಕು ವೈದ್ಯಾಧಿಕಾರಿ ಡಾ.ಕೆ.ಎನ್.ತನುಜಾ, ಐಎಂಎ ಜಿಲ್ಲಾ ಅಧ್ಯಕ್ಷ ಡಾ.ಸತೀಶ ಇರಕಲ್ಲ, ಆರ್ಸಿ.ಎಚ್. ಕ್ಲಬ್ ಅಧ್ಯಕ್ಷ ಅರುಣ ಹೆಬ್ಳಿಕರ, ಲಯನ್ಸ್ ಕ್ಲಬ್ ದ ಅನಿರುದ್ಧ ಮತ್ತು ಡಾ.ಶೋಭಾ ಕರಿಗುದ್ರಿ, ಶ್ರೇಯಾ ನರ್ಸಿಂಗ್ ಕಾಲೇಜು ವಿದ್ಯಾರ್ಥಿಗಳು, ಇತರರು ಭಾಗವಹಿಸಿದ್ದರು.

# ಕರ್ನಾಟಕ ರಾಜ್ಯ ಪೊಲೀಸ್ ಗೆ ಸುವರ್ಣ ಮಹೋತ್ಸವದ ಸಂಭ್ರಮ

## ಮಾ.10 ರಂದು ಮಾದಕ ಮುಕ್ತ ಕರ್ನಾಟಕಕ್ಕಾಗಿ "ಫಿಟ್ನೆಸ್ ಫಾರ್ ಆಲ್" ಓಟ ಆಯೋಜನೆ

ಬೆಂಗಳೂರು: ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯು ತನ್ನ 50ನೇ ವರ್ಷದ ಸುವರ್ಣ ಮಹೋತ್ಸವದ ಸಂಭ್ರಮದಲ್ಲಿದ್ದು, ರಚನಾತ್ಮಕ ಚಟುವಟಿಕೆಗಳನ್ನು ಸ್ಮರಣೀಯ ಕಾರ್ಯಕ್ರಮಗಳ ಮೂಲಕ ಚಿನ್ನದ ಹಬ್ಬ ಆಚರಣೆಯಲ್ಲಿ ಪೊಲೀಸ್ ಇಲಾಖೆ ತೊಡಗಿದೆ.

"ಮಾದಕ ವಸ್ತು ಮುಕ್ತ ಕರ್ನಾಟಕ" ನಿರ್ಮಾಣ ಮಾಡುವ ಸದಾಶಯದೊಂದಿಗೆ ಭಾರತೀಯ ಸ್ಟೇಟ್ ಬ್ಯಾಂಕ್ (ಎಸ್‌ಬಿಐ) ಸಹಯೋಗದಲ್ಲಿ "ಫಿಟ್‌ನೆಸ್ ಫಾರ್ ಆಲ್" 5 ಕಿ.ಮೀ ಮತ್ತು 10 ಕಿ.ಮೀ ಓಟವನ್ನು ಆಯೋಜಿಸಲಾಗುತ್ತಿದೆ. ಓಟದಲ್ಲಿ ಎಲ್ಲಾ ವಯೋಮಾನದವರು ಪಾಲ್ಗೊಳ್ಳಲು ಅವಕಾಶ ಕಲ್ಪಿಸಿದ್ದು, ಈಗಾಗಲೇ ನೋಂದಣಿ ಕಾರ್ಯ ಪ್ರಾರಂಭವಾಗಿದೆ. ಬೆಂಗಳೂರು ನಗರ, ರಾಜ್ಯದ ವಿವಿಧ ಭಾಗಗಳು, ರಾಷ್ಟ್ರದಾದ್ಯಂತ ಎಲ್ಲಾ ವಯೋಮಾನದ ಸರಿ ಸುಮಾರು 10,000 ಕ್ಕೂ ಹೆಚ್ಚು ಓಟಗಾರರು ಭಾಗವಹಿಸುವ ನಿರೀಕ್ಷೆಯಿದೆ.

ರಾಜ್ಯದ ಶಕ್ತಿ ಕೇಂದ್ರ ವಿಧಾನಸೌಧದ ಮುಂಭಾಗದಿಂದ ಓಟ ಪ್ರಾರಂಭವಾಗಿ, ಹಸಿರು ಹೊದಿಕೆಯ ಕಬ್ಬನ್ ಉದ್ಯಾನವನದ ಮುಖಾಂತರವಾಗಿ ಮತ್ತೆ ವಿಧಾನಸೌಧದ ಮುಂಭಾಗದಲ್ಲಿ ಮುಕ್ತಾಯಗೊಳ್ಳಲಿದೆ. ಈ ಓಟವು ಹಸಿರು ಬೆಂಗಳೂರು, ಮಾದಕ ವಸ್ತು ಮುಕ್ತ ಕರ್ನಾಟಕ ಮತ್ತು ಸೈಬರ್ ಅಪರಾಧ ಕುರಿತು ಜಾಗೃತಿ ಮೂಡಿಸಲಿದೆ. ಈ ಓಟವು ನಾಗರೀಕರನ್ನು ಆರೋಗ್ಯಕರ ಜೀವನಕ್ಕೆ ಹೊಂದಿಕೊಳ್ಳುವಂತೆ ಅರಿವು ಮೂಡಿಸಿ ಉತ್ತೇಜಿಸುವ ಗುರಿ ಹೊಂದಿದೆ.

ಓಟಗಾರರು ಹಾದುಹೋಗುವ ಆಯ್ದ ಸ್ಥಳಗಳಲ್ಲಿ ಕರ್ನಾಟಕದ ರಾಜ್ಯದ ಹೆಮ್ಮೆಯ ಪೊಲೀಸ್ ಬ್ಯಾಂಡ್ ತಂಡದ ಸಮುಧುರ ಸಂಗೀತ ಕಾರ್ಯಕ್ರಮ ಆಯೋಜಿಸಲಾಗುತ್ತಿದೆ. ಕೊನೆಯಲ್ಲಿ ಕರ್ನಾಟಕ ಪೊಲೀಸ್ ಮೌಂಟೆಡ್ ಕಂಪನಿಯ ಕುದುರೆಗಳು ಭಾಗವಹಿಸಲಿದ್ದು, ಓಟವನ್ನು ಹೆಚ್ಚು ಆಕರ್ಷಣಿಯವಾಗಿ ಮಾಡಲು ಕ್ರಮ ಕೈಗೊಳ್ಳಲಾಗಿದೆ ಹಾಗೂ ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯ ಅತ್ಯುತ್ತಮ ಓಟಗಾರರು ಸಹ ಈ ಓಟದಲ್ಲಿ ಭಾಗವಹಿಸಲಿದ್ದಾರೆ.




ಈ ಓಟವು 5 ಕಿ.ಮೀ ಮತ್ತು 10 ಕಿ.ಮೀ.ನ ಪ್ರತಿಯೊಂದು ಮೂರು ವಿಭಿನ್ನ ವಿಭಾಗಗಳನ್ನು ಒಳಗೊಂಡಿದ್ದು ಒಟ್ಟು ರೂ. 18 ಲಕ್ಷಕ್ಕೂ ಹೆಚ್ಚಿನ ಮೊತ್ತದ ಆಕರ್ಷಕ ನಗದು ಬಹುಮಾನ ನೀಡಿ ಗೌರವಿಸಲಾಗುತ್ತದೆ. 10 ಕಿ.ಮೀ ಓಟದ ವಿಜೇತರಿಗೆ ಪ್ರಥಮ ಬಹುಮಾನ ರೂ. 1.00 ಲಕ್ಷಗಳನ್ನು ಪುರುಷ ಮತ್ತು ಮಹಿಳಾ ವಿಜೇತರಿಗೆ ಪ್ರತ್ಯೇಕವಾಗಿ 3 ವಿಭಿನ್ನ ವಿಭಾಗಗಳ ಅಡಿಯಲ್ಲಿ ನೀಡಲಾಗುವುದು.

ಸಮಯ ನಿಗದಿತ 5 ಕಿ.ಮೀ ಓಟಕ್ಕೆ ಪ್ರಥಮ ಬಹುಮಾನ ರೂ. 40,000/-ಗಳನ್ನು ಪುರುಷ ಮತ್ತು ಮಹಿಳಾ ವಿಜೇತ-ರಿಗೆ ಪ್ರತ್ಯೇಕವಾಗಿ 3 ವಿಭಿನ್ನ ವಿಭಾಗಗಳ ಅಡಿಯಲ್ಲಿ ನೀಡಲಾಗುವುದು. ಅಲ್ಲದೇ ಹಿರಿಯ ನಾಗರಿಕರು ಹಾಗೂ ವಿಶೇಷ ಚೇತನರಿಗೆ ಪ್ರತ್ಯೇಕವಾಗಿ ಬಹುಮಾನಗಳನ್ನು ನೀಡಲಾಗುತ್ತದೆ.

ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯಿಂದ 10 ಕಿಮೀ ಓಟವನ್ನು ಮೊದಲು ಪೂರ್ಣಗೊಳಿಸುವ ಪುರುಷ ಮತ್ತು ಮಹಿಳಾ ಓಟಗಾರರಿಗೆ ತಲಾ ರೂ.50,000 ನಗದು ಬಹುಮಾನದ ಜೊತೆಗೆ "ಡಿಜಿಪಿ ಕರ್ನಾಟಕ ಕಪ್" ಪಾರಿತೋಷಕ ನೀಡಿ ಗೌರವಿಸಲಾಗುವುದು. 10ಕಿ.ಮೀ ಓಟದಲ್ಲಿ ಮೊದಲಿಗರಾಗುವ ಪುರುಷ ಮತ್ತು ಮಹಿಳಾ ಓಟಗಾರರಿಗೆ ತಲಾ ರೂ.1,50,000/-ಗಳ ಬಹುಮಾನ ನೀಡಲಾಗುವುದು.

ಕರ್ನಾಟಕ ರಾಜ್ಯ ಪೊಲೀಸ್ ಸುವರ್ಣ ಮಹೋತ್ಸವ ಓಟದಲ್ಲಿ ಹಿರಿಯ ನಾಗರೀಕರು ವಿಶೇಷ ಸಾಮಾರ್ಥ್ಯ ವುಳ್ಳ ಉತ್ಸಾಹಿಗಳು, ಹವ್ಯಾಸಿ ಮತ್ತು ವೃತ್ತಿಪರ ಓಟಗಾರರ ಭಾಗವಹಿಸುವಿಕೆಯೊಂದಿಗೆ ಯಶಸ್ವಿಯಾಗಿ ಪೂರ್ಣಗೊಳಿಸಲು ಉದ್ದೇಶಿಸಲಾಗಿದೆ.

ಕರ್ನಾಟಕ ರಾಜ್ಯ ಪೊಲೀಸ್ ಸುವರ್ಣ ಮಹೋತ್ಸವದ ಅಂಗವಾಗಿ ಇದೇ ರೀತಿಯ ಓಟಗಳನ್ನು ರಾಜ್ಯದ ಎಲ್ಲಾ ಜಿಲ್ಲೆ ಮತ್ತು ನಗರಗಳಲ್ಲಿ ಆಯೋಜಿಸಲಾಗಿದೆ.

ಈ ಓಟದಲ್ಲಿ ಭಾಗವಹಿಸುವ ಎಲ್ಲರಿಗೂ ಉಪಹಾರದ ವ್ಯವಸ್ಥೆ ಮಾಡಿದ್ದು, ಒಂದು ಟಿ-ಶರ್ಟ, ಓಟವನ್ನು ಪೂರ್ಣಗೊಳಿಸುವವ-ರಿಗೆ ಪದಕ ಮತ್ತು ಮಾಡಲಾಗಿರುತ್ತದೆ. ಆಸಕ್ತರು **www.click2race.com** ವೆಬ್‌ಸೈಟ್ ಮುಖಾಂತರ ಹೆಸರು ನೊಂದಾಯಿಸಿಕೊಳ್ಳುವಂತೆ ಕೋರಲಾಗಿದೆ.

# ಓಪಿಎಸ್ ಜಾರಿ ಖಚಿತ: ಸಚಿವೆ ಲಕ್ಷ್ಮೀ ಹೆಬ್ಬಾಳಕರ್

ಬೆಳಗಾವಿ: 2006ರ ನಂತರ ನೇಮಕವಾಗಿರುವ ರಾಜ್ಯ ಸರಕಾರಿ ನೌಕರರಿಗೆ ಈಗ ಇರುವ ಹೊಸ ಪಿಂಚಣಿ ಯೋಜನೆ ರದ್ದುಪಡಿಸಿ ಹಳೆಯ ಪಿಂಚಣಿ ಯೋಜನೆ ಮರು ಜಾರಿಗೊಳಿಸುವುದು ಖಚಿತ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ತಿಳಿಸಿದ್ದಾರೆ.



ಬೆಳಗಾವಿಯ ಗಾಂಧಿ ಭವನದಲ್ಲಿ ಭಾನುವಾರ, ಕರ್ನಾಟಕ ರಾಜ್ಯ ಸರ್ಕಾರಿ ಮುಸ್ಲಿಂ ನೌಕರರ ಮಹಾ ಸಮ್ಮೇಳನ, ಅಲ್ಪ ಸಂಖ್ಯಾತರ ಕಲ್ಯಾಣ ಹಾಗೂ ಶೈಕ್ಷಣಿಕ, ಔದ್ಯೋಗಿಕ ಯೋಜನೆಗಳ ಅರಿವು ಕಾರ್ಯಾಗಾರದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಈಚೆಗೆ ರಾಜ್ಯ ಸರಕಾರಿ ನೌಕರರ ಸಮ್ಮೇಳನದಲ್ಲಿ ಭಾಗವಹಿಸಿ, ಹಳೆ ಪಿಂಚಣಿ ಯೋಜನೆ ಜಾರಿ ಮತ್ತು 7ನೇ ವೇತನ ಆಯೋಗದ ವರದಿ ಜಾರಿ ಕುರಿತು ಸ್ಪಷ್ಟವಾಗಿ ಭರವಸೆ ನೀಡಿದ್ದಾರೆ. ಲೋಕಸಭಾ ಚುನಾವಣೆಗೂ ಮುನ್ನವೋ, ಚುನಾವಣೆಯ ನಂತರವೋ ಎನ್ನುವುದಷ್ಟೇ ಸ್ಪಷ್ಟವಾಗಬೇಕಿದೆ. ಆದ-'ರೆ ಈ ವಿಷಯದಲ್ಲಿ ಯಾರಿಗೂ ಅನುಮಾನ ಬೇಡ. ಸರಕಾರ ಕೊಟ್ಟ ಮಾತನ್ನು ಉಳಿಸಿಕೊಳ್ಳಲಿದೆ ಎಂದು ಹೆಬ್ಬಾಳಕರ್ ಸ್ಪಷ್ಟಪಡಿಸಿದರು.

ಸರಕಾರಕ್ಕೆ ಒಳ್ಳೆಯ ಹೆಸರು ತರುವುದು ಮತ್ತು ಕೆಟ್ಟ ಹೆಸರು ತರುವುದು ಎರಡೂ ನೌಕರರ ಕೆಲಸದ ಮೇಲೆ ಅವಲಂಭಿಸಿದೆ. ಒಳ್ಳೆಯ ರೀತಿಯಿಂದ ಕೆಲಸ ಮಾಡಿ ಸರಕಾರದ ಯೋಜನೆಗಳನ್ನು ಜನ-ರಿಗೆ ಸಮರ್ಪಕವಾಗಿ ತಲುಪಿಸಿದರೆ ಜನರು ಸರಕಾರವನ್ನು ಪ್ರಶಂಸಿಸುತ್ತಾರೆ. ಇಲ್ಲವಾದಲ್ಲಿ ಬೀದಿ ಬೀದಿಗಳಲ್ಲಿ ಸರಕಾರವನ್ನು ಬಯ್ಯುತ್ತಾರೆ. ಹಾಗಾಗಿ ಉತ್ತಮವಾಗಿ ಕೆಲಸ ಮಾಡಿ ಸರಕಾರಕ್ಕೆ ಒಳ್ಳೆಯ ಹೆಸರು ತನ್ನಿ ಎಂದು ಲಕ್ಷ್ಮೀ ಹೆಬ್ಬಾಳಕರ್ ಮನವಿ ಮಾಡಿದರು.

ಒಳ್ಳೆಯ ಉದ್ದೇಶ ಮತ್ತು ಗುರಿ ಇಟ್ಟುಕೊಂಡು ನೌಕರರ ಸಂಘ ಕೆಲಸ ಮಾಡಬೇಕು. ಸಂಘಟನೆಯಲ್ಲಿ ರಾಜ-ಕೀಯ ತರಬೇಡಿ.

ಸರ್ವರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ಸರ್ವರ ವಿಕಾಸಕ್ಕಾಗಿ ಒಟ್ಟಾಗಿ ಕೆಲಸ ಮಾಡೋಣ. ಸರಕಾರಕ್ಕೆ ಉತ್ತಮ ಹೆಸರು ತರೋಣ ಎಂದ ಹೆಬ್ಬಾಳಕರ್, ವಿಧಾನಸಭೆಯ ಸ್ಪೀಕರ್ ಯು.ಟಿ. ಖಾದರ್ ಅವರು ನನಗೆ ಸದಾ ಮಾರ್ಗದರ್ಶನ ಮಾಡುತ್ತಿರುತ್ತಾರೆ. ಅವರು ಪಕ್ಷಾತೀತವಾಗಿ ತಮ್ಮ ಹುದ್ದೆಯನ್ನು ನಿರ್ವಹಿಸುತ್ತಿದ್ದಾರೆ ಎಂದು ಪ್ರಶಂಸಿಸಿದರು.

ಈ ಸಮಯದಲ್ಲಿ ವಿಧಾನಸಭೆಯ ಸಭಾಧ್ಯಕ್ಷ ಯು.ಟಿ ಖಾದರ್, ಶಾಸಕ ಆಸೀಫ್ ಸೇಠ್, ಮಾಜಿ ಶಾಸಕ ಫಿರೋಜ್ ಸೇಠ್, ಉತ್ತರ ಕರ್ನಾಟಕ ಮುಸ್ಲಿಂ ಯುನೈಟೆಡ್ ಫೋರಮ್ ನ ಅಧ್ಯಕ್ಷ ಇಮ್ತಿಯಾಜ ಅಹ್ಮದ್ ಉಮರಶೇಖ್, ರಾಜ್ಯ ಗೌರವಾಧ್ಯಕ್ಷ ಮೊಹ್ಮದ್ ಪಾಷಾ, ಮಿರ್ಜಾ ಅಜ್ಮತುಲ್ಲಾ, ಡಾ. ಯೂಸೂಫ್ ಅಸ್ಲಂಖಾನ್, ಮೈನೂದ್ದಿನ ಶಿರಹಟ್ಟಿ, ಮುಸ್ಲಿಂ ಸಮಾಜದ ಮುಖಂಡರು, ಮಹಿಳೆಯರು, ರಾಜ್ಯ ಸರ್ಕಾರಿ ಮುಸ್ಲಿಂ ನೌಕರರ ಕ್ಷೇಮಾಭಿವೃದ್ಧಿ ಸಂಘ ಬೆಂಗಳೂರು ಹಾಗೂ ಜಿಲ್ಲಾ ಘಟಕ ಬೆಳಗಾವಿಯ ಪದಾಧಿಕಾರಿಗಳು ಇದ್ದರು.

## ಕನಿಷ್ಠ ಬೆಂಬಲ ಬೆಲೆ ಯೋಜನೆ: ರೈತರ ಖರೀದಿ ಕೇಂದ್ರಗಳು ಮಾರ್ಪಾಡು

ಬಳ್ಳಾರಿ: ಜಿಲ್ಲೆಯಲ್ಲಿ 2023-24ನೇ ಸಾಲಿನ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಈಗಾಗಲೇ ತೆರೆಯಲಾಗಿದ್ದ ರೈತರ ಖರೀದಿ ಕೇಂದ್ರಗಳನ್ನು ಸಾಗಾಣಿಕೆ ಹಾಗೂ ಹಮಾಲಿಗಳ ಹಿತದೃಷ್ಟಿಯಿಂದ ಮಾರ್ಪಾಡು ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಟಾಸ್ಕ್ ಫೇರ್ಸ್ ಸಮಿತಿಯ ಅಧ್ಯಕ್ಷರಾದ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದ್ದಾರೆ.

**ಪ್ರಸ್ತುತ ಬದಲಾದ ಖರೀದಿ ಕೇಂದ್ರದ ವಿವರ:**

ಬಳ್ಳಾರಿ ತಾಲ್ಲೂಕಿನ ಈ ಹಿಂದೆ ಎ.ಪಿ.ಎಂ.ಸಿ ಯಾರ್ಡ್ನಲ್ಲಿದ್ದ ಖರೀದಿ ಕೇಂದ್ರವನ್ನು ಕರ್ನಾಟಕ ರಾಜ್ಯ ಉಗ್ರಾಣ ಘಟಕ - 1 ಮತ್ತು 2 ರ ನಿಗಮದಲ್ಲಿ ತೆರೆಯಲಾಗಿದೆ. ಅದೇರೀತಿಯಾಗಿ ಸಿರುಗುಪ್ಪ ತಾಲ್ಲೂಕು ಕೃಷಿ ಉತ್ಪನ್ನ ಸಹಕಾರ ಮಾರಾಟ ಸಂಘ ಖರೀದಿ ಕೇಂದ್ರವು ತಾಲೂಕಿನ ಕರ್ನಾಟಕ ರಾಜ್ಯ ಉಗ್ರಾಣ ನಿಗಮ, ಕಂಪ್ಲಿ ತಾಲೂಕಿನ ಎ.ಪಿ.ಎಂ.ಸಿ ಯಾರ್ಡ್ನಲ್ಲಿದ್ದ ಖರೀದಿ ಕೇಂದ್ರವು ತಾಲೂಕಿನ ಕರ್ನಾಟಕ ರಾಜ್ಯ ಉಗ್ರಾಣ ನಿಗಮದಲ್ಲಿ ತೆರೆಯಲಾಗಿದೆ.

ಉಳಿದಂತೆ ಕುರುಗೋಡು ಮತ್ತು ಸಂಡೂರು ಪಟ್ಟಣಗಳಲ್ಲಿ ಎಪಿಎಂಸಿ ಯಾರ್ಡ್ನಲ್ಲಿಯೇ ಕಾರ್ಯನಿರ್ವಹಿಸಲಿವೆ ಎಂದು ಅವರು ತಿಳಿಸಿದ್ದಾರೆ.

## ರಾಜ್ಯ ಮಟ್ಟದ ಪ್ಯಾರಾ ಸ್ವಿಮ್ಮಿಂಗ್ ಚಾಂಪಿಯನ್ಶಿಪ್: ಬಳ್ಳಾರಿ ಜಿಲ್ಲೆಗೆ 13 ಚಿನ್ನ, 2 ಬೆಳ್ಳಿ




ಬಳ್ಳಾರಿ: ಬೆಂಗಳೂರಿನ ವೈಟ್ಫೀಲ್ಡ್ನ ಜೀ ಸ್ವಿಮ್ ಅಕಾಡೆಮಿಯಲ್ಲಿ ಶನಿವಾರ (ಮಾ.02) ದಂದು ನಡೆದ 2023-24 ನೇ ಸಾಲಿನ ರಾಜ್ಯ ಮಟ್ಟದ ಪ್ಯಾರಾ ಸ್ವಿಮ್ಮಿಂಗ್ ಚಾಂಪಿಯನ್ಶಿಪ್ ಸ್ಪರ್ಧೆಗಳಲ್ಲಿ ಬಳ್ಳಾರಿ ಜಿಲ್ಲೆಗೆ ಒಟ್ಟು 13 ಚಿನ್ನದ ಪದಕ, 2 ಬೆಳ್ಳಿ ಪದಕಗಳನ್ನು ಲಭಿಸಿವೆ.

ಬಳ್ಳಾರಿ ಜಿಲ್ಲೆಯನ್ನು ಪ್ರತಿನಿಧಿಸಿ, ಈಜು ಸ್ಪರ್ಧಿಗಳಾದ ಗೋಪಿಚಂದ್, ಯೋಜಿತ್, ಸಾಯಿ ಬೇಬಿ, ಸಾಯಿ ನಿಖಿಲ್, ಕೆ.ಕವಿತಾ ಅವರು ಭಾಗವಹಿಸಿದ್ದರು.

ಈಜುಸ್ಪರ್ಧೆಯ ವಿವಿಧ ವಿಭಾಗಗಳಲ್ಲಿ ಗೋಪಿಚಂದ್ ಅವರಿಗೆ 3 ಚಿನ್ನದ ಪದಕ, ಯೋಜಿತ್ಗೆ 3 ಚಿನ್ನದ ಪದಕ, ಸಾಯಿ ಬೇಬಿ ಅವರಿಗೆ 3 ಚಿನ್ನದ ಪದಕ, ಸಾಯಿ ನಿಖಿಲ್ಗೆ 2 ಚಿನ್ನ ಹಾಗೂ 1 ಬೆಳ್ಳಿ ಪದಕ ಮತ್ತು ಕೆ.ಕವಿತಾ ಅವರಿಗೆ 2 ಚಿನ್ನ ಹಾಗೂ 1 ಬೆಳ್ಳಿ ಪದಕ ಪಡೆದುಕೊಂಡಿದ್ದಾರೆ.

ರಜನಿ ಲಕ್ಕ, ಸ್ವಾಮಿ, ಶರತ್ ಗಾಯಕ್ವಾಡ್(ಅರ್ಜುನ ಪ್ರಶಸ್ತಿ) ಇವರ ಮಾರ್ಗದರ್ಶನದಲ್ಲಿ ತರಬೇತಿ ಪಡೆದುಕೊಂಡಿದ್ದರು.

**ರಾಷ್ಟ್ರ ಮಟ್ಟಕ್ಕೆ ಆಯ್ಕೆ:**

ಇದೇ ಮಾರ್ಚ್ 29 ರಿಂದ 31 ರ ವರೆಗೆ ಮಧ್ಯಪ್ರದೇಶದ ಗ್ವಾಲಿಯರ್ನಲ್ಲಿ ನಡೆಯುವ ರಾಷ್ಟ್ರ ಮಟ್ಟದ ಪ್ಯಾರಾ ಸ್ವಿಮ್ಮಿಂಗ್ ಚಾಂಪಿಯನ್ಶಿಪ್ ಕ್ರೀಡೆಗಳಲ್ಲಿ ರಾಜ್ಯವನ್ನು ಪ್ರತಿನಿಧಿಸಿ ಭಾಗವಹಿಸುವರು.

ಈಜುಪಟುಗಳ ಈ ಉತ್ತಮ ಸಾಧನೆಗೆ ಯುವ ಸಬಲೀಕರಣ, ಕ್ರೀಡೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಬಿ.ನಾಗೇಂದ್ರ, ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ, ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜೀತ್ ಕುಮಾರ್ ಬಂಡಾರ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರ, ಸಹಾಯಕ ಆಯುಕ್ತ ಹೇಮಂತ್ ಕುಮಾರ್, ಅಪರ ಜಿಲ್ಲಾಧಿಕಾರಿ ಮೊಹಮ್ಮದ್ ಝುಬೇರಾ, ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕಿ ಕೆ.ಗ್ರೇಸಿ ಅವರು ಅಭಿನಂದನೆ ವ್ಯಕ್ತಪಡಿಸಿದ್ದಾರೆ.

# ದಿ.ರಾಜೀವ ದೊಡ್ಡಣ್ಣವರ ಅವರಿಗೆ ಸ್ವರ ಶೃದ್ಧಾಂಜಲಿ


ಬೆಳಗಾವಿ.ಮಾ.3: ಶನಿವಾರ ಮಾರ್ಚ. 2ರಂದು ಸಾಯಂಕಾಲ ಭರತೇಶ ಶಿಕ್ಷಣ ಸಂಸ್ಥೆಯ ಆವರಣದಲ್ಲಿ ಭರತೇಶ ಶೀಕ್ಷಣ ಸಂಸ್ಥೆಯ ಉಪಾಧ್ಯಕ್ಷ ದಿವಂಗತ ರಾಜೀವ ದೊಡ್ಡಣ್ಣವರ ಅವರ ಪ್ರಥಮ ಪುಣ್ಯ ಸ್ಮರಣೆಯನ್ನು ಸ್ವರ ಶೃದ್ಧಾಂಜಲಿ ಮೂಲಕ ಶೃದ್ಧಾಂಜಲಿ ಸಲ್ಲಿಸಲಾಯಿತು.



ಈ ಸಂಧರ್ಭದಲ್ಲಿ ಭರತೇಶ ಸಂಸ್ಥೆಯ ಉಪಾಧ್ಯಕ್ಷ ಶ್ರೀಪಾಲ ಖೇಮಲಾಪೂರೆ, ಕಾರ್ಯದರ್ಶಿ ವಿನೋದ ದೊಡ್ಡಣ್ಣವರ, ಹೋಮಿಯೋಪೆಥಿಕ ವೈದ್ಯಕೀಯ ಮಹಾ ವಿದ್ಯಾಲಯದ ಪ್ರಾಚಾರ್ಯ ಡಾ. ಶ್ರೀಕಾಂತ ಕೊಂಕಣಿ ಹಾಗೂ ಡಿ.ವೈ ಚೌಗುಲೆ ಭರತೇಶ ಪ್ರೌಢಶಾಲೆಯ ಮುಖ್ಯಾಧ್ಯಾಪಕ ಎಸ್.ಎನ್.,ಅಕ್ಕಿ, ಸ್ವಾತಿ ಜೋಗ ಅವರು ಮಾತನಾಡಿ ದಿ. ರಾಜೀವ ದೊಡ್ಡಣ್ಣವರ ಅವರ ವ್ಯಕ್ತಿತ್ವವನ್ನು ಸ್ಮರಿಸಿದರು.

ಈ ಸಂದರ್ಭದಲ್ಲಿ ಕೆ.ಎಲ್.ಇ. ಸ್ಕೂಲ ಆಫ್ ಮ್ಯೂಸಿಕನ ಡಾ.ರಾಜೇಂದ್ರ ಭಂಢಾರಕರ, ಮತ್ತು ಸಂಗಿತ ವಿಭಾಗದ ಡಾ.ರಾಜಾರಾಮ ಅಂಬರಡೇಕರ, ಮತ್ತು ತಂಡದವರು ಸಂಗೀತ ಕಾರ್ಯಕ್ರಮ ನಡೆಸಿಕೊಟ್ಟರು. ಈ ಸಂದರ್ಭದಲ್ಲಿ ಭರತೇಶ ಶಿಕ್ಷಣ ಸಂಸ್ಥೆಯ ಆಡಳಿತ ಮಂಡಳಿಯ ಸದಸ್ಯರು, ಬೋದಕ ವೃಂದ ಹಾಗೂ ಸಿಬ್ಬಂದಿ ವರ್ಗ ಮತ್ತು ರಾಜೀವ ದೊಡ್ಡಣ್ಣವರ ಅವರ ಅಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಉಪಸ್ಥಿತರಿದ್ದರು.

## ಬೆಳಗಾವಿ: ಕಡಲೆ ರಾಶಿ ಮಾಡುವಾಗ ಮಷಿನ್ ಒಳಗೆ ಸೀರೆ ಸಿಕ್ಕು ರೈತ ಮಹಿಳೆ ಸಾವು



ಬೆಳಗಾವಿ : ಕಡಲೆ ರಾಶಿ ಮಾಡುವಾಗ ಮಷಿನ್‌ಗೆ ಸಿಲುಕಿ ಮಹಿಳೆ ಮೃತಪಟ್ಟ ಘಟನೆ ಬೈಲಹೊಂಗಲ ತಾಲೂಕಿನ ದೇವಲಾಪುರ ಗ್ರಾಮದಲ್ಲಿ ರವಿವಾರ ನಡೆದಿದೆ.

ದೇವಲಾಪುರ ಗ್ರಾಮದ ಮಹಾದೇವಿ ಮಲ್ಲಪ್ಪ ಗಣಾಚಾರಿ (45) ಮೃತ ರೈತ ಮಹಿಳೆ. ಜಮೀನಿನಲ್ಲಿ ಕಡಲೆ ರಾಶಿ ಮಾಡುವಾಗ ಮಷಿನ್ ಒಳಗಡೆ ಸೀರೆ ಸಿಲುಕಿ ಈ ದುರ್ಘಟನೆ ನಡೆದಿದೆ. ಮಷಿನ್ ಒಳಗೆ ಮಹಿಳೆ ಸಿಲುಕುತ್ತಿದ್ದಂತೆ ಕಂಡ ಕುಟುಂಬಸ್ಥರು ಮಷಿನ್ ಬಂದ್ ಮಾಡಿ ಮಹಿಳೆಯನ್ನು ಹೊರ ತೆಗೆದಿದ್ದಾರೆ. ತೀವ್ರ ರಕ್ತಸ್ರಾವದಿಂದ ಒದ್ದಾಡುತ್ತಿದ್ದ ಮಹಿಳೆಯನ್ನು ಚಿಕಿತ್ಸೆಗಾಗಿ ಆಸ್ಪತ್ರೆಗೆ ಸಾಗಿಸುವ ಮಾರ್ಗದಲ್ಲಿ ಕೊನೆ ಉಸಿರೆಳೆದಿದ್ದಾರೆ. ಮಹಿಳೆ ಸಾವಿನ ಸುದ್ದಿ ತಿಳಿಯುತ್ತಿದ್ದಂತೆ ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟಿತ್ತು. ಮೃತ ಮಹಿಳೆಗೆ ಪತಿ, ಇಬ್ಬರು ಪುತ್ರರು, ಪುತ್ರಿ ಇದ್ದಾರೆ. ಪ್ರಕರಣ ಬೈಲಹೊಂಗಲ ಪೊಲೀಸ್ ಠಾಣೆಯಲ್ಲಿ ದಾಖಲಾಗಿದೆ.

# ಬೆಳಗಾವಿ: ವಿಶ್ವ ಶ್ರವಣ ದಿನ ಆಚರಣೆ

ಬೆಳಗಾವಿ: ಗ್ರಾಮೀಣ ಪ್ರದೇಶದ ಜನರು ಅನೇಕ ಖಾಯಿಲೆಗಳಿಗೆ ಈಗಲೂ ಕೂಡ ಮೂಡನಂಬಿಕೆಗೆ ಒಳಗಾಗಿ ಸರಿಯಾದ ಸಮಯಕ್ಕೆ ಚಿಕಿತ್ಸೆಯಿಂದ ವಂಚಿತರಾಗುತ್ತಿರುವದು ಅತ್ಯಂತ ಕಳವಳಕಾರಿ. ಕಿವಿ ಕೇಳದರಿರುವದು ಹಾಗೂ ಮಾತು ಬಾರದಿರುವದು ಜನ್ಮತಃವಾಗಿರುವ ಆರೋಗ್ಯ ತೊಂದರೆ. ಅದಕ್ಕೆ ಸರಿಯಾದ ಸಮಯದಲ್ಲಿ ಚಿಕಿತ್ಸೆ ಪಡೆದರೆ ಗುಣ ಮುಖರಾಗುತ್ತಾರೆ. ಆದ-'ರಿಂದ ಕಿವುಡ ಮಕ್ಕಳಿಗೆ ತಪಾಸಣೆ ಮತ್ತು ಸರಿಯಾದ ಸಮಯಕ್ಕೆ ಶಸ್ತ್ರಚಿಕಿತ್ಸೆಯನ್ನು ಮಾಡಿಸಬೇಕೆಂದು ಕೆಎಲ್‌ಇ ಸಂಸ್ಥೆಯ ಕಾರ್ಯಾಧ್ಯಕ್ಷರು ಹಾಗೂ ಕಾಹೆರ ಕುಲಪತಿ ಡಾ. ಪ್ರಭಾಕರ ಕೋರೆ ಅವರಿಂದಿಲ್ಲಿ ಸಲಹೆ ನೀಡಿದರು.



ವಿಶ್ವ ಶ್ರವಣ ದಿನ (World Hearing Day) ಆಚರಣೆ ಅಂಗವಾಗಿ ಕಾಹೆರ, ಜೆಎನ ವೈದ್ಯಕೀಯ ಮಹಾವಿದ್ಯಾಲಯ ಹಾಗೂ ಕೆಎಲ್‌ಇ ಸಂಸ್ಥೆಯ ಡಾ. ಪ್ರಭಾಕರ ಕೋರೆ ಆಸ್ಪತ್ರೆಯ ಕಿವಿ, ಗಂಟಲು ಹಾಗೂ ಮೂಗು ವಿಭಾಗವು ಇದೇ ದಿ. 4 ಮಾರ್ಚ 2024ರಂದು ಏರ್ಪಡಿಸಿದ್ದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಕಿವುಡ ಹಾಗೂ ಮೂಕರಾದರೆ ಮೂಡನಂಬಿಕೆಗೆ ಜೋತು ಬೀಳದೇ ವೈದ್ಯಕೀಯ ತಪಾಸಣೆ ಮಾಡಿಸಿಕೊಳ್ಳಿ. ಅಜ್ಞಾನ ತೊಲಗಿಸಿ. ಅನಾರೋಗ್ಯ ಪೀಡಿತ ಮಕ್ಕಳಿಗೆ ಸರಿಯಾದ ಚಿಕಿತ್ಸೆ ನೀಡಿ ಸ್ವಂತ ಕಾಲ ಮೇಲೆ ನಿಲ್ಲುವ ಸಾಮರ್ಥ್ಯವನ್ನು ಕೆಎಲ್‌ಇ ಸಂಸ್ಥೆಯ ಡಾ. ಪ್ರಭಾಕರ ಕೋರೆ ಆಸ್ಪತ್ರೆಯು ಕಲ್ಪಿಸುತ್ತಿದೆ ಎಂದರು.

ಕಿವುಡ ಮಕ್ಕಳ ಆರೋಗ್ಯವನ್ನು ಸುಧಾರಿಸಲು ಅವಶ್ಯವಿರುವ ಕಾಕ್ಲಿಯರ ಇಂಪ್ಲ್ಯಾಂಟ ಶಸ್ತ್ರಚಿಕಿತ್ಸೆ ನೆರವೇ-ರಿಸುವದಕ್ಕಾಗಿ ಕಳೆದ 2 ವರ್ಷಗಳವರೆಗೆ ಹೋರಾಟ ಮಾಡಿ ಸರಕಾರದಿಂದ ಸಹಾಯಧನ ಪಡೆದು ಆರ್ಥಿಕವಾಗಿ ಹಿಂದುಳಿದಿರುವ ಮಕ್ಕಳಿಗೆ ಶಸ್ತ್ರಚಿಕಿತ್ಸೆ ನಡೆಸಲಾಗುತ್ತಿದೆ. ನಂತರ ಒಂದು ವರ್ಷ ತರಬೇತಿ ನೀಡಿ ಅವರಿಗೆ ಮಾತು ಆಲಿಸುವ ಮತ್ತು ಮಾತನಾಡುವದರ ಕುರಿತು ತರಬೇತಿ ನೀಡಲಾಗುತ್ತಿದೆ. ಈಗಾಗಲೇ 16 ಮಕ್ಕಳಿಗೆ ಕಾಕ್ಲಿಯರ ಇಂಪ್ಲ್ಯಾಂಟ ಶಸ್ತ್ರಚಿಕಿತ್ಸೆ ನಡೆಸಿ ಜೀವನದಾನ ನೀಡಿರುವದು ಅತ್ಯಂತ ಖುಷಿ ತಂದಿದೆ. ಮಹಾನಗರಗಳಲ್ಲಿ ಲಭಿಸುವ ಎಲ್ಲ ಸೌಲಭ್ಯಗಳನ್ನು ನಮ್ಮ ಆಸ್ಪತ್ರೆಯಲ್ಲಿ ಅಳವಡಿಸಿಕೊಳ್ಳಲಾಗುತ್ತಿದೆ. ಆದ್ದರಿಂದ ಜನರು ಸರಿಯಾದ ಸಮಯಕ್ಕೆ ಚಿಕಿತ್ಸೆ ಪಡೆದು ಗುಣಮುಖರಾಗುವಂತೆ ಸಲಹೆ ನೀಡಿದರು.

ಕೆಎಲ್‌ಇ ಸಂಸ್ಥೆಯ ಡಾ. ಪ್ರಭಾಕರ ಕೋರೆ ಆಸ್ಪತ್ರೆಯ ವೈದ್ಯಕೀಯ ನಿರ್ದೇಶಕರಾದ ಡಾ. (ಕರ್ನಲ್) ಎಂ ದಯಾನಂದ ಅವರು ಮಾತನಾಡಿ, ಒಂದೇ ಸೂರಿನಡಿ ಅನೇಕ ರೀತಿಯ ಖಾಯಿಲೆಗಳಿಗೆ ಆರ್ಥಿಕವಾಗಿ ಹಿಂದುಳಿದಿರುವ ರೋಗಿಗಳಿಗೆ ಸರಕಾರದ ಸಹಾಯದೊಂದಿಗೆ ಉಚಿತ ಚಿಕಿತ್ಸೆ ನೀಡಲಾಗುತ್ತಿದೆ. ಆದ-'ರಿಂದ ಹಿಂಜರಿಯದೇ ಸರಿಯಾದ ಸಮಯದಲ್ಲಿ ಚಿಕಿತ್ಸೆ ಪಡೆಯಬೇಕೆಂದು ಸಲಹೆ ನೀಡಿದ ಅವರು, ವಿಶ್ವ ಶ್ರವಣ ದಿನಾಚರಣೆ ಅಂಗವಾಗಿ ದಿ. 4 ರಿಂದ 9ರವರೆಗೆ ಉಚಿತ ತಪಾಸಣೆ ಇದೆ. ಅದರ ಸದುಪಯೋಗವನ್ನು ಪಡೆದುಕೊಳ್ಳುವಂತೆ ಕೋರಿದರು.

ಆಸ್ಪತ್ರೆಯ ಇಎನ್‌ಟಿ ವಿಭಾಗದ ಮುಖ್ಯಸ್ಥರಾದ ಡಾ. ರಾಜೇಂದ್ರ ಮೆಟಗುಡಮಠ ಅವರು ಪ್ರಾಸ್ತವಿಕವಾಗಿ ಮಾತನಾಡಿದರು. ಈ ಸಂದರ್ಭದಲ್ಲಿ ಜೆಎನ್‌ಎಂಸಿ ಉಪಪ್ರಾಚಾರ್ಯ ಡಾ. ವಿ ಎಂ ಪಟ್ಟಣಶೆಟ್ಟಿ, ಡಾ. ಆರಿಪ್ ಮಾಲ್ದಾರ, ಡಾ. ಬಿ ಪಿ ಬೆಳಲದವರ, ಡಾ. ವಿನಿತಾ ಮೆಟಗುಡಮಠ, ಡಾ. ಪ್ರೀತಿ ಹಜಾರೆ, ಡಾ. ಪ್ರಶಾಂತ ಪಾಟೀಲ, ಡಾ. ಪ್ರೀತಿ ಶೆಟ್ಟಿ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು. ಡಾ. ಶಮಾ ಬೆಲ್ಲದ ನಿರೂಪಿಸಿದರು. ಡಾ. ನಿತಿನ ಅಂಕಲೆ ವಂದನಾರ್ಪಣೆ ಮಾಡಿದರು.

## ಕಾರಂಜಿ ಶ್ರೀಮಠದಲ್ಲಿ ಮಹಾಶಿವರಾತ್ರಿ ನಿಮಿತ್ತ ವಿವಿಧ ಕಾರ್ಯಕ್ರಮಗಳು

ಬೆಳಗಾವಿ: ಇಲ್ಲಿನ ಶಿವಬಸವನಗರದ ಕಾರಂಜಿ ಶ್ರೀಮಠದ ಶಿವಾನುಭವ ಮಂಟಪದಲ್ಲಿ ಶುಕ್ರವಾರ ಮಾ. 8 ರಂದು ಸಂಜೆ 6 ಗಂಟೆಗೆ ಮಹಾಶಿವರಾತ್ರಿ ನಿಮಿತ್ತ 272ನೇ ಶಿವಾನುಭವ ಗೋಷ್ಠಿ ಹಾಗೂ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಿದೆ.



ಶ್ರೀಮಠದ ಪರಮಪೂಜ್ಯ ಶ್ರೀ ಗುರುಸಿದ್ಧ ಮಹಾಸ್ವಾಮೀಜಿಯವರ ದಿವ್ಯ ಸಾನ್ನಿಧ್ಯದಲ್ಲಿ ಜರುಗಲಿರುವ ಸಮಾರಂಭದಲ್ಲಿ ನಾಗನೂರು ರುದ್ರಾಕ್ಷಿಮಠದ ಡಾ.ಅಲ್ಲಮಪ್ರಭು ಮಹಾಸ್ವಾಮೀಜಿಯವರು ಸಾನ್ನಿಧ್ಯ ವಹಿಸಲಿದ್ದಾರೆ. ನೂತನ ಉತ್ತರಾಧಿಕಾರಿಗಳಾದ ಪೂಜ್ಯ ಶಿವಯೋಗಿ ದೇವರ ಸಮ್ಮುಖದಲ್ಲಿ ಕಾರ್ಯಕ್ರಮ ಜರುಗಲಿದೆ.

ಉತ್ತರ ಸೇವಾ ಸಂಘದ ಪ್ರಾಂತ ಕಾರ್ಯವಾಹ ರಾಘವೇಂದ್ರ ಕಾಗವಾಡ ಅಧ್ಯಕ್ಷತೆ ವಹಿಸಲಿದ್ದಾರೆ. 'ಪಂಚಾಕ್ಷರಿ ಮಂತ್ರ ಮಹಿಮೆ' ವಿಷಯ ಕು-ರಿತು ನಾಡಿನ ಖ್ಯಾತ ವಿದ್ವಾಂಸರಾದ ಡಾ.ಬಸವರಾಜ ಜಗಜಂಪಿಯವರು ಉಪನ್ಯಾಸ ನೀಡಲಿದ್ದಾರೆ. ಸಂಗೀತ ವಿದೂಷಿ ಶೋಭಾ ಮಲ್ಲಿಕಾರ್ಜುನ ಜಾಬಿನ ಸಂಗೀತ ಕಾರ್ಯಕ್ರಮ ನಡೆಸಿಕೊಡಲಿದ್ದಾರೆ, ಇದೇ ಸಂದರ್ಭದಲ್ಲಿ ಆರ್ಕಿಟೆಕ್ಟ, ಇಂಟೀರಿಯರ್ ಡಿಸೈನರ್ ಕರುಣಾ ಎಸ್. ಹಿರೇಮಠ ಅವರ ಸನ್ಮಾನ ಸಮಾರಂಭ ಜರುಗುವುದು ಎಂದು ಶ್ರೀಮಠವು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 11ರಂದು ಲಿಂಗಾಯಿತ ಸಂಘಟನೆಗಳಿಂದ ಮುಖ್ಯಮಂತ್ರಿಗಳಿಗೆ ಸನ್ಮಾನ: ಅಲ್ಲಮಪ್ರಭು ಶ್ರೀಗಳು

ಬೆಳಗಾವಿ; ಇದೇ ತಿಂಗಳ 11ರಂದು ಸಂಜೆ 4 ಗಂಟೆಗೆ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಸಮಸ್ತ ಲಿಂಗಾಯಿತ ಸಂಘಟನೆಗಳ ಪರವಾಗಿ ಬೆಳಗಾವಿಯ ನಾಗನೂರು ರುದ್ರಾಕ್ಷಿ ಮಠದಲ್ಲಿ ಸನ್ಮಾನವನ್ನು ಏರ್ಪಡಿಸಲಾಗಿದೆ ಎಂದು ನಾಗನೂರು ರುದ್ರಾಕ್ಷಿ ಮಠದ ಪೀಠಾಧಿಕಾರಿ ಶ್ರೀ ಅಲ್ಲಮಪ್ರಭು ಮಹಾಸ್ವಾಮಿಗಳು ಹೇಳಿದರು.



ಸನ್ಮಾನ ಸಮಾರಂಭದ ಪೂರ್ವಭಾವಿ ಸಭೆಯಲ್ಲಿಂದು ಮಾತನಾಡಿದ ಅವರು ವಿಶ್ವಗುರು ಬಸವಣ್ಣನವರನ್ನು ಕರ್ನಾಟಕದ ಸಾಂಸ್ಕೃತಿಕ ನಾಯಕ ಎಂದು ಘೋಷಿಸಿದ ಹಿನ್ನೆಲೆಯಲ್ಲಿ ಮುಖ್ಯಮಂತ್ರಿಗಳನ್ನು ಸಮಾಜದ ಪರವಾಗಿ ಸತ್ಕರಿಸಲಾಗುತ್ತಿದೆ ಈ ಕಾರ್ಯಕ್ರಮಕ್ಕೆ ವಿವಿಧ ಜಿಲ್ಲೆಗಳ ಎಲ್ಲ ತಾಲೂಕುಗಳ ಬಸವ ಅಭಿಮಾನಿಗಳು ಆಗಮಿಸಲಿದ್ದಾರೆ ಎಂದವರು ಹೇಳಿದರು.

ಲಿಂಗಾಯತ ಸಂಘಟನೆಯ ಅಧ್ಯಕ್ಷ ಬಸವರಾಜ ರೊಟ್ಟಿ ಅವರು ಮಾತನಾಡಿ ಪರಸ್ಥಳಗಳಿಂದ ಕಾರ್ಯಕ್ರಮಕ್ಕೆ ಆಗಮಿಸುವ ಎಲ್ಲ ಶರಣ ಬಂಧುಗಳಿಗೆ ಉಪಹಾರ ಮತ್ತು ಪ್ರಸಾದ ವ್ಯವಸ್ಥೆ ಮಾಡಲಾಗುತ್ತಿದೆ.

ಕೆಲವು ಕಡೆ ವಾಹನಗಳ ವ್ಯವಸ್ಥೆಯನ್ನು ಮಾಡಲು ಪ್ರಯತ್ನಿ ಸಲಾಗುತ್ತಿದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ವಿವಿಧ ಲಿಂಗಾಯಿತ ಸಂಘಟನೆಗಳ ಮುಖಂಡರುಗಳಾದ ಡಾ. ಎಸ್. ಎಂ ದೊಡ್ಡಮನಿ ,ಆನಂದ ಗುಡಿಸಿ ,ಎಸ್ ವೈ ಹಂಜಿ, ಚಂದ್ರಶೇಖರ್ ಗುಡಿಸಿ, ಬಿ. ಎಂ ಚಿಕ್ಕನಗೌಡರ, ಶ್ರೀಮತಿ ನೈನಾ ಗಿರಿಗೌಡರ್, ಬಿ.ಡಿ ಪಾಟೀಲ್, ಎಸ್. ಜಿ ಸಿದ್ದನಾಳ್, ಮುರಿಗೆಪ್ಪ ಬಾಳಿ, ಮಹಾನಂದ ಪರುಶೆಟ್ಟಿ, ಮತ್ತು ಕಾರ್ಯಕ್ರಮವನ್ನು ನಿರ್ವಹಿಸಿ ಸ್ವಾಗತಿಸಿ ಹೊಂದಿಸಿದ ಸಿಎಂ ಬೂದಿಹಾಳ ಮುಂತಾದವರು ವೇದಿಕೆ ಮೇಲೆ ಉಪಸ್ಥಿತ-ರಿದ್ದರು.

## ಮಾ.7 ರಂದು ಅನುಮೋದನೆ ಗೊಂಡಿರುವ ಯೋಜನೆಯ ಶಂಕು ಸ್ಥಾಪನೆ

ಬೆಳಗಾವಿ: ಕೇಂದ್ರ ಪ್ರವಾಸೋದ್ಯಮ ಮಂತ್ರಾಲಯದ ವತಿಯಿಂದ ಬೆಳಗಾವಿ ಜಿಲ್ಲೆಯ ಸವದತ್ತಿ ತಾಲೂಕಿನ ಶ್ರೀ ಯಲ್ಲಮ್ಮ ದೇವಸ್ಥಾನ ಆವರಣದಲ್ಲಿ ಸ್ವದೇಶ ದರ್ಶನ ಮತ್ತು ಪ್ರಸಾದ ಯೋಜನೆಯಡಿ ಅನುಮೋದನೆಗೊಂಡಿರುವ ಯೋಜನೆಯ ಶಂಕು ಸ್ಥಾಪನೆಯನ್ನು ಮಾ.07 ರಂದು ಬೆಳಗ್ಗೆ 10.30 ಗಂಟೆಗೆ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿಗಳಾದ ನಿತೇಶ ಪಾಟೀಲ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಾ.6 ರಂದು ಮಾನ್ಯ ಮುಖ್ಯಮಂತ್ರಿಗಳಿಂದ ಕೊಟ್ಟಲಗಿ ಏತ ನೀರಾವರಿ ಯೋಜನೆಯ ಶಂಕು ಸ್ಥಾಪನಾ ಸಮಾರಂಭ

ಬೆಳಗಾವಿ: ಜಲ ಸಂಪನ್ಮೂಲ ಇಲಾಖೆ ಹಾಗೂ ಕರ್ನಾಟಕ ನೀರಾವರಿ ನಿಗಮ ನಿಯಮಿತ ಇವರ ಸಂಯುಕ್ತ ಆಶ್ರಯದಲ್ಲಿ ಮಾ.6ರಂದು ಬೆಳಗ್ಗೆ 11 ಗಂಟೆಗೆ ಬೆಳಗಾವಿ ಜಿಲ್ಲೆಯ ಅಥ–'ಣಿ ತಾಲೂಕಿನ ಕೊಟ್ಟಲಗಿ (ಅಮ್ಮಾಜೇಶ್ವರಿ) ಏತ ನೀರಾವರಿ ಯೋಜನೆಯ ಶಂಕು ಸ್ಥಾಪನಾ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ.

ಮುಖ್ಯ ಮಂತ್ರಿಗಳಾದ ಸಿದ್ದರಾಮಯ್ಯ ಅವರು ಕೊಟ್ಟಲಗಿ ಏತ ನೀರಾವರಿ ಯೋಜನೆಗೆ ಶಂಕು ಸ್ಥಾಪನೆ ನೆರವೇ–ರಿಸುವರು. ಉಪಮುಖ್ಯ ಮಂತ್ರಿಗಳಾದ ಡಿ.ಕೆ.ಶಿವಕುಮಾರ್ ಘನ ಉಪಸ್ಥಿತಿ ವಹಿಸಲಿರುವ ಈ ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ ಜಾರಕಿಹೊಳಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವೆ ಲಕ್ಷ್ಮೀ ಹೆಬ್ಬಾಳಕರ, ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರಾದ ಎಮ್.ಬಿ.ಪಾಟೀಲ, ಜವಳಿ,ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ನಿರ್ದೇಶನಾಲಯ, ಸಹಕಾರ ಇಲಾಖೆ ಹಾಗೂ ಕೃಷಿ ಮಾರುಕಟ್ಟೆ ಸಚಿವರಾದ ಶಿವಾನಂದ ಪಾಟೀಲ್, ಅಬಕಾರಿ ಸಚಿವರಾದ ಆರ್.ಬಿ.ತಿಮ್ಮಾಪೂರ ಅವರು ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದು, ವಿಧಾನ ಸಭೆ ಶಾಸಕರಾದ ಲಕ್ಷ್ಮಣ ಸವದಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ಸರ್ಕಾರಿ ಮುಖ್ಯ ಸಚೇತಕರಾದ ಅಶೋಕ ಪಟ್ಟಣ, ನವದೆಹಲಿ ವಿಶೇಷ ಪ್ರತಿನಿಧಿ–2 ಪ್ರಕಾಶ ಹುಕ್ಕೇರಿ, ವಾಯುವ್ಯ ಸಾರಿಗೆ ನಿಗಮ ನಿಯಮಿತ ಅಧ್ಯಕ್ಷರಾದ ಭರಮಗೌಡ ಕಾಗೆ, ರಾಜ್ಯ ಹಣಕಾಸು ಸಂಸ್ಥೆ ಅಧ್ಯಕ್ಷರಾದ ಮಹಾಂತೇಶ ಕೌಜಲಗಿ, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿಗಳು ಹಾಗೂ ವಿಧಾನ ಪರಿಷತ್ ಶಾಸಕರಾದ ಡಾ.ಕೆ.ಗೋವಿಂದರಾಜು ಅವರು ವಿಶೇಷ ಆಮಂತ್ರಿತರಾಗಿ ಆಗಮಿಸಲಿದ್ದಾರೆ.

ಲೋಕ ಸಭೆ ಸಂಸದರಾದ ಅನಂತಕುಮಾರ ಹೆಗಡೆ, ಅಣ್ಣಾಸಾಹೇಬ ಜೊಲ್ಲೆ, ಮಂಗಲ ಸುರೇಶ ಅಂಗಡಿ, ರಾಜ್ಯ ಸಭೆ ಸಂಸದರು ಈರಣ್ಣ ಕಡಾಡಿ, ವಿಧಾನ ಸಭೆ ಶಾಸಕರುಗಳಾದ ರಮೇಶ ಜಾರಕಿಹೊಳಿ, ಬಾಲಚಂದ್ರ ಜಾರಕಿಹೊಳಿ, ದುರ್ಯೋದನ ಐಹೊಳೆ, ಶಶಿಕಲಾ ಜೊಲ್ಲೆ, ಗಣೇಶ ಹುಕ್ಕೇರಿ, ಅಭಯ ಪಾಟೀಲ, ಮಹೇಂದ್ರ ತಮ್ಮಣ್ಣನವರ, ನಿಖಿಲ್ ಕತ್ತಿ, ಆಸೀಫ್ ಸೇಠ್, ವಿಠ್ಠಲ ಹಲಗೇಕರ್, ಬಾಬಾಸಾಹೇಬ ಪಾಟೀಲ್. ವಿಶ್ವಾಸ್ ವೈದ್ಯ, ವಿಧಾನ ಪರಿಷತ್ತ್ ಶಾಸಕರಾದ ಹನಮಂತ ನಿರಾಣಿ, ತಳವಾರ ಸಾಬಣ್ಣ, ಚನ್ನರಾಜ ಹಟ್ಟಿಹೊಳಿ, ಲಖನ ಜಾರಕಿಹೊಳಿ, ಕೊಟ್ಟಲಗಿ ಗ್ರಾಮ ಪಂಚಾಯತಿ ಅಧ್ಯಕ್ಷರಾದ ನೀಲವ್ವಾ ತೇಲಿ ಅವರು ಅತಿಥಿಗಳಾಗಿ ಆಗಮಿಸಲಿದ್ದಾರೆ.

## ಚರ್ಮೋತ್ಪನ್ನ ವಸ್ತುಗಳ ಮೇಲೆ ರಿಯಾಯಿತಿ

ಬೆಳಗಾವಿ: ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿ ಬರುವ ಲಿಡ್‌ಕರ್ ಮಾರಾಟ ಮಳಿಗೆಯಲ್ಲಿ ವಾರ್ಷಿಕ ತ್ರವಳಿ ರಿಯಾಯಿತಿ ಮಾರಾಟ ಪ್ರಯುಕ್ತ ಮಾ.3 ರಿಂದ 27 ರವರೆಗೆ ಚರ್ಮೋತ್ಪನ್ನ ಹಾಗೂ ಎಲ್ಲಾ ದಾಸ್ತಾನುಗಳ ಮೇಲೆ ಶೇಕಡಾ 20 ರಿಂದ 30% ರಷ್ಟು ರಿಯಾಯಿತಿ ನೀಡಲಾಗುತ್ತಿದ್ದು ಸಾರ್ವಜನಿಕರು ಇದರ ಸದುಪಯೋಗ ಪಡೆದಿಕೊಳ್ಳುವಂತೆ ಲಿಡ್‌ಕರ್ ಮಾರಾಟ ಮಳಿಗೆ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕರವಸೂಲಿಗಾರರ, ಕ್ಲರ್ಕ/ಕ್ಲರ್ಕ ಕಂ. ಡೇಟಾ ಎಂಟ್ರಿ ಆಪರೇಟರ್ ತಾತ್ಕಾಲಿಕ ಜೇಷ್ಠತಾ ಪಟ್ಟಿ ಆಕ್ಷೇಪಣೆಗಳ ಪರಿಶೀಲನೆ

ಬೆಳಗಾವಿ: ಜಿಲ್ಲಾ ಪಂಚಾಯತ ಅಧಿನದಲ್ಲಿ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ಇಲಾಖೆಯಲ್ಲಿ 6 ವರ್ಷಗಳಿಗಿಂತ ಅಧಿಕ ಸೇವೆ ಸಲ್ಲಿಸುತ್ತಿರುವ ಕರವಸೂಲಿಗಾರರ, ಕ್ಲರ್ಕ/ಕ್ಲರ್ಕ ಕಂ ಡಾಟಾ ಎಂಟ್ರಿ ಆಪರೇಟರ್‌ಗಳ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಡಿ.31, 2022 ರಂದು ಪ್ರಕಟಿಸಲಾಗಿತ್ತು. ಪ್ರಕಟಿತ ತಾತ್ಕಾಲಿಕ ಜೇಷ್ಠತಾ ಪಟ್ಟಿಗೆ ಒಟ್ಟು 78 ಆಕ್ಷೇಪಣೆಗಳು ಸ್ವೀಕೃತವಾಗಿವೆ.

ತಾಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸಂಬಂಧ ಪಟ್ಟ ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾ–ರಿಗಳಿಗೆ ತಾತ್ಕಾಲಿಕ ಜೇಷ್ಠತಾ ಪಟ್ಟಿಗೆ ಆಕ್ಷೇಪಣೆ ಸಲ್ಲಿಸಿದ ಗ್ರಾಮ ಪಂಚಾಯತ ಕರವಸೂಲಿಗಾರ, ಕ್ಲರ್ಕ/ಕ್ಲರ್ಕ ಕಂ ಡಾಟಾ ಎಂಟ್ರಿ ಅಪರೇಟರಗಳೊಂದಿಗೆ ಮಾ. 6 ರಂದು ಮುಂಜಾನೆ 9 ಗಂಟೆಗೆ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಹಾಜರಾಗುವಂತೆ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿವಾಹಕ ಅಧಿಕಾರಿಗಳು ನಿರ್ದೇಶನ ನೀಡಿರುತ್ತಾರೆ.

ಸದರಿ ದಿನದಂದು ದಾಖಲಾತಿಗಳ ಪರಿಶೀಲನೆಗೆ ಹಾಜರಾಗದೇ ಗೈರು ಹಾಜರ ಉಳಿದ ಸಿಬ್ಬಂದಿಗಳ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲವೆಂದು ಸೂಚನೇ ನೀಡಿದ್ದು, ದಾಖಲಾತಿಗಳ ಪರಿಶೀಲನೆಗೆ ತಪ್ಪು ಮಾಹಿತಿ ಒದಿಗಿಸಿದ್ದಲ್ಲಿ ಅಂತಹ ಸಿಬ್ಬಂದಿಗಳ ವಿರುದ್ಧ ಶಿಸ್ತು ಕ್ರಮ ಜರುಗಿಸಲಾಗುವುದು ಎಂದು ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ಚರ್ಮೋತ್ಪನ್ನ ವಸ್ತುಗಳ ಮೇಲೆ ರಿಯಾಯಿತಿ

ಬೆಳಗಾವಿ: ಕಣಬರಗಿ ಹತ್ತಿರ ಸರಬರಾಜಾಗುವ ಕಚ್ಚಾ ನೀರಿನ 1168 ಎಂ. ಎಂ ಎಮ್. ಎಸ್ ಪೈಪಲೈನಲ್ಲಿ ನೀರು ಸೋ–ರಿಕೆಯಾಗಿರುವುದರಿಂದ ಮಾ. 4 ರಂದು ದುರಸ್ಥಿ ಕೈಗೊಳ್ಳಲಾಗಿದ್ದು, ನಗರದ 24ಘಿ7 ಪ್ರಾತ್ಯಕ್ಷಿಕ ವಲಯಗಳಿಗೆ ಮಾ.4 ರಿಂದ 6 ರವರೆಗೆ ನಗರಕ್ಕೆ ನೀರು ಸರಬರಾಜು ವ್ಯತ್ಯಯ ಉಂಟಾಗಲಿದೆ.

ಆರ್. ಸಿ. ನಗರ ಮೊದಲನೇ ಮತ್ತು ಎರಡನೇ ಹಂತದ ಪ್ರದೇಶಗಳಾದ ಮಜಗಾವಿ, ಟಿಲಕವಾಡಿ, ನಾನಾವಾಡಿ, ವಡಗಾವಿ, ಶಹಾಪೂರ, ಅನಗೋಳ, ಭಾರತನಗರ, ಮೃತ್ಯುಂಜಯ ನಗರ, ರಾಜಾರಾಮನಗರ, ಕಪಿಲೇಶ್ವರ ಕಾಲೋನಿ, ಹಾಗೂ ದಕ್ಷಿಣ ಪ್ರಾತ್ಯಕ್ಷಿಕ ವಲಯ, ಕಣಬರಗಿ, ಕಣಬರಗಿ ಕೆಎಚ್ ಬಿ ಕಾಲೋನಿ, ಶ್ರೀನಗರ, ಚನ್ನಮ್ಮ ಸೋಸೈಟಿ, ಮಹಾಂತೇಶ ನಗರ, ಸೆಕ್ಟರ 5,6,7,8,9,10 ಉಜ್ವಲ ನಗರ, ಅಮನ ನಗರ, ಗಾಂಧಿನಗರ, ಅಲಾರವಾಡ, ಬಸವನಕುಡಚಿ, ದೇವರಾಜ ಅರಸ ಕಾಲೋನಿ, ಅಶೋಕನಗರದ ಕೆಲವು ಪ್ರದೇಶಗಳಾದ ಸುಭಾಷನಗರ, ಬಿ. ಕೆ. ಕಂಗ್ರಾಳಿ, ಉತ್ತರ ಪ್ರಾತ್ಯಕ್ಷಿಕ ವಲಯಗಳಲ್ಲಿ ಸರಬರಾಜು ನೀರು ವ್ಯತ್ಯಯಾಗಲಿದೆ ಎಂದು ಮಹಾನಗರ ಪಾಲಿಕೆ ಮತ್ತು ಕೆ.ಯು.ಐ.ಡಿ ಎಫ್.ಸಿ ಅಧೀಕ್ಷಕರು ಅಭಿಯಂತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಶ್ವದ ಬಲಿಷ್ಠ ಅರ್ಥ ವ್ಯವಸ್ಥೆಯಾಗಿಸುವ ಗುರಿ ಹೊಂದಿದ್ದೇವೆ: ಸಂಸದ ಈರಣ್ಣ ಕಡಾಡಿ




ಬೆಳಗಾವಿ: ಹತ್ತು ವರ್ಷಗಳ ಹಿಂದೆ ಜಗತ್ತಿನಲ್ಲಿ ದುರ್ಬಲ ಆರ್ಥಿಕತೆಯ ರಾಷ್ಟ್ರ ಎಂದೇ ಬಿಂಬಿತವಾಗಿದ್ದ ಭಾರತ, ಈಗ ಪ್ರಧಾನಿ ನರೇಂದ್ರ ಮೋದಿ ಅವರ ದಕ್ಷ, ಸಮರ್ಥ ಆಡಳಿತದ ಪರಿಣಾಮ ಐದನೇ ಶಕ್ತಿಯುತ ರಾಷ್ಟ್ರ ವಾಗಿ ಹೊರಹೊಮ್ಮಿದೆ. ಇದನ್ನು ಮೂರನೇ ಸ್ಥಾನಕ್ಕೆ ಕೊಂಡೊಯ್ಯುವ ಗುರಿ ಹೋಂದಲಾಗಿದೆ ಎಂದು ರಾಜ್ಯಸಭಾ ಸಂಸದ ಈರಣ್ಣ ಕಡಾಡಿ ಹೇಳಿದ್ದಾರೆ.

ಬೆಳಗಾವಿ ಆಂಜನೇಯ ನಗರ (ಕೆ.ಎಂ.ಎಫ್.ಡೇರಿ) ಹತ್ತಿರ ರಾಜ್ಯಸಭಾ ಸಂಸದರ ಸ್ಥಳೀಯ ಪ್ರದೇಶಾಭಿವೃದ್ಧಿ ಅನುದಾನದ 10 ಲಕ್ಷ ರೂಪಾಯಿಗಳ ವೆಚ್ಚದಲ್ಲಿ ನಿರ್ಮಿಸಲಾದ ನೂತನ ಬಸ್ ಪ್ರಯಾಣಿಕರ ತಂಗುದಾಣವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ದೇಶದಲ್ಲಿ ಮೋದಿ ಗ್ಯಾರಂಟಿ ಬಗ್ಗೆ ಮಾತ್ರ ಜನರಿಗೆ ವಿಶ್ವಾಸವಿದೆ. ಉಳಿದ ಗ್ಯಾರಂಟಿಗಳ ಬಗ್ಗೆ ವಿಶ್ವಾಸ ಇಲ್ಲ. ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಯೋಜನೆಯ ಸವಲತ್ತು ತಲುಪಬೇಕು ಎಂಬ ದೃಷ್ಟಿಕೋನದ ಹಿನ್ನಲೆಯಲ್ಲಿ ಪಕ್ಷದ ಧ್ಯೇಯವನ್ನು ಪ್ರಧಾನಿಯವರು ಈಡೇರಿಸಿದ್ದಾರೆ. ದೇಶದ 12 ಕೋಟಿ ರೈತರಿಗೆ ಕಿಸಾನ್ ಸಮ್ಮಾನ ಯೋಜನೆಯಡಿ ಪ್ರತಿ ವರ್ಷ 6 ಸಾವಿರ ರೂಪಾಯಿಗಳನ್ನು ನೀಡಿದ್ದೇವೆ. 4 ಕೋಟಿ ಮನೆ ನಿರ್ಮಾಣ ಮಾಡಿದೆ. 10 ಕೋಟಿ ಮಹಿಳೆಯರಿಗೆ ಉಚಿತ ಉಜ್ವಲಾ ಗ್ಯಾಸ ಸಿಲಿಂಡರ್ ವಿತ–ರಿಸಲಾಗಿದೆ, 12ಕೋಟಿ ಬಡವರ ಮನೆಗಳಿಗೆ ಶೌಚಾಲಯ ನಿರ್ಮಾಣ ಮಾಡಲಾಗಿದೆ, 55 ಕೋಟಿ ಜನರಿಗೆ ಆಯುಷ್ಮಾನ ಭಾರತ ಯೋಜನೆಯಡಿ ರೂ.5ಲಕ್ಷದವರೆಗೆ ಉಚಿತ ಚಿಕಿತ್ಸೆ, ದೇಶದ 81 ಕೋಟಿ ಜನರಿಗೆ ಉಚಿತ ಪಡಿತರ ನೀಡಲಾಗಿದೆ ಎಂದರಲ್ಲದೇ ಮುಂದಿನ 5 ವರ್ಷಗಳವರೆಗೂ ಉಚಿತ ಪಡಿತರ ನೀಡಲಿದ್ದೇವೆ ಎಂದರು.

ಈ ಭಾಗದ ಜನತೆ ಹೊಸ ಬಸ್ ನಿಲ್ದಾಣ ನಿರ್ಮಾಣ ಮಾಡುವಂತೆ ಬೇಡಿಕೆ ಇಟ್ಟಿದ್ದರು. ಆಂಜನೇಯ ನಗರದ ನಿವಾಸಿಗಳಿಗೆ ಉತ್ತಮ ಸೇವೆ ನೀಡುವ ಉದ್ದೇಶದಿಂದ ಈ ಬಸ್ ನಿಲ್ದಾಣ ನಿರ್ಮಿಸಲಾಗುತ್ತಿದೆ. ಈ ಭಾಗದ ಜನ ಇದರ ಸದುಪಯೋಗ ಪಡಿಸಿಕೊಳ್ಳಬೇಕೆಂದರು.

ಈ ಸಂದರ್ಭದಲ್ಲಿ ಮಾಜಿ ಶಾಸಕ ಹಾಗೂ ರಾಜ್ಯ ಬಿಜೆಪಿ ಉಪಾಧ್ಯಕ್ಷರಾದ ಅನೀಲ ಬೆನಕೆ, ನಗರ ಸೇವಕರಾದ ರಾಜಶೇಖರ ದೋಣಿ, ಮುರಘೇಂದ್ರಗೌಡ ಪಾಟೀಲ, ಭಾರತಿ ಮಹಿಳಾ ಅಭಿವೃದ್ಧಿ ಸಂಘ ರಾಜಶ್ರೀ ಅಕ್ಕಿ. ಉಪಾಧ್ಯಕ್ಷರು ವಿದ್ಯಾ ವಡವಡೆ, ಕಾರ್ಯದರ್ಶಿ ಫಡಿಪಾಟೀಲ್ ಸೇ–ರಿದಂತೆ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

## ಜಿತೋ ಫೌಂಡೇಶನ ದಿನಾಚರಣೆ; ವಿವಿಧ ಪ್ರಶಸ್ತಿಗಾಗಿ ಅರ್ಜಿ ಆಹ್ವಾನ

ಬೆಳಗಾವಿ.ಮಾ.4: ಜೈನ ಇಂಟರ್‌ನ್ಯಾಷನಲ್ ಟ್ರೇಡ್ ಆರ್ಗನೈಝೇಶನ ಜಿತೋ ಸಂಸ್ಥೆಯ 18 ನೇ ಫೌಂಡೇಶನ ದಿನಾಚರಣೆಯನ್ನು ಇದೇ ಮಾರ್ಚ 17 ರಂದು ಬೆಳಗಾವಿಯ ಮಿಲೆನಿಯಂ ಗಾರ್ಡನದಲ್ಲಿ ನಡೆಯಲಿದೆ. ಈ ಫೌಂಡೇಶನ ದಿನಾಚರಣೆ ಅಂಗವಾಗಿ ಜೈನ ಸಮಾಜದ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಮಹನೀಯರನ್ನು ಗುರುತಿಸಿ ಅವರಿಗೆ ಪ್ರಶಸ್ತಿ ನೀಡಿ ಗೌರವಿಸಲಾಗುತ್ತಿದ್ದು, ಈ ಪ್ರಶಸ್ತಿಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅಂದು ನಡೆಯುವ ಕಾರ್ಯಕ್ರಮದಲ್ಲಿ ಪ್ರಶಸ್ತಿಗಳನ್ನು ನೀಡಿ ಮಹನೀಯರನ್ನು ಗೌರವಿಸಲಾಗುವುದು. ಯಶಸ್ವಿ ಉದ್ಯಮಿ ಪ್ರಶಸ್ತಿ, ಶಿಕ್ಷಕ ಪ್ರಶಸ್ತಿ, ಸಮಾಜ ಸೇವಕ ಪ್ರಶಸ್ತಿ, ಕಲೆ ಮತ್ತು ಸಾಹಿತ್ಯ ಕ್ಷೇತ್ರದ ಪ್ರಶಸ್ತಿ, ಯುವ ಸಾಧಕ ಪ್ರಶಸ್ತಿ, ಅತ್ಯುತ್ತಮ ಕೃಷಿಕ ಅಥವಾ ರೈತ ಪ್ರಶಸ್ತಿ, ಹೀಗೆ ಒಟ್ಟು 6 ಪ್ರಶಸ್ತಿಗಳನ್ನು ವಿತರಿಸಲಾಗುವುದು.

ಈ ಪ್ರಶಸ್ತಿಗಳಿಗಾಗಿ ಸಂಘ ಸಂಸ್ಥೆಗಳು ಅರ್ಹ ಮಹನೀಯರ ಶೀಫಾರಸ್ಸು ಮಾಡಬಹುದು. ಅದಲ್ಲದೇ ಪ್ರಶಸ್ತಿಗಾಗಿ ಸ್ವಯಂ ಅರ್ಜಿಯನ್ನು ಸಹ ಸಲ್ಲಿಸಬಹುದು. ಮಾರ್ಚ 12 ರೊಳಗೆ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ರಾಜೇಶ ಭೋಸಗಿ ಮೊ:8762484801 ಹಾಗೂ ಉಮೇಶ ನರಸಗೌಡಾ 9035187431 ಇವರನ್ನು ಸಂಪರ್ಕಿಸಬಹುದಾಗಿದೆ ಅಥವಾ ಜಿತೋ ಕಾರ್ಯಾಲಯ ಖಾನಾಪೂರ ರಸ್ತೆ ಉದ್ಯಮಬಾಗ ಇಲ್ಲಿ ಸಂಪರ್ಕಿಸಿ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ಇಂಜೇನಿಯಸ್–2024–ಪ್ರೊಜೆಕ್ಟ ಪ್ರದರ್ಶನ ಮತ್ತು ಪೋಸ್ಟರ ಪ್ರೆಸೆಂಟೇಶನ್




ಬೆಳಗಾವಿ: ನಗರದ ಅಂಗಡಿ ತಾಂತ್ರಿಕ ಹಾಗೂ ವ್ಯವಸ್ಥಾಪನಾ ಮಹಾವಿದ್ಯಾಲಯದ ಕಂಪ್ಯೂಟರ್ ಸೈನ್ಸ ಇಂಜನೀಯರಿಂಗ ಹಾಗೂ ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಷನ್ ಇಂಜನೀಯರಿಂಗ ವಿಭಾಗಗಳ ವತಿಯಿಂದ ರಾಷ್ಟ್ರೀಯ ವಿಜ್ಞಾನ ದಿನದ ಅಂಗವಾಗಿ ಇಂಜೇನಿಯಸ್–2024 – ಪ್ರೊಜೆಕ್ಟ ಪ್ರದರ್ಶನ ಮತ್ತು ಪೋಸ್ಟರ ಪ್ರೆಸೆಂಟೇಶನ್ ಕಾರ್ಯಕ್ರಮ ದಿನಾಂಕ 28 ನೇ ಫೆಬ್ರುವರಿ 2024ರಂದು ನಡೆಯಿತು.

ಕಾಲೇಜಿನ ಕಂಪ್ಯೂಟರ್ ಸೈನ್ಸ ಇಂಜನೀಯರಿಂಗ ವಿಭಾಗದ ಪ್ರಾಧ್ಯಾಪಕಿ ಡಾ. ವೀಣಾ ದೇಸಾಯಿ ಅವರು ಕಾರ್ಯಕ್ರಮವನ್ನು ಉದ್ಘಾಟಿಸಿದರು.

ಈ ಪ್ರಾಜೆಕ್ಟ ಇಕ್ಸಿಬಿಷನ್‌ನ ಮುಖ್ಯ ಉದ್ದೇಶವೇನೆಂದರೆ, ವಿದ್ಯಾರ್ಥಿಗಳಿಗೆ ತಮ್ಮ ಸೃಜನಶೀಲ ಆಲೋಚನೆಗಳನ್ನು ಪ್ರದರ್ಶಿಸಲು ಅವಕಾಶವನ್ನು ಒದಗಿಸುವುದು. ಇದರಿಂದಾಗಿಅವರ ಸೃಜನಶೀಲತೆಯನ್ನು ಉತ್ತಮವಾಗಿ ಪೋಷಿಸಬಹುದು. ಜೊತೆಗೆ ವೇದಿಕೆಯನ್ನು ಒದಗಿಸುವುದು ಮತ್ತುಅವರ ವಿನೂತನ ಯೋಜನೆಗಳನ್ನು ಪ್ರದರ್ಶಿಸುವ ಮೂಲಕ ವಿದ್ಯಾರ್ಥಿಗಳ ಸಾಮರ್ಥ್ಯ ವನ್ನು ಅನಾವರಣ ಗೊಳಿಸುವುದು. 85 ಕ್ಕೂ ಹೆಚ್ಚು ವಿದ್ಯಾರ್ಥಿಗಳ ಪ್ರಾಜೆಕ್ಟಗಳನ್ನು ಜ್ಯೂರಿ ಸದಸ್ಯರಾದಡಾ. ವಿರೂಪಾಕ್ಷಿ ಬಿ. ದಲಾಲ್, ಡೀನ್‌ಅಕ್ಯಾಡೆಮಿಕ್ಸ್ ಮತ್ತು ಅಸೋಸಿಯೆಷಟ ಪ್ರೊಫೆಸರ್, ಜೈನ್‌ತಾಂತ್ರಿಕಕಾಲೇಜಿನ ಪ್ರೊ. ಗಜೇಂದ್ರದೇಶಪಾಂಡೆ, ಸಿಎಸ್ ವಿಭಾಗ, ಎಐಟಿಎಮ್, ಪ್ರೊ. ವೈಭವ್‌ಚವ್ಹಾಣ, ಅವರು ಪ್ರದರ್ಶಿಸಿದರು ಮತ್ತು ಮೌಲ್ಯಮಾಪನ ಮಾಡಿದರು. ಪ್ರಾಜೆಕ್ಟ ಪ್ರದರ್ಶನದ ವಿಜೇತರಿಗೆಟ್ರೋಫಿ ಮತ್ತು ಭಾಗವಹಿಸಿದ ಎಲ್ಲರಿಗೂಅತ್ಯಾಕರ್ಷಕ ನಗದು ಬಹುಮಾನ ಮತ್ತು ಪ್ರಮಾಣಪತ್ರಗಳನ್ನು ನೀಡಿಗೌರವಿಸಲಾಯಿತು.

ಸಂಸ್ಥೆಯ ನಿರ್ದೇಶಕಿಡಾ. ಸ್ಫೂರ್ತಿ ಪಾಟೀಲ, ಆಡಳಿತಾಧಿಕಾರಿ ರಾಜು ಜೋಶಿ, ಪ್ರಾಚಾರ್ಯಡಾ. ಆನಂದದೇಶಪಾಂಡೆ, ಸಿ.ಎಸ್. ವಿಭಾಗದ ಮುಖ್ಯಸ್ಥೆಡಾ. ಧನಶ್ರೀ ಕುಲಕರ್ಣಿ, ಇ.ಸಿ.ಇ. ವಿಭಾಗದ ಮುಖ್ಯಸ್ಥ ಪ್ರೊ. ರವಿರಾಜ ಚೌಗಲಾ ಸೇರಿದಂತೆಎಲ್ಲ ಬೋದಕ ಹಾಗೂ ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಎಸ್‌ಎಸ್‌ಎಲ್‌ಸಿ ಮಕ್ಕಳಿಗೆ ಕಾರ್ಯಾಗಾರ; ಆತ್ಮ ವಿಶ್ವಾಸದಿಂದ ಪರೀಕ್ಷೆ ಎದುರಿಸಿ



ಬೆಳಗಾವಿ: ಹತ್ತನೆ ತರಗತಿ ಎನ್ನುವುದು ವಿದ್ಯಾರ್ಥಿಗಳ ಜೀವನದಲ್ಲಿ ಮುಖ್ಯವಾದ ಸಂಗತಿ, ನಿರಂತರ ಪರಿಶ್ರಮ, ಸರಿಯಾದ ವೇಳಾಪಟ್ಟಿ, ಪರಿಣಾಮಕಾರಿ ಅಧ್ಯಯನ ಮಾಡಿ ಸಕಾರಾತ್ಮಕ ಮನೋಭಾವನೆಯಿಂದ ಹಾಗೂ ಆತ್ಮವಿಶ್ವಾಸದಿಂದ ಪರೀಕ್ಷೆ ಎದುರಿಸಿದರೆ ಯಶಸ್ಸು ಸಾಧ್ಯವಾಗುತ್ತದೆ ಎಂದು ಶ್ರೀ ಸಿದ್ಧರಾಮೇಶ್ವರ ವಿಜ್ಞಾನ ಪದವಿಪೂರ್ವ ಮಹಾವಿದ್ಯಾಲಯದ ಪ್ರಾಚಾರ್ಯರಾದ ಸ್ವಪ್ನಾ ಜೋಶಿ ಅಭಿಪ್ರಾಯಪಟ್ಟರು.

ಡಾ ಸ ಜ ನಾಗಲೋಟಿಮಠ ವಿಜ್ಞಾನ ಕೇಂದ್ರ, ಬೆಳಗಾವಿ, ಶ್ರೀ ಸಿದ್ಧರಾಮೇಶ್ವರ ವಿಜ್ಞಾನ ಪದವಿಪೂರ್ವ ಮಹಾವಿದ್ಯಾಲಯ, ಬೆಳಗಾವಿ, ಜಯಭಾರತ ಫೌಂಢೇಶನ, ಬೆಳಗಾವಿ ಹಾಗೂ ಮಹಿಳಾ ಕಲ್ಯಾಣ ಸಂಸ್ಥೆ, ಬೆಳಗಾವಿ ಜಂಟಿಯಾಗಿ ಬೆಳಗಾವಿ ನಗರದ ಶ್ರೀ ಸಿದ್ಧರಾಮೇಶ್ವರ ವಿಜ್ಞಾನ ಪದವಿಪೂರ್ವ ಮಹಾವಿದ್ಯಾಲಯದಲ್ಲಿ ಎಸ್ ಎಸ್ ಎಲ್ ಸಿ ಮಕ್ಕಳಿಗಾಗಿ ಆಯೋಜಿಸಿದ್ದ ಪ್ರೇರಣಾ ಶಿಬಿರದಲ್ಲಿ ಉದ್ಘಾಟಕರಾಗಿ ಮಾತನಾಡಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಮಹಿಳಾ ಕಲ್ಯಾಣ ಸಂಸ್ಥೆಯ ಗೌರವ ಕಾರ್ಯದರ್ಶಿ ವೈಜಯಂತಿ ಚೌಗಲಾ ಮಾತನಾಡಿ ಪರೀಕ್ಷಾ ದಿನಗಳು ಹತ್ತಿರದಲ್ಲಿದ್ದು ವಿದ್ಯಾರ್ಥಿಗಳು ಮತ್ತು ಪಾಲಕ ಪೋಷಕರು ಒತ್ತಡದಲ್ಲಿರುತ್ತಾರೆ ಪರೀಕ್ಷಾ ಪೂರ್ವದ ಸಿದ್ಧತೆ ಗಟ್ಟಿಯಾಗಿದ್ದರೆ ಪರೀಕ್ಷೆಯು ಆತಂಕವಾಗುವುದಿಲ್ಲ ಕೇವಲ ಅಂಕಗಳನ್ನು ದೃಷ್ಟಿಯಲ್ಲಿಟ್ಟುಕೊಂಡು ಪೋಷಕರಾಗಲಿ, ವಿದ್ಯಾರ್ಥಿಗಳಾಗಲಿ ಪರೀಕ್ಷೆಯನ್ನು ಎದುರಿಸಬಾರದು, ಅಂಕ ಗಳಿಕೆಯೇ ಮುಖ್ಯ ಎಂದು ಭಾವಿಸಬಾರದು ಎಂದರು.

ವಿಷಯ ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿದ್ದ ರಾಜ್ಯ ಸಂಪನ್ಮೂಲ ವ್ಯಕ್ತಿಗಳು ಹಾಗೂ ರಾಜ್ಯ ಶಿಕ್ಷಣ ಸಂಯೋಜ–ಕರಾದ ಪ್ರಕಾಶ ಮಾಸ್ತಿಹೊಳಿ, ಸರಕಾರಿ ಪ್ರೌಢಶಾಲೆ ಮುದಕವಿಯ ವಿಜ್ಞಾನ ಶಿಕ್ಷಕ ವಿ ಬಿ ಹೆಗಡೆ ಯಮಕನಮರಡಿಯ ಸಿ ಇ ಎಸ್ ಪ್ರೌಢಶಾಲೆಯ ಆಂಗ್ಲಭಾಷಾ ಶಿಕ್ಷಕ ಅಜಯ ಉದೋಶಿ, ವಿಜ್ಞಾನ, ಇಂಗ್ಲಿಷ ಹಾಗೂ ಗಣಿತ ವಿಷಯಗಳಲ್ಲಿ ಉತ್ತಮ ಅಂಕ ಗಳಿಕೆ, ಹೆಚ್ಚು ಒತ್ತು ನೀಡಿ ಅಭ್ಯಾಸ ಮಾಡಬೇಕಾದ ಅಧ್ಯಾಯಗಳು, ಉತ್ತರ ಬಿಡಿಸುವಿಕೆ ಮುಂತಾದವುಗಳ ಬಗ್ಗೆ ಮಕ್ಕಳಿಗೆ ಮನವರಿಕೆ ಮಾಡಿದರು.

ಕಾರ್ಯಕ್ರಮದಲ್ಲಿ ಜಯಭಾರತ ಫೌಂಡೇಶನದ ನಿರ್ದೇಶಕರುಗಳಾದ ಬಸನಗೌಡಾ ಪಾಟೀಲ, ದಯಾನಂದ ಕದಮ, ಮಹಿಳಾ ಕಲ್ಯಾಣ ಸಂಸ್ಥೆಯ ಸಂಯೋಜಕ ಎಂ ಎಸ್ ಚೌಗಲಾ, ಸುರೇಖಾ ಪಾಟೀಲ ಉಪಸ್ಥಿತರಿದ್ದರು. ಪ್ರಾರಂಭದಲ್ಲಿ ಕರ್ನಾಟಕ ಪಬ್ಲಿಕ ಶಾಲೆಯ ಪ್ರಾಚಾರ್ಯ ಕಿರಣ ಚೌಗಲಾ ಪ್ರಾಸ್ತಾವಿಕವಾಗಿ ಮಾತನಾಡಿದರು ಶಂಕರ ಕತ್ತಿ ನಿರೂಪಿಸಿ ವಂದಿಸಿದರು, ವಿವಿಧ ಶಾಲೆಗಳ 100 ಕ್ಕೂ ಹೆಚ್ಚು ವಿದ್ಯಾರ್ಥಿಗಳು ಪ್ರೇರಣಾ ಶಿಬಿರದ ಲಾಭ ಪಡೆದುಕೊಂಡರು.

## ಮಹಿಳೆ ನಾಪತ್ತೆ

ಬೆಳಗಾವಿ: ಬೆಳಗಾವಿ ಜಿಲ್ಲೆಯ ಗೋಕಾಕ ತಾಲೂಕಿನ ಉದಗಟ್ಟಿ ಗ್ರಾಮದ ಪ್ರಿಯಂಕಾ ಬಾಳಪ್ಪ ತುರಬಿ (20) ಎಂಬ ಯುವತಿ ಫೆ. 29 ರಂದು ಮನೆಯಿಂದ ಕಾಣೆಯಾದ ಬಗ್ಗೆ ಗೋಕಾಕ ಕುಲಗೋಡ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿರುತ್ತದೆ.

ಚಹರೆ;

ವಯಸ್ಸು 20 ವರ್ಷ, ಎತ್ತರ 5 ಪೂಟ, ಮೈಯಿಂದ ಸದೃಡ, ಗೋದಿಗೆಂಪು ಮೈಬಣ್ಣ, ಉದ್ದ



ಮುಖ,ಬಿಳಿ ಬಣ್ಣ ನೀಲಿ ಚುಕ್ಕೆ ಇರುವ ಟಾಪ್, ನೀಲಿ ಬಣ್ಣದ ಒಡನಿ ಮತ್ತು ನೀಲಿ ಬಣ್ಣದ ಪ್ಯಾಂಟ ಧರಿಸಿರುತ್ತಾಳೆ. ಕನ್ನಡ ಮಾತನಾಡಲು ಬರುತ್ತದೆ.

ಸದರಿ ಮಹಿಳೆ ಕಂಡು ಬದಂಲ್ಲಿ, ಮಾಹಿತಿ ದೂರೆತಲ್ಲಿ, ಗೋಕಾಕ ತಾಲೂಕಿನ ಕುಲಗೋಡ ಪೊಲೀಸ್ ಠಾಣೆಗೆ ಸಂಪರ್ಕಿಸಬೇಕು ಎಂದು ಆರಕ್ಷ ಉಪ ನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

ಶಿವಮೊಗ್ಗ: ತೋಟಗಾರಿಕೆ ಇಲಾಖೆಯು 2024–25 ನೇ ಸಾಲಿನಲ್ಲಿ ರೈತರ ಮಕ್ಕಳಿಗಾಗಿ ನಡೆಸುವ 10 ತಿಂಗಳ ತರಬೇತಿಯನ್ನು ಉತ್ತರ ಕನ್ನಡ ಜಿಲ್ಲೆಯ ಸಿದ್ದಾಪುರ ತಾಲೂಕಿನ ಹೊಸೂರು ತೋಟಗಾರಿಕ ತರಬೇತಿ ಕೇಂದ್ರದಲ್ಲಿ ಆಯೋಜಿಸಿದ್ದು, ಶಿವಮೊಗ್ಗ ಜಿಲ್ಲೆಯ ಆಸಕ್ತ ರೈತರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆಸಕ್ತರು ನಿಗದಿತ ನಮೂನೆ ಅರ್ಜಿಗಳನ್ನು ತೋಟಗಾರಿಕೆ ಇಲಾಖೆಯ ವೆಬ್ ಸೈಟ್ https://horticulturedir.karnataka.gov.in ನಿಂದ ಡೌನ್ಲೋಡ್ ಮಾಡಿಕೊಂಡು ಅಥವಾ ಶಿವಮೊಗ್ಗ ಜಿಲ್ಲೆಯ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಶಿವಮೊಗ್ಗ ಕಛೇರಿಯಿಂದ ಅಥವಾ ಆಯಾ ತಾಲೂಕಿನ ತೋಟಗಾರಿಕೆ ಕಛೇರಿಯಿಂದ ಪಡೆದು, ಭರ್ತಿ ಮಾಡಿದ ಅರ್ಜಿಯೊಂದಿಗೆ ಸೂಕ್ತ ದಾಖಲೆಗಳನ್ನು ಏ.01 ರೊಳಗಾಗಿ ಆಯಾ ಸಂಬಂಧ ಪಟ್ಟ ಕಛೇ–ರಿಗಳಿಗೆ ಸಲ್ಲಿಸುವಂತೆ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ. ತರಬೇತಿಗೆ ಅರ್ಹತೆಗಳು ಎಸ್.ಎಸ್.ಎಲ್.ಸಿಯಲ್ಲಿ ಉತ್ತೀರ್ಣರಾಗಿರಬೇಕು ಹಾಗೂ ಅಭ್ಯರ್ಥಿಯ ತಂದೆ/ತಾಯಿ/ಪೋಷಕರು ಕಡ್ಡಾಯವಾಗಿ ಜಮೀನು ಹೊಂದಿದ್ದು, ಸ್ವಂತ ಸಾಗುವಳಿ ಮಾಡುತ್ತಿರಬೇಕು.

## ಡಾ. ಜೋರಾಪೂರವರ 'ಕರ್ನಾಟಕದ ಇತಿಹಾಸ' ಕೃತಿ ಲೋಕಾರ್ಪಣೆ




ಬೆಳಗಾವಿ: 'ಕರ್ನಾಟಕದ ಇತಿಹಾಸ–ಒಂದು ಇಣುಕು ನೋಟ' ಕೃತಿಯು, ಕರ್ನಾಟಕ ಇತಿಹಾಸ ಕುರಿತು ಬರೆಯುವ ಸಂಶೋಧಕರಿಗೆ ಒಂದು ದಿಕ್ಸೂಚಿಂ–ಯಾಗಿದೆ. ಕೃತಿಕಾರ ಡಾ. ಜೋರಾಪೂರ ಅವರಿಗೆ ದೇಶ ತಿರುಗುವುದರ ಜೊತೆಗೆ ಆ ಕುರಿತು ಅಭ್ಯಸಿಸಿ ಧಾಖಲಿಸುವ ಗುಣವಿದೆ ಎಂದು ಡಾ. ಸಿದ್ಧರಾಮ ಮಹಾಸ್ವಾಮಿಗಳು ಇಂದಿಲ್ಲಿ ಹೇಳಿದರು.

ನಗರದ ನಾಡಹಬ್ಬ ಉತ್ಸವ ಸಮಿತಿ ಹಾಗೂ ಪ್ರಹ್ಲಾದ ಪ್ರಕಾಶನ ಇವರ ಸಂಯುಕ್ತ ಆಶ್ರಯದಲ್ಲಿ ನಿನ್ನೆ ದಿ. 3 ರವಿವಾರದಂದು ಮಧ್ಯಾಹ್ನ 3 ಗಂಟೆಗೆ ಶಿವಬಸವನಗರದಲ್ಲಿರುವ ಎಸ್. ಜಿ. ಬಾಳೇಕುಂದ್ರಿ ತಾಂತ್ರಿಕ ಮಹಾವಿದ್ಯಾಲಯ ಸಭಾಗೃಹದಲ್ಲಿ ಹಿರಿಯ ಲೇಖಕ ಡಾ. ಸಿ. ಕೆ. ಜೋರಾಪೂರ ರಚಿಸಿದ 'ಕರ್ನಾಟಕದ ಇತಿಹಾಸ' ಒಂದು ಇಣುಕುನೋಟ ಕೃತಿ ಲೋಕಾರ್ಪಣೆಗೊಂಡಿತು ಸಾನಿಧ್ಯವನ್ನು ವಹಿಸಿದ್ದ ಗದಗದ ತೋಂಟದಾರ್ಯ ಮಠದ ಡಾ. ಸಿದ್ಧರಾಮ ಮಹಾಸ್ವಾಮಿಗಳು ಮೇಲಿನಂತೆ ಅಭಿಪ್ರಾಯಪಟ್ಟರು.

ಮುಂದೆ ಮಾತನಾಡುತ್ತ ಸ್ವಾಮೀ–ಜಿಯವರು ಕರ್ನಾಟಕದ ಸಾಂಸ್ಕೃತಿಕ ಇತಿಹಾಸ, ಕರ್ನಾಟಕದ ಭೌಗೋಳಿಕ ಇತಿಹಾಸ ಮುಂತಾದ ವಿಷಯಗಳ ಕು–ರಿತಾದ ಡಾ. ಸಿ. ಕೆ. ಜೋರಾಪೂರ ಅವ–ರಿಂದ ಇನ್ನಷ್ಟು ಕೃತಿಗಳು ಹೊರಬರಲಿ ಓದುಗರಿಗೆ ಸಿಗುವಂತಾಗಲಿ ಎಂದು ಹಾರೈಸಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಸಾರ್ವಜನಿಕ ಗ್ರಂಥಾಲಯ ಇಲಾಖೆ, ಬೆಂಗಳೂರು ನಿರ್ದೇಶಕರಾದ ಡಾ. ಸತೀಶ ಹೊಸಮನಿ, ನಾವು ಅಂತರ್ಜಾಲ ವಾಚನಾಲಯಗಳನ್ನು ಪಾರಂಭಿಸಿದ್ದು ಯಾವುದೇ ಶುಲ್ಕವಿಲ್ಲದೇ ಚಂದಾದಾರರಾಗಬಹುದು. ಈ ವಾಚನಾಲಯದಲ್ಲಿ ನಾಟಕ, ಕತೆ, ಕಾದಂಬರಿ, ಪ್ರಬಂಧ ಹೀಗೆ ಸಾಹಿತ್ಯದ ಎಲ್ಲ ಪ್ರಕಾರಗಳನ್ನು ಮನೆಯಲ್ಲಿಯೇ ಕುಳಿತು ಓದಬಹುದಾಗಿದ್ದು ಎಲ್ಲರಿಗೂ ಸದಸ್ಯರಾಗಿ ಓದುವ ಸಂಸ್ಕೃತಿಯನ್ನು ಉಳಿಸಿ ಎಂದು ವಿನಂತಿಸಿಕೊಂಡರು.

ಕೃತಿಕಾರ ಡಾ. ಸಿ. ಕೆ. ಜೋರಾಪೂರ ಅವರು ಮಾತನಾಡಿ ಬೆಳಗಾವಿ ಸಾಹಿತ್ಯ ಕ್ಷೇತ್ರವು ಜಾತಿ, ಮತ ಗುಂಪುಗಾ–ರಿಕೆಯಿಂದ ಕೂಡಿದ್ದು ಒಬ್ಬನು ಬೆಳೆದರೆ ಮತ್ತೊಬ್ಬನಿಗೆ ಸಹನೆಯಿಲ್ಲ. ಸರಿಯಾದ ವ್ಯಕ್ತಿಗೆ ಸಿಗದ ಪ್ರೋತ್ಸಾಹ, ಗೌರವ ಸಾಹಿತ್ಯಕ್ಷೇತ್ರದ ಹಿನ್ನಡೆಗೆ ಕಾರಣವಾಗಿದೆ ಎಂದು ವಿಷಾದ ವ್ಯಕ್ತ ಪಡಿಸಿದರು.

ಕೃತಿಯನ್ನು ಪರಿಚಯಿಸಿದ ಸಂಗೊಳ್ಳಿ ರಾಯಣ್ಣ ಪ್ರಥಮ ದರ್ಜೆ ಮಹಾವಿದ್ಯಾಲಯದ ಉಪನ್ಯಾಸಕಿ ಡಾ. ರಾಧಾ ಬಿ. ಆರ್. ಅವರು ಮಾತನಾಡುತ್ತ ಇತಿಹಾಸಕ್ಕೆ ಒಂದು ಮಹಾಕಾವ್ಯಕ್ಕೆ ಇರುವಂತಹ ಮೌಲ್ಯವಿದೆ. ಇತಿಹಾಸವಿಲ್ಲದೇ ಆದರ್ಶವಿಲ್ಲ. ಇತಿಹಾಸ ಕೇವಲ ಸಂಶೋಧನೆಗೆ ಅಲ್ಲ ಮುಂದಿನ ಜೀವನದ ಮಾರ್ಗವಾಗಿದೆ. ಇತಿಹಾಸದಲ್ಲಿ ಪದವಿಯನ್ನು ಪಡೆದಿರುವ ಡಾ. ಸಿ. ಕೆ. ಜೋರಾಪುರ ಅವರು ಈ ಕೃತಿಯನ್ನು ಸಾಮಾನ್ಯ ಮನುಷ್ಯನಿಗೂ ತಿಳಿಯುವಂತೆ ಎಳೆ ಎಳೆಯಾಗಿ ಬಿಚ್ಚಿಟ್ಟಿದ್ದಾರೆ ಎಂದು ಹೇಳಿದರು.

ಡಾ, ಎಚ್. ಬಿ. ರಾಜಶೇಖರ ಅಧ್ಯಕ್ಷತೆಯನ್ನು ವಹಿಸಿದ್ದರು. ಕಾರಂಜಿಮಠದ ಪೂಜ್ಯರಾದ ಗುರುಸಿದ್ಧ ಮಹಾಸ್ವಾಮಿಗಳು, ಮಹಾಂತೇಶ ವಕ್ಕುಂದ ಮಾತನಾಡಿದರು. ಎಂ. ಬಿ. ಝಿರಲಿ, ಪ್ರೊ. ಎಂ. ಎಸ್. ಇಂಚಲ, ಕೇದಾರನಾಥ ಜೋರಾಪೂರ, ಪ್ರಹ್ಲಾದ ಜೋರಾಪುರ, ಆರ್.ಪಿ. ಪಾಟೀಲ, ಆನಂದ ಪುರಾಣಿಕ ಮುಂತಾದವರು ಉಪಸ್ಥಿತರಿದ್ದರು.

ಗ್ರಂಥದಾಸೋಹಿ ಆರ್. ಪಿ. ಪಾಟೀಲ ದಂಪತಿಗಳು, ಕನ್ನಡ ಹೋರಾಟಗಾರ ಬಾಸೂರು ತಿಪ್ಪೇಸ್ವಾಮಿ, ಕಿತ್ತೂರ ಸಂಸ್ಥಾನ ಸಂಬಂಧಿಗಳಾದ ಸೋಮಶೇಖರ ದೇಸಾಯಿ, ಅಶೋಕ ದೇಸಾಯಿ, ಶಂಕರಗೌಡ ಪಾಟೀಲ, ಬಾಬಾಗೌಡಾ ಪಾಟೀಲ, ಸಿದ್ಧನಗೌಡ ಪಾಟೀಲ, ಸೋಮನಗೌಡ ಪಾಟೀಲ ಇವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಶ್ರೀಮತಿ ಭುವನೇಶ್ವರಿ ವೆಂಕಟೇಶ ಶಹಪೂರಕರ ಅವರ ವೇದ ಪಠಣ ಮತ್ತು ವಚನದೊಂದಿಗೆ ಕಾರ್ಯಕ್ರಮ ಪ್ರಾರಂಭವಾಯಿತು. ಸೋಮಲಿಂಗ ಮಾವಿನಕಟ್ಟಿ ಸ್ವಾಗತಿಸಿದರು. ಬಸವರಾಜ ಗಾರ್ಗಿ ವಂದಿಸಿದರು. ಅನ್ನಪೂರ್ಣಾ ಹಿರೇಮಠ ನಿರೂಪಿಸಿದರು.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089